ಸಂಪುಟ: ೦೭/ ಸಂಚಿಕೆ: ೧೪೩/ಮಂಗಳವಾರ ದಿನಾಂಕ : ೨೨-೦೭-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 143/ TUESDAY Date : 22-07-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಶುದ್ಧ ಕುಡಿಯುವ ನೀರಿನ ಯೋಜನೆಯು ಸುಮಾರು 17.50 ಲಕ್ಷ ಜನರ ಆರೋಗ್ಯ ಕಾಪಾಡುವ ಉತ್ತಮ ಯೋಜನೆ : ಮುಖ್ಯಮಂತ್ರಿ

ತುಮಕೂರು(ಪಾವಗಡ) : ತುಂಗಭದ್ರಾ ಜಲಾಶಯದ ಹಿನ್ನರಿನಿಂದ ಪಾವಗಡ ತಾಲೂಕು ಮತ್ತು ಪಟ್ಟಣ ವ್ಯಾಪ್ತಿಯ ಶುದ್ಧ ಕುಡಿಯುವ ನೀರಿನ ಯೋಜನೆಯು ಸುಮಾರು 17.50 ಲಕ್ಷ ಜನರ ಆರೋಗ್ಯವನ್ನು ಕಾಪಾಡುವ ಉತ್ತಮ ಯೋಜನೆಯಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ತುಮಕೂರಿನ ಪಾವಗಡದಲ್ಲಿ ತುಂಗಭದ್ರಾ ಜಲಾಶಯದ ಹಿನ್ನರಿನಿಂದ ಪಾವಗಡ ತಾಲೂಕು ಮತ್ತು ಪಟ್ಟಣ ವ್ಯಾಪ್ತಿಯ ಬಹುಗ್ರಾಮ ಕುಡಿಯುವ ನೀರಿನ ಸರಬರಾಜು ಯೋಜನೆಯ ಉದ್ಘಾಟನೆ ಮತ್ತು 2250 ಮೆಗಾವ್ಯಾಟ್ ಸೋಲಾರ್ ಪ್ಲಾಂಟ್ ನಿರ್ಮಾಣದ ಘೋಷಣೆ ಹಾಗೂ ಪಾವಗಡ ವಿಧಾನಸಭಾ ಕ್ಷೇತ್ರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಮಾಡಿ ನಂತರ ಸರ್ಕಾರಿ ಇಲಾಖೆಗಳ ವಿವಿಧ ಯೋಜನೆಗಳ ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಿ ಮಾತನಾಡಿದರು.

**ಫ್ಲೋರೈಡ್ ಯುಕ್ತ ನೀರಿನಿಂದ ಮುಕ್ತಿ :**

2018ರ ಜನರಿಯಲ್ಲಿ ಪಾವಗಡ ಮತ್ತಿತರ ಐದು ತಾಲ್ಲೂಕುಗಳಿಗೆ ಅನುಕೂಲ ಕಲ್ಪಿಸುವ ಕುಡಿಯುವ ನೀರಿನ ಯೋಜನೆಗೆ ಇಂದು ಚಾಲನೆ ನೀಡಲಾಗಿದೆ. ಇಲ್ಲಿನ ಜನರು ಫ್ಲೋರೈಡ್ ಯುಕ್ತ ನೀರನ್ನು ಕುಡಿಯುವ ಅನಿವಾರ್ಯತೆ ಇತ್ತು. ಇದರಿಂದ ಜನರಿಗೆ ಆರೋಗ್ಯದ ತೊಂದರೆಗಳಿಗೆ ಒಳಗಾಗುತ್ತಿದ್ದರು. ಈ ಸಮಸ್ಯೆಯಿಂದ ಜನರನ್ನು ಹೊರತೆಗೆಯಲು ಸುಮಾರು 200 ಕಿ.ಮೀ. ನಷ್ಟು ದೂರವಿರುವ ತುಂಗಭದ್ರಾ ಜಲಾಶಯದ ಹಿನ್ನೀರನ್ನು ಪಾವಗಡಕ್ಕೆ ತರುವ ಯೋಜನೆಗೆ ಚಾಲನೆ ನೀಡಲಾಗಿದೆ. ಹಿಂದಿನ ಅವಧಿಯಲ್ಲಿಯೂ ಕಾಂಗ್ರೆಸ್ ಸರ್ಕಾರವೇ ಅಧಿಕಾರದಲ್ಲಿದ್ದಿದ್ದರೇ, ಈ ಯೋಜನೆಯನ್ನು ಮೂರು ವರ್ಷಗಳ ಮುಂಚೆಯೇ ಪೂರ್ಣಗೊಳಿಸಬಹುದಾಗಿತ್ತು ಎಂದರು. 2050ರವರೆಗೆ ಈ ಯೋಜನೆಯ ಲಾಭವನ್ನು ಜನರು ಪಡೆಯಬಹುದಾಗಿದೆ. ಈ ಯೋಜನೆಯಿಂದ ಸುಮಾರು 17.50 ಲಕ್ಷ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಿದಂತಾಗುತ್ತದೆ. ಶುದ್ಧ ಕುಡಿಯುವ ನೀರಿನ ಯೋಜನೆಯಿಂದ ಜನರು ಅಂಗವೈಕಲ್ಯತೆಯಂತಹ ಗಂಭೀರ ಆರೋಗ್ಯ ಸಮಸ್ಯೆಗಳಿಂದ ಪಾರಾಗಿದ್ದಾರೆ.



ಪಾವಗಡ ತಾಲ್ಲೂಕಿನ 270 ಹಳ್ಳಿಗಳಿಗೆ ಮತ್ತು ಪಾವಗಡ ಪಟ್ಟಣಕ್ಕೆ ಈ ಯೋಜನೆಯಿಂದ ಶುದ್ಧ ಕುಡಿಯುವ ನೀರನ್ನು ಪೂರೈಸಲಾಗುತ್ತದೆ. ಈ ಯೋಜನೆಗೆ ಹಗಲಿರುಳು ದುಡಿದ ಸಚಿವರು ಹಾಗೂ ಶಾಸಕರ ಪ್ರಯತ್ನಗಳು ಇಂದು ಫಲಿಸಿದೆ ಎಂದರು.

ಈ ಯೋಜನೆಗೆ ಶಂಕುಸ್ಥಾಪನೆ ಹಾಗೂ ಉದ್ಘಾಟನೆಯನ್ನು ನೆರವೇರಿಸುವ ಸುಯೋಗ ನನಗೆ ದೊರೆತಿರುವುದು ಸಂತೋಷ ತಂದಿದೆ ಎಂದರು.

**ಸುಳ್ಳು ಪ್ರಚಾರದಲ್ಲಿ ತೊಡಗಿರುವ ಬಿಜೆಪಿ :**

ಕಾಂಗ್ರೆಸ್ ಸರಕಾರದ ಮೇಲೆ ಸುಳ್ಳು ಅಪವಾದಗಳನ್ನು ಮಾಡುವ ಬಿಜೆಪಿಯವರು ಕರ್ನಾಟಕದಲ್ಲಿ ಇಂತಹ ಜನೋಪಯೋಗಿ ಯೋಜನೆಯನ್ನು ಜಾರಿಗೆ ತಂದಿದ್ದಾರೆಯೇ? ಜನರನ್ನು ತಪ್ಪುದಾರಿಗೆ ಎಳೆಯುವಂತಹ ಸುಳ್ಳು ಪ್ರಚಾರದಲ್ಲಿ ಬಿಜೆಪಿ ತೊಡಗಿದೆ. ಬಿಜೆಪಿಯವರು ರಾಜ್ಯದಲ್ಲಿ 9 ವರ್ಷಗಳು ಅಧಿಕಾರಿದಲ್ಲಿದ್ದರೂ ಇಂತಹ ಯೋಜನೆಯನ್ನು ಜಾರಿಗೆ ತರಲು ಸಾಧ್ಯವಾಗಿಲ್ಲ. ಕಾಂಗ್ರೆಸ್ ಸರ್ಕಾರ ಗ್ಯಾರಂಟಿಗಳನ್ನು ಜಾರಿ ಮಾಡಿದರೆ, ರಾಜ್ಯ ದಿವಾಳಿಯಾಗುತ್ತದೆ ಎಂದು ಪ್ರದಾನಿ ಮೋದಿಯವರು ಟೀಕಿಸಿದರು. ರಾಜ್ಯದ ಬಿಜೆಪಿಯವರ ಸಾಧನೆ ಏನು ಎಂದು ಪ್ರಶ್ನಿಸಿದರು.

**ಏಷ್ಯಾದಲ್ಲಿ ನಂ.1 ವಿದ್ಯುತ್ ಉತ್ಪಾದನೆ ಘಟಕ :**

ಪಾವಗಡದಲ್ಲಿ ವಿದ್ಯುತ್ ಉತ್ಪಾದನೆ ಪ್ಲಾಂಟ್ ಏಷ್ಯಾದಲ್ಲೇ ನಂ.1 ಆಗಿದೆ.ಈಗಾಗಲೇ 2050 ಮೆ.ವ್ಯಾ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದ್ದು , ಮುಂದಿನ ಎರಡು ತಿಂಗಳಲ್ಲಿ 2400 ಮೆ. ವ್ಯಾಟ್ ವಿದ್ಯುತ್ ಉತ್ಪಾದನೆಯಾಗಲಿದ್ದು, ಇದರಿಂದ ಪಾವಗಡದ ಚಿತ್ರಣವೇ ಬದಲಾಗಲಿದೆ. ನಂಜುಂಡಪ್ಪ ವರದಿಯಲ್ಲಿ ಪಾವಗಡವನ್ನು ಅತ್ಯಂತ ಹಿಂದುಳಿದ ತಾಲ್ಲೂಕು ಎಂದು ಗುರುತಿಸಲ್ಪಟ್ಟಿತ್ತು. ಈಗ ತುಮಕೂರಿನ ತಾಲ್ಲೂಕಿನ ಪಟ್ಟಿಯಲ್ಲಿ ಪಾವಗಡ ಮೊದಲನೇ ಸ್ಥಾನದಲ್ಲಿದ್ದು, ಈ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರವೇ ಕಾರಣ. ಈ ಭಾಗಕ್ಕೆ ಸೇರಿದ ಕಾಂಗ್ರೆಸ್ ನ ಸಚಿವರು ಹಾಗೂ ಶಾಸಕರಿಗೆ ಜನರು ಸದಾ ಆಶೀರ್ವಾದ ಮಾಡಬೇಕು ಎಂದರು.

**ತೆರಿಗೆ ಪಾಲಿನ ಬಗ್ಗೆ ಬಿಜೆಪಿ ಜೆಡಿಎಸ್ ಸಂಸದರು ಕೇಂದ್ರವನ್ನು ಪ್ರಶ್ನಿಸುತ್ತಿಲ್ಲ :**

ಕರ್ನಾಟಕದಿಂದ ಪ್ರತಿ ವರ್ಷ 4.50 ಲಕ್ಷ ಕೋಟಿ ತೆರಿಗೆ ಕೇಂದ್ರ ಸರ್ಕಾರಕ್ಕೆ ತಲುಪುತ್ತಿದ್ದು, ಅದರಲ್ಲಿ ಕೇವಲ 65 ಸಾವಿರ ಕೋಟಿ ರೂ. ಮಾತ್ರ ರಾಜ್ಯಕ್ಕೆ ಮರಳಿ ಬರುತ್ತಿದೆ. ಇದನ್ನು ಯಾವುದೇ ಜೆಡಿಎಸ್ ಹಾಗೂ ಬಿಜೆಪಿ ಸಂಸದರು , ಕೇಂದ್ರವನ್ನು ಪ್ರಶ್ನಿಸುತ್ತಿಲ್ಲ. ಕಳೆದ ವಿಧಾನಸಭೆ ಚುನಾಣೆಯಲ್ಲಿ 136 ಸ್ಥಾನಗಳನ್ನು ಕಾಂಗ್ರೆಸ್ ಗೆದ್ದ ಪರಿಣಾಮ, ಜೆಡಿಎಸ್ ನವರು ಬಿಜೆಪಿಯೊಂದಿಗೆ ಮೈತ್ರಿ ಹೊಂದಿ ಲೋಕಸಭಾ ಚುನಾವಣೆಯನ್ನು ಎದುರಿಸುವ ದುಸ್ಥಿತಿ ಬಂತು. ಜೆಡಿಎಸ್ ನವರ ಶಕ್ತಿ ಇಲ್ಲಿ ಕುಂದುತ್ತಿದೆ. 2004ರಲ್ಲಿ ನಾನು ಜೆಡಿಎಸ್ ನಲ್ಲಿದ್ದಾಗ, ಜೆಡಿಎಸ್ ಪಕ್ಷ 59 ಸ್ಥಾನಗಳನ್ನು ಗೆದ್ದಿತ್ತು, ಆದರೆ ಹಿಂದಿನ ಚುನಾವಣೆಯಲ್ಲಿ ಅವರು ಕೇವಲ 18 ಸ್ಥಾನಗಳನ್ನು ಗೆದ್ದರು. ಪಾವಗಡ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷ ಗೆಲ್ಲಲು ಸಾಧ್ಯವಿಲ್ಲ. ಕಾಂಗ್ರೆಸ್ ನವರ ಗ್ಯಾರಂಟಿ ಯೋಜನೆಗಳು , ಬಿಜೆಪಿ ಹಾಗೂ ಜೆಡಿಎಸ್ ನ್ನು ಕಂಗೆಡಿಸಿದೆ ಎಂದು ಹೇಳಿದರು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ತಕ್ಷಣ ಜಾರಿಗೊಳಿಸಿದ್ದ ಶಕ್ತಿ ಯೋಜನೆಯಲ್ಲಿ, ಇದುವರೆಗೆ ಸುಮಾರು 500 ಕೋಟಿ ಮಹಿಳೆಯರು ಈ ಯೋಜನೆಯ ಲಾಭ ಪಡೆದಿದ್ದಾರೆ. ಗೃಹ ಜ್ಯೋತಿ ಯೋಜನೆಯಡಿ,1.64 ಕೋಟಿ ಕುಟುಂಬಗಳು ಲಾಭ ಪಡೆಯುತ್ತಿದೆ. ಅನ್ನಭಾಗ್ಯ ಯೋಜನೆಯಡಿ 10 ಕೆಜಿ ಅಕ್ಕಿಯನ್ನು ನೀಡಿ, ರಾಜ್ಯ ಹಸಿವುಮುಕ್ತವಾಗಬೇಕೆನ್ನುವುದು ನಮ್ಮ ಸರ್ಕಾರದ ಗುರಿಯಾಗಿದೆ ಎಂದರು.

**ಸರ್ಕಾರದ ಯೋಜನೆಗಳನ್ನು ಒಂದು ಪಕ್ಷ, ಒಂದು ಜಾತಿ, ಧರ್ಮಕ್ಕೆ ನೀಡಿಲ್ಲ :**

ನಮ್ಮ ಸರ್ಕಾರ ಒಂದು ಧರ್ಮದ ಪರವಾಗಿ ಮಾತನಾಡಿಲ್ಲ. ಅಕ್ಕಿ, ಕರೆಂಟ್, ಶಕ್ತಿ, ಯೋಜನೆಯನ್ನು ಬಿಜೆಪಿಯ ಬಡವರಿಗೂ ನೀಡಲಾಗಿದೆ. ಒಂದು ಪಕ್ಷಕ್ಕೆ, ಒಂದು ಜಾತಿ, ಧರ್ಮಕ್ಕೆ ನೀಡಿಲ್ಲ. ರಾಜ್ಯ ಸರ್ವತೋಮುಖ ಅಭಿವೃದ್ಧಿಯಾಗಬೇಕು. ಹಿಂದುಳಿದ ತಾಲ್ಲೂಕುಗಳು ಮುಂದುವರೆಯಲು ಈ ಎಲ್ಲಾ ಕಾರ್ಯಕ್ರಮಗಳಿಂದ ಸಾಧ್ಯವಾಗಿದೆ. ಕರ್ನಾಟಕದ 240 ತಾಲ್ಲೂಕು, 224 ವಿಧಾನಸಭಾ ಕ್ಷೇತ್ರಗಳಿಗೆ ಎಲ್ಲಾ ಕಾರ್ಯಕ್ರಮಗಳನ್ನು ಒದಗಿಸಲಾಗುತ್ತಿದೆ ಎಂದರು.

**2028ರ ಚುನಾವಣೆಯಲ್ಲಿ ಮತ್ತೆ ಬಿಜೆಪಿ, ಜೆಡಿಎಸ್ ಅನ್ನು ಸೋಲಿಸಿ ಪುನಃ ಅಧಿಕಾರಕ್ಕೆ ಬಂದೇ ಬರುತ್ತೇವೆ :**

2028 ರಲ್ಲಿಯೂ ನಾವೇ ಅಧಿಕಾರಕ್ಕೆ ಬರುವುದಾಗಿ ಹೇಳಿದ ಅವರು, ಬಿಜೆಪಿ ತಿಪ್ಪರಲಾಗ ಹಾಕಿದರೂ ಅಧಿಕಾರಕ್ಕೆ ಬರುವುದಿಲ್ಲ. ಚರ್ಚೆಗೆ ಕರೆದರೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಚುನಾವಣೆ ಮಾಡುವಂತೆ ಹೇಳುತ್ತಾರೆ. ಐದು ವರ್ಷಗಳ ಕಾಲ ನಮ್ಮ ಸರ್ಕಾರ ಅಧಿಕಾರದಲ್ಲಿ ಇರಲಿದೆ. ಚುನಾವಣೆಗೆ ನಾವು ಹೆದರುವುದಿಲ್ಲ. ವಿಜಯೇಂದ್ರ ಕುರ್ಚಿ ಅಲ್ಲಾಡುತ್ತಿದ್ದು, 2028ರವರೆಗೆ ಅಧಿಕಾರದಲ್ಲಿ ಇರುತ್ತಾರೋ ಇಲ್ಲವೋ ತಿಳಿದಿಲ್ಲ ಎಂದರು.

## ಆಪರೇಷನ್ ಸಿಂಧೂರ್ ಮೂಲಕ ಭಾರತದ ಮಿಲಿಟರಿ ಶಕ್ತಿ ಜಗತ್ತು ಕಂಡಿದೆ: ಮೋದಿ

ನವದೆಹಲಿ,ಜು.21 ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ನರಮೇಧಕ್ಕೆ ಪ್ರತಿಕಾರವಾಗಿ ಪಾಕಿಸ್ತಾನ ಹಾಗೂ ಪಿಒಕೆ ಮೇಲೆ ನಡೆಸಿದ ಆಪರೇಷನ್ ಸಿಂಧೂರ್ ಯಶಸ್ಸಿನ ಮೂಲಕ ಭಾರತದ ಮಿಲಿಟರಿ ಶಕ್ತಿ ಮತ್ತು ನಮ್ಮ ಸಶಸ ಪಡೆಗಳ ಶಕ್ತಿಯನ್ನು ಜಗತ್ತು ಕಂಡಿದೆ ಎಂದು ಪ್ರಧಾನಿ ನರೇಂದ್ರಮೋದಿ, ಸೇನಾಪಡೆಗಳ ಶಕ್ತಿಯನ್ನು ಕೊಂಡಾಡಿದರು. ಸಂಸತ್ತಿನ ಮಳೆಗಾಲದ ಅದಿವೇಶನಕ್ಕೂ ಮುನ್ನ ಮಾತನಾಡಿದ ಅವರು, ಸಂಸತ್ತಿನ ಮಳೆಗಾಲದ ಅಧಿವೇಶನವು ವಿಜಯದ ಆಚರಣೆಯಾಗಿದೆ. ಈ ಕಾರ್ಯಾಚರಣೆಯು ದೇಶದ ಶಕ್ತಿ ಮತ್ತು ಕಾರ್ಯತಂತ್ರದ ಸಾಮಥ-ೄ್ಯಕ್ಕೆ ಸಾಕ್ಷಿಯಾಗಿದೆ. ಇದು ತನ್ನ ಹಿತಾಸಕ್ತಿಗಳನ್ನು ಕಾಪಾಡಿಕೊಳ್ಳಲು ಮತ್ತು ಜಾಗತಿಕ ಶಾಂತಿ ಮತ್ತು ಸ್ಥಿರತೆಗೆ ಕೊಡುಗೆ ನೀಡುವ ಭಾರತದ ಬದ್ಧತೆಯನ್ನು ಹೇಗೆ ಪ್ರದರ್ಶಿಸುತ್ತದೆ ಎಂದು ಪ್ರತಿಪಾದಿಸಿದರು.

ಆಪರೇಷನ್ ಸಿಂಧೂರ್ ಅಡಿಯಲ್ಲಿ, ಭಯೋತ್ಪಾದಕರ ಮನೆಗಳನ್ನು 22 ನಿಮಿಷಗಳಲ್ಲಿ ನೆಲಸಮ ಮಾಡಲಾಯಿತು. ಭಾರತದಲ್ಲಿ ತಯಾರಾದ ಈ ಹೊಸ ರೂಪದ ಮಿಲಿಟರಿ ಶಕ್ತಿಯತ್ತ ಜಗತ್ತು ಬಹಳ ಆಕರ್ಷಿತವಾಗಿದೆ. ಇತ್ತೀಚಿನ ದಿನಗಳಲ್ಲಿ ನಾನು ಪ್ರಪಂಚದ ಜನರನ್ನು ಭೇಟಿಯಾದಾಗಲೆಲ್ಲಾ, ಭಾರತದಿಂದ ತಯಾರಿಸಲ್ಪಡುತ್ತಿರುವ ತಯಾರಿಸಲ್ಪಟ್ಟ ಶಸಾಸಗಳ ಕಡೆಗೆ ಪ್ರಪಂಚದ ಆಕರ್ಷಣೆ ಹೆಚ್ಚುತ್ತಿದೆ ಎಂದು ಶ್ಲಾಸಿದರು. ಆಪರೇಷನ್ ಸಿಂಧೂರ್‌ನಲ್ಲಿ ಬಳಸಲಾದ ಶಸಾಸಗಳು ಭಾರತದಲ್ಲಿಯೇ ತಯಾರಿಸಲ್ಪಟ್ಟವು ಮತ್ತು ಅಂತರರಾಷ್ಟ್ರೀಯ ಗಮನ ಸೆಳೆದವು. ದೇಶೀಯ ರಕ್ಷಣಾ ಉತ್ಪಾದನೆಯ ಮಹತ್ವವನ್ನು ಒತ್ತಿ ಹೇಳಿದ ಮೋದಿ, ಈ ಕಾರ್ಯಾಚರಣೆಯಲ್ಲಿ ಭಾರತವು ತನ್ನ ಉದ್ದೇಶಗಳನ್ನು ಸಾ?ಸಿದೆ. ರಕ್ಷಣಾ ಸಾಮರ್ಥ್ಯ ಮತ್ತು ಸ್ವಾವಲಂಬನೆ ಎರಡರಲ್ಲೂ ಉದಯೋನ್ಮುಖ ಶಕ್ತಿಯಾಗಿ ರಾಷ್ಟ್ರದ ಖ್ಯಾತಿಯನ್ನು ಬಲಪಡಿಸಿತು ಎಂದು ವ್ಯಾಖ್ಯಾನಿಸಿದರು.

ಸಂಸತ್ತು ಈ ವಿಜಯವನ್ನು ಒಂದೇ ಧ್ವನಿಯಲ್ಲಿ ಅಂಗೀಕರಿಸಿ ಆಚರಿಸಿದಾಗ, ಅದು ಭಾರತದ ಸಶಸ ಪಡೆಗಳನ್ನು ಇನ್ನಷ್ಟು ಬಲಪಡಿಸುತ್ತದೆ ಮತ್ತು ಪೊರೀತ್ಸಾಹಿಸುತ್ತದೆ ಎಂದು ನಾನು ದೃಢವಾಗಿ



ನಂಬುತ್ತೇನೆ. ಮುಂಗಾರು ಅಧಿವೇಶನವು ರಾಷ್ಟ್ರೀಯ ಹೆಮ್ಮೆ ಮತ್ತು ವಿಜಯೋತ್ಸವದ ಅಧಿವೇಶನ ಎಂದು ನಾನು ಹೇಳುವಾಗ, ನಾನು ಅದನ್ನು ಹೇಳುತ್ತೇನೆ ಏಕೆಂದರೆ, ಎಲ್ಲಕ್ಕಿಂತ ಹೆಚ್ಚಾಗಿ, ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದಲ್ಲಿ ಭಾರತೀಯ ತ್ರಿವರ್ಣ ಧ್ವಜವನ್ನು ಹಾರಿಸುವುದು ದೇಶದ ಪ್ರತಿಯೊಬ್ಬ ನಾಗರಿಕನಿಗೂ ಅಪಾರ ಹೆಮ್ಮೆಯ ಕ್ಷಣವಾಗಿದೆ ಎಂದು ಬಣ್ಣಿಸಿದರು.

ಜಾಗತಿಕ ವೇದಿಕೆಯಲ್ಲಿ ಭಾರತದ ಸಾಧನೆಗಳನ್ನು ಎತ್ತಿ ತೋರಿಸುವ ಮೂಲಕ, ಮುಂಗಾರು ಅ?ವೇಶನವನ್ನು ರಾಷ್ಟ್ರಕ್ಕೆ ಹೆಮ್ಮೆಯ ಕ್ಷಣವಾಗಿದೆ. ಗಗನಯಾತ್ರಿ ಶುಭಾಂಶು ಶುಕ್ಲಾ ಅವರು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣಕ್ಕೆ ಐತಿಹಾಸಿಕ ಹೆಜ್ಜೆ ಇಟ್ಟಿದ್ದು, ಭಾರತದ ಮುಂದುವರಿದ ಬಾಹ್ಯಾಕಾಶ ಸಾಮಥ-ೄ್ಯಗಳ ಸಂಕೇತ ಮತ್ತು ರಾಷ್ಟ್ರೀಯ ಹೆಮ್ಮೆಯ ಮೂಲವಾಗಿದೆ ಎಂದು ಅವರು ಉಲ್ಲೇಖಿಸಿದರು. ಮುಂಗಾರು ಮತ್ತು ಕೃಷಿಯ ಬಗ್ಗೆ ಮಾತನಾಡಿದ ಪ್ರಧಾನಿ ಮೋದಿ, ಕಳೆದ 10 ವರ್ಷಗಳಲ್ಲಿ ಮೊದಲ ಬಾರಿಗೆ ದೇಶದಲ್ಲಿ ನೀರಿನ ಸಂಗ್ರಹ ಸುಮಾರು ಮೂರು ಪಟ್ಟು ಹೆಚ್ಚಾಗಿದೆ, ಇದು ಇಡೀ ದೇಶಕ್ಕೆ. ವಿಶೇಷವಾಗಿ ರೈತರು, ಹಳ್ಳಿಗಳು ಮತ್ತು ಸಾಮಾನ್ಯ ಕುಟುಂಬಗಳಿಗೆ ಪ್ರಯೋಜನವನ್ನು ನೀಡುತ್ತದೆ-ಎಂದುಹೇಳಿದರು.

## ಭದ್ರಾ ಜಲಾಶಯದ ಬಲದಂಡೆ ಕಾಲುವೆಗೆ 120 ದಿನ ನೀರು ಹರಿಸಲು ತೀರ್ಮಾನ



ಶಿವಮೊಗ್ಗ: ಭದ್ರಾ ಜಲಾಶಯದ ಅಚ್ಚುಕಟ್ಟು ವ್ಯಾಪ್ತಿಯ ಮುಂಗಾರು ಬೆಳೆಗಳಿಗೆ ಜುಲೈ 22ರ ರಾತ್ರಿಯಿಂದ 120 ದಿನಗಳವರೆಗೆ ಬಲದಂಡೆ ನಾಲೆ, ಆನವೇರಿ, ದಾವಣಗೆರೆ, ಮಲೆಬೆನ್ನೂರು ಮತ್ತು ಹರಿಹರ ಶಾಖಾ ನಾಲೆಗಳಿಗೆ ನೀರು ಹರಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಚಿವ ಹಾಗೂ ಭದ್ರಾ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಧು ಬಂಗಾರಪ್ಪ ಅಧ್ಯಕ್ಷತೆಯಲ್ಲಿ ಇಂದು ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಎಡದಂಡೆ ನಾಲೆಯಲ್ಲಿ ನೀರು ಬಿಡುವ ದಿನಾಂಕವನ್ನು ಪ್ರಕಟಿಸಲಾಗುವುದು. ಕರ್ನಾಟಕ ನೀರಾವರಿ ಕಾಯ್ದೆ 1965ರ ಅನ್ವಯ ಬೆಳೆ ಮಾದರಿಯನ್ನು ಉಲ್ಲಂಘಿಸುವವರು, ನೀರಾವರಿ ಕಾಲುವೆ ಕಟ್ಟಡಗಳನ್ನು ಜಖಂಗೊಳಿಸುವವರು, ನಿಗದಿತ ಪ್ರಮಾಣಕ್ಕಿಂತ ಹೆಚ್ಚು ನೀರನ್ನು ಬಳಸುವವರು ಮತ್ತು ಅನಧಿಕೃತ ನೀರಾವರಿ ಬೆಳೆಗಾರರು ವಿವಿಧ ನಿಯಮಗಳ ಪ್ರಕಾರ ಕಾನೂನು ಕ್ರಮಕ್ಕೆ ಒಳಗಾಗುತ್ತಾರೆ. ಹಾಲಿ ಜಲಾಶಯದಲ್ಲಿ ಇರುವ ನೀರಿನ ಪ್ರಮಾಣವನ್ನು ಗಣನೆಗೆ ತೆಗೆದುಕೊಂಡು ಅನುಸೂಚಿಯಲ್ಲಿ ನಮೂದಿಸಿದ ಕ್ಷೇತ್ರ ಹಾಗೂ ಬೆಳೆಗಳಿಗೆ ಮಾತ್ರ ನೀರು ಒದಗಿಸಲು ಉದ್ದೇಶಿಸಲಾಗಿದೆ.

ಪ್ರಕಟಿತ ಬೆಳೆಗಳನ್ನು ಬೆಳೆಯದೆ ಬೇರೆ ಬೆಳೆಗಳನ್ನು ಬೆಳೆದು ಬೆಳೆ ಉಲ್ಲಂಘನೆ ಮಾಡಿ ನಷ್ಟ ಅನುಭವಿಸಿದಲ್ಲಿ ಇದಕ್ಕೆ ಸಂಬಂಧಪಟ್ಟ ರೈತರೇ ಹೊಣೆಗಾರರಾಗಿದ್ದು, ಜಲಸಂಪನ್ಮೂಲ ಇಲಾಖೆಯು ಯಾವುದೇ ರೀತಿಯಲ್ಲಿ ಜವಾಬ್ದಾರಿಯಾಗುವುದಿಲ್ಲ. ರೈತರು ನೀರಿನ ಸದ್ಬಳಕೆಗೆ ಸಹಕಾರ ನೀಡಬೇಕು ಎಂದು ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿ ಆರ್.ರವಿಚಂದ್ರ ತಿಳಿಸಿದ್ದಾರೆ.

## ಜು.25ರಂದು ನಾನು, ಮುಖ್ಯಮಂತ್ರಿ ಹೊಸದಿಲ್ಲಿಗೆ ಭೇಟಿ : ಡಿ.ಕೆ.ಶಿವಕುಮಾರ್

ಬೆಂಗಳೂರು : ವಿಧಾನ ಪರಿಷತ್ತಿನ ನಾಲ್ಕು ಸ್ಥಾನಗಳಿಗೆ ನಾಮ ನಿರ್ದೇಶನ ಹಾಗೂ ನಿಗಮ, ಮಂಡಳಿಗಳಿಗೆ ಕಾರ್ಯಕರ್ತರನ್ನು ನೇಮಕ ಮಾಡುವ ವಿಚಾರಕ್ಕೆ ಸಂಬಂಧಿಸಿದಂತೆ ಪಕ್ಷದ ವರಿಷ್ಠರೊಂದಿಗೆ ಚರ್ಚೆ ನಡೆಸಲು ನಾನು ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಜು.25ರಂದು ಹೊಸದಿಲ್ಲಿಗೆ ತೆರಳುತ್ತಿದ್ದೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದರು. ಸೋಮವಾರ ಸದಾಶಿವನಗರದಲ್ಲಿರುವ ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಸತ್ ಅಧಿವೇಶನ ನಡೆಯುತ್ತಿರುವುದರಿಂದ ನಾವೇ ಹೊಸದಿಲ್ಲಿಗೆ ತೆರಳಿ, ಈ ವಿಷಯಗಳ ಕುರಿತು ಚರ್ಚೆ ನಡೆಸುತ್ತೇವೆ ಎಂದು ಹೇಳಿದರು.

ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಎಸ್‌ಐಟಿ ರಚನೆ ಮಾಡಿರುವ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಶಿವಕುಮಾರ್, ಈ ವಿಚಾರವಾಗಿ ಪರ ವಿರೋಧ ಚರ್ಚೆ ಆಗುತ್ತಿದೆ. ಇದನ್ನು ಗೃಹ ಸಚಿವರು ನಿಭಾಯಿಸುತ್ತಿದ್ದು, ಬಹಳ ಹಿರಿಯ ಅಧಿಕಾರಿಗಳನ್ನು ಎಸ್‌ಐಟಿ ತಂಡದಲ್ಲಿ ನಿಯೋಜಿಸಿದ್ದಾರೆ. ತನಿಖೆ ನಂತರ ಸತ್ಯಾಸತ್ಯತೆ ತಿಳಿಯುತ್ತದೆ ಎಂದರು.

## ಶಾಸಕ ಬಾಬಾಸಾಹೇಬ ಪಾಟೀಲ ಅವರ ಹುಟ್ಟುಹಬ್ಬದ ಪ್ರಯುಕ್ತ ರಕ್ತಧಾನ ಶಿಬಿರ



ನೇಸರಗಿ. ಚನ್ನಮ್ಮನ ಕಿತ್ತೂರು ಶಾಸಕರಾದ ಬಾಬಾಸಾಹೇಬ ಪಾಟೀಲ ಹಾಗೂ ಅವರ ಸಹೋದರ ನಾನಾಸಾಹೇಬ ಪಾಟೀಲರ ಹುಟ್ಟುಹಬ್ಬದ ಪ್ರಯುಕ್ತವಾಗಿ ಮಂಗಳವಾರ ದಿ. 22-07-2025 ರಂದು ಬೆಳ್ಳಿಗೆ 8-00 ಘಂಟೆಯಿಂದ 1-00 ಘಂಟೆಯವರೆಗೆ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೆಳಗಾವಿ, ತಾಲೂಕಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬೈಲಹೊಂಗಲ, ಪ್ರಾಥಮಿಕ ಅರೋಗ್ಯ ಕೇಂದ್ರ ನೇಗಿನಹಾಳ ಮತ್ತು ಶ್ರೀ ಬಾಬಾಸಾಹೇಬ ಪಾಟೀಲ ಅಭಿಮಾನಿಗಳ ಸಂಯುಕ್ತ



ಆಶ್ರಯದಲ್ಲಿ ಬೃಹತ್ ಸ್ವಯಂ ಪ್ರೇರಿತ ರಕ್ತದಾನ ಶಿಬಿರವನ್ನು ನೇಗಿನಹಾಳ ಗ್ರಾಮದ ಶ್ರೀ ಮಡಿವಾಳೇಶ್ವರ ಮಠದಲ್ಲಿ ಏರ್ಪಡಿಸಲಾಗಿದೆ. ಇದೆ ಸಂದರ್ಭದಲ್ಲಿ ಕಿತ್ತೂರು ಮತಕ್ಷೇತ್ರದ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ನೋಟ್ಸ್ ಬುಕ್ ಹಾಗೂ ಪೆನ್ನು ವಿತರಿಸುವ ಕಾರ್ಯಕ್ರಮ ಏರ್ಪಡಿಸಲಾಗಿದೆ. ಅದಕ್ಕಾಗಿ ಯಾವತ್ತೂ ರಾಜಕೀಯ ಮುಖಂಡರು, ಕಾಂಗ್ರೆಸ್ ಕಾರ್ಯಕರ್ತರು ಮಾಲೆ, ಶಾಲುಗಳನ್ನು ತರದೇ ಪ್ರೀತಿಯಿಂದ ಬಂದು ಅಭಿಮಾನದಿಂದ ಶುಭ ಹಾರೈಸಬೇಕೆಂದು ಕೆ ಪಿ ಸಿ ಸಿ ಸದಸ್ಯರು, ಮಾಜಿ ಜಿ ಪಂ. ಸದಸ್ಯರಾದ ಶ್ರೀಮತಿ ರೋಹಿಣಿ ಪಾಟೀಲ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನಸ್ನೇಹಿ ಪೊಲೀಸ್ ವ್ಯವಸ್ಥೆಗೆ ಮತ್ತಷ್ಟು ಬಲ ತುಂಬಲು

## ಮನೆ ಮನೆಗೆ ಪೊಲೀಸ್ ವಿನೂತನ ಕಾರ್ಯ : ಸಾರ್ವಜನಿಕರ ಸದ್ಬಳಕೆಗೆ ಎಸ್.ಪಿ. ಗುಂಜನ್ ಆರ್ಯ ಮನವಿ

ಧಾರವಾಡ : ಕರ್ನಾಟಕ ಪೊಲೀಸ್ ಜನಸ್ನೇಹಿ ಪೊಲೀಸ್ ಆಗಿದ್ದು, ಸಮುದಾಯ ವ್ಯವಸ್ಥೆಯನ್ನು ಬಲಪಡಿಸಿ, ಸಮಾಜದ ಶಾಂತಿ ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಉದ್ದೇಶದಿಂದ ಮತ್ತು ಸಾರ್ವಜನಿಕರ ಸುರಕ್ಷತೆಗಾಗಿ ವಿನೂತನ ಕ್ರಮವಾಗಿ ಧಾರವಾಡ ಜಿಲ್ಲೆಯಲ್ಲಿ ಸರಕಾರದ ನಿರ್ದೇಶನದಂತೆ ಪೊಲೀಸ್ ಇಲಾಖೆಯಿಂದ ಮನೆ ಮನೆಗೆ ಪೊಲೀಸ್ ಕಾರ್ಯಕ್ರಮವನ್ನು ಜಾರಿ ಮಾಡಲಾಗಿದೆ ಎಂದು ಧಾರವಾಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಧಾರಾವಾಡ ತಾಲೂಕಿನ ಹೆಬ್ಬಳ್ಳಿ ಗ್ರಾಮದಲ್ಲಿ ಮನೆಮನೆಗೆ ಭೇಟಿ ನೀಡಿ, ಸಾರ್ವಜನಿಕರಿಗೆ ಮನೆಮನೆಗೆ ಪೊಲೀಸ್ ಕಾರ್ಯಕ್ರಮ ಪರಿಚಯಿಸುವ ಮತ್ತು ಜನರ ಅಹವಾಲು ಕೇಳುವ ಮೂಲಕ ಚಾಲನೆ ನೀಡಿ, ಗ್ರಾಮಸ್ಥರನ್ನು ಉದ್ದೇಶಿಸಿ, ಮಾತನಾಡಿದರು.

ಸಾರ್ವಜನಿಕರ ಸುರಕ್ಷತೆ, ಸಮಾಜದ ಶಾಂತಿ ದೃಷ್ಟಿಯಿಂದ ಮನೆ ಮನೆಗೆ ಪೊಲೀಸ್ ಎಂಬುದು ಒಂದು ವಿನೂತನ ಕಾರ್ಯಕ್ರಮ. ಈಗಾಗಲೇ ಬಿಟ್ ಪೊಲೀಸ್ ವ್ಯವಸ್ಥೆ ಮೂಲಕ ಸಮುದಾಯ, ಜನರೊಂದಿಗೆ ನೇರ ಸಂಪರ್ಕ ಸಾಧಿಸಿ, ಜನಸ್ನೇಹಿ ಪೊಲೀಸ್ ಆಗಿದೆ. ಮನೆಮನೆಗೆ ಪೊಲೀಸ್ ಮೂಲಕ ಜನರ ಮನೆ ಬಾಗಿಲಿಗೆ ಬಂದು, ಬಿಟ್ ಪೊಲೀಸ್ ಅವರ ಸಮಸ್ಯೆಗಳನ್ನು ಆಲಿಸಿ, ದಾಖಲಿಸಲಿದ್ದಾರೆ. ಮತ್ತು ಸಾಧ್ಯವಾದಷ್ಟು ಸ್ಥಳೀಯವಾಗಿ ಕಾನೂನು ಪ್ರಕಾರ ಸಮಸ್ಯೆಗಳನ್ನು ಇತ್ಯರ್ಥ ಪಡಿಸುವ ಅಥವಾ ಸಂಬಂದಿಸಿದವರ ಗಮನಕ್ಕೆ ತಂದು ಪರಿಸುವ ಕ್ರಮಕೈಗೊಳ್ಳಲಿದ್ದಾರೆ ಎಂದು ಎಸ್.ಪಿ. ಆರ್ಯ ಅವರು ತಿಳಿಸಿದರು.

ಸಾರ್ವಜನಿಕರಿಗೆ ಕೆಲವು ಸಮಸ್ಯೆಗಳನ್ನು ಖುದ್ದಾಗಿ ಬಂದು ಹೇಳಲು, ಸ್ಥಳೀಯವಾಗಿ ಪೊಲೀಸರಿಗೆ ತಿಳಿಸಲು ಕಷ್ಟವೆನಿಸಿದರೆ, ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದಲ್ಲಿ ಪ್ರತಿ ಮನೆಗೆ ಕರಪತ್ರ ವಿತರಿಸಲಾಗುತ್ತಿದೆ. ಕರಪತ್ರದಲ್ಲಿ ಹಿರಿಯ ಅಧಿಕಾರಿಗಳ ಮೊಬೈಲ್ ಸಂಖ್ಯೆ, ವಿಳಾಸ ನೀಡಲಾಗಿದೆ. ಸೂಕ್ಷ್ಮ ವಿಷಯ, ಸಂದರ್ಭಗಳಿದ್ದಲ್ಲಿ ದೂರವಾಣಿ ಮೂಲಕ ತಿಳಿಸಿದರೂ, ಪೊಲೀಸ್‌ರು ತಾವಿದ್ದಲ್ಲಿಗೆ ಬಂದು ಸಹಾಯ ಮಾಡಲಿದ್ದಾರೆ. ಅಗತ್ಯವಿದ್ದಾಗ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ತಿಳಿಸಿದರು.

ಮನೆ ಮನೆಗೆ ಪೊಲೀಸ್ ಎಂಬುದು ಕೇವಲ ಒಂದು ಘೋಷಣೆಯಲ್ಲ, ಅದೊಂದು ಸಮುದಾಯ ಸ್ನೇಹಿ ಪೊಲೀಸ್ ವ್ಯವಸ್ಥೆ ಆಗಿದ್ದು, ಕಮ್ಯುನಿಟಿ ಪೊಲೀಸ್ ಎಂಬ ಪರಿಕಲ್ಪನೆ ಇದರ ಮುಖ್ಯ ಉದ್ದೇಶವಾಗಿದೆ. ಪೊಲೀಸ್ ಮತ್ತು ಸಾರ್ವಜನಿಕರ ನಡುವಿನ ಅಂತರವನ್ನು ಕಡಿಮೆ ಮಾಡಿ, ವಿಶ್ವಾಸದ ಸಂಬಂಧವನ್ನು ಬೆಳೆಸುವುದು ಮತ್ತು ಅಪರಾಧಗಳನ್ನು ತಡೆಗಟಲು ವಿನೂತನ ಕ್ರಮವಾಗಿದೆ ಎಂದು ಅವರು ಹೇಳಿದರು.

ಪೊಲೀಸರು ಕೇವಲ ಅಪರಾಧ ನಡೆದಾಗ ಮಾತ್ರ ಸ್ಥಳಕ್ಕೆ ಬರುವ ಬದಲು, ಜನರೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ಅಪರಾಧ ನಡೆಯದಂತೆ ತಡೆಯುವುದು ಮತ್ತು ಜನರಲ್ಲಿ ಸುರಕ್ಷತಾ ಭಾವನೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಸರ್ಕಾರ ಈ ಕ್ರಮವಹಿಸಿದೆ ಎಂದರು.

ಪೊಲೀಸ್ ಅಧಿಕಾರಿಯನ್ನು ಮತ್ತು ಕಾನ್ಸ್‌ಟೇಬಲ್, ಹೆಡ್ ಕಾನ್ಸ್‌ಟೇಬಲ್ ನಿಯೋಜಿಸುವುದು. ವಾರಕ್ಕೊಮ್ಮೆ ಅಥವಾ ತಿಂಗಳಿಗೊಮ್ಮೆ ತಮ್ಮ ಬೀಟ್ ವ್ಯಾಪ್ತಿಯ ಮನೆಗಳಿಗೆ, ಅಂಗಡಿಗಳಿಗೆ ಭೇಟಿ ನೀಡಿ, ಸಂಪರ್ಕ ಸಂಖ್ಯೆಯನ್ನು ನೀಡಿ, ಜನರ ಸಮಸ್ಯೆಗಳನ್ನು ಆಲಿಸಬೇಕು ಎಂದು ತಿಳಿಸಿದರು. ಪೊಲೀಸ್ ಅಪ್ಲೀಕೇಶನ್‌ಗಳನ್ನು ಜನಸಾಮಾನ್ಯರು ಬಳಸಬೇಕು. ಇದರಲ್ಲಿ ಪೊಲೀಸರು, ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಮತ್ತು ಸಕ್ರಿಯ ನಾಗರಿಕರಿದ್ದು, ಈ ಗುಂಪಿನಲ್ಲಿ ಅಧಿಕೃತ ಮಾಹಿತಿ ನೀಡಿ ಸುರಕ್ಷತಾ ಎಚ್ಚರಿಕೆಗಳು ಮತ್ತು ಸಂಚಾರದ



ಅಪ್‌ಡೇಟ್‌ಗಳನ್ನು ಹಂಚಿಕೊಳ್ಳಬಹುದು ಎಂದರು.

ಗ್ರಾಮದ ಹಿರಿಯರಾದ ಸಹದೇವ ಹಾವೇರಿ ಮತ್ತು ಚನಬಸಪ್ಪ ಮಟ್ಟಿ ಅವರು ಮಾತನಾಡಿ ಗ್ರಾಮದಲ್ಲಿನ ಸಮಸ್ಯೆಗಳ ಬಗ್ಗೆ ಮಾಹಿತಿ ನೀಡಿ, ಅಹಿತಕರ ಘಟನೆಗಳು ನಡೆಯದಂತೆ ಕಾಳಜಿ ವಹಿಸಬೇಕೆಂದು ಮನವಿ ಮಾಡಿಕೊಂಡರು.

ವೇದಿಕೆಯಲ್ಲಿ ಡಿ.ವೈಎಸ್.ಪಿ ವಿನೋದ ಮುಕ್ತೆದಾರ, ಹೆಬ್ಬಳ್ಳಿ ಗ್ರಾಮ ಪಂಚಾಯತ ಅಧ್ಯಕ್ಷ ಲ ಬೋವಿ, ಉಪಾಧ್ಯಕ್ಷೆ ಸುಶಿಲಮ್ಮ ಸಾಲಿ ಇದ್ದರು.

ಧಾರವಾಡ ಗ್ರಾಮೀಣ ಸಿಪಿಐ ಶಿವಾನಂದ ಕಮತಗಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಗಿರಮಲ್ಲಯ್ಯ ನಂದಿಕೋಲಮಠ ಅವರು ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ ಸದಸ್ಯರು, ವುವಿಧ ಜನಪ್ರತಿನಿಧಿಗಳು, ಸಂಘಟನೆಗಳ ಪ್ರತಿನಿಧಿಗಳು, ಹಿರಿಯರು ಮತ್ತು ಇತರರು ಇದ್ದರು.

ಎಸ್.ಪಿ ಭೇಟಿ: ಮನೆ ಮನೆಗೆ ಪೊಲೀಸ್ ಕಾರ್ಯಕ್ರಮದ ಅಂಗವಾಗಿ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ಅವರು ಹೆಬ್ಬಳ್ಳಿ ಗ್ರಾಮದ ಹಳೆ ಬಸ್ ನಿಲ್ದಾಣ ಹತ್ತಿರದ ಓಣಿ, ಮಲ್ಲಯ್ಯನಗುಡಿ ಓಣಿ, ಕಾಮನಗುಡಿ ಓಣಿ, ಹರಿಜನಕೇರಿ, ಚಲವಾದಿಯವರ ಓಣಿ ಸೇರಿದಂತೆ ಇತರ ಪ್ರದೇಶಗಳಲ್ಲಿ ಸಂಚರಿಸಿ, ಮನೆಮನೆಗೆ ಭೇಟಿ ನೀಡಿ, ಕುಟುಂಬಸ್ಥರನ್ನು ಮಾತನಾಡಿಸಿದರು.

ಮನೆ ಮನೆಗೆ ಪೊಲೀಸ್ ವಿನೂತನ ಕಾರ್ಯಕ್ರಮ: ಪೊಲೀಸರನ್ನು ಸಮಾಜದ ಭದ್ರತಾ ಪ್ರತಿನಿಧಿಗಳೆಂದು, ನಾಗರೀಕರ ಮೂಲಭೂತ ಹಕ್ಕುಗಳ ರಕ್ಷಕರೆನ್ನಲಾಗುತ್ತದೆ.

ಅಪರಾಧಗಳ ತಡೆ ಹಾಗೂ ಪತ್ತೆ, ಸಮಾಜದಲ್ಲಿ ನಿರ್ಭಯ ವಾತಾವರಣವನ್ನು ಸೃಜಿಸುವ ಜೊತೆಗೆ ರಕ್ಷಣೆ ಮತ್ತು ಸುರಕ್ಷತೆ ಒದಗಿಸುವ ಕರ್ತವ್ಯ ಮತ್ತು ಗುರುತರ ಜವಾಬ್ದಾರಿಗಳು ಪೊಲೀಸ್ ಇಲಾಖೆಯ ಮೇಲಿವೆ. ಪೊಲೀಸ್ ವ್ಯವಸ್ಥೆಯು ಸಮಾಜ ಸ್ನೇಹಿಯಾಗಿಸಿಕೊಳ್ಳುವುದರಿಂದ, ಮೊ ಪೊಲೀಸ್ ಕರ್ತವ್ಯದ ಪರಿಣಾಮಕತೆಯನ್ನು ಹೆಚ್ಚಿಸಿಕೊಳ್ಳಬಹುದು. ಪೊಲೀಸ್ ಸೇವೆಗಳ ಪ್ರತಿಯೊಂದು ಸ್ಥರದಲ್ಲೂ, ಸಾರ್ವಜನಿಕರ ಬೆಂಬಲ ಮತ್ತು ಸಹಭಾಗಿತ್ವವನ್ನು ಸಾಧಿಸಿಕೊಳ್ಳುವುದರಿಂದ ಮಾತ್ರವೇ ಸಾರ್ವಜನಿಕರಿಗೆ ಉತ್ಕೃಷ್ಟ ಸೇವೆಯನ್ನು ಒದಗಿಸಲು ಸಾಧ್ಯ. ಮುಂದುವರೆದು, ಪೊಲೀಸರಾದ ನಾವು ಸಮಾಜದ ಸೇವಕರು ಎಂಬುದನ್ನು ಎಂದಿಗೂ ಮರೆಯಕೂಡದು. ಜನರಿಗೆ ಅತ್ಯುತ್ತಮ ಸೇವೆ ಒದಗಿಸುವುದೇ ನಮ್ಮ ಗುರಿ ಮತ್ತು ಮೂಲ ಧ್ಯೆಯ ಎಂಬುದನ್ನು ಸದಾ ನೆನಪಿನಲ್ಲಿಡಬೇಕು.

ಪ್ರಸ್ತುತ ಪೊಲೀಸ್ ವ್ಯವಸ್ಥೆಯು ಬಹುತೇಕವಾಗಿ "ಪ್ರತಿಕ್ರಿಯೆ ಸೇವೆ" ಯನ್ನು ಮಾತ್ರವೇ ಒದಗಿಸುತ್ತಾ ಬಂದಿದೆ. ಅಂದರೆ, ಸಾರ್ವಜನಿಕರು ನೀಡುವ ದೂರುಗಳ / ಅಹವಾಲುಗಳ ಆಧಾರದ ಮೇಲೆ ಮಾತ್ರವೇ ಪ್ರತಿಕ್ರಿಯಿಸಲಾಗುತ್ತಿದೆ. ಆದರೆ ಈ ವ್ಯವಸ್ಥೆಯನ್ನು "ಸಕ್ರಿಯ ಸೇವೆ" (ಕಡಿಂ-ಚಿಭಿಣುತಜ ಕಠಟುಭಿಟಿರ) ಒದಗಿಸುವ ವ್ಯವಸ್ಥೆಯನ್ನಾಗಿ ಪರಿವರ್ತನೆಗೊಳಿಸುವೆಡೆಗೆ ಹೆಜ್ಜೆ ಇಡುವ ಅವಶ್ಯಕತೆ ಇದೆ. ಇಂತಹ ನಡೆಯಿಂದ ಪೊಲೀಸ್ ಸೇವೆಯಲ್ಲಿ ಸಮುದಾಯದ ಪಾಲ್ಗೊಳ್ಳುವಿಕೆಯು ಹೆಚ್ಚುವುದರೊಂದಿಗೆ, ಜನರು ಮತ್ತು ಪೊಲೀಸರ ನಡುವೆ ನಿಕಟ ಸಂಬಂಧ ಏರ್ಪಟ್ಟು, ಪರಿಣಾಮವಾಗಿ, ಸಮಾಜದಲ್ಲಿ ಗಂಭೀರ ಸಮಸ್ಯೆ ಉದ್ಭವಿಸುವ ಮೊದಲೇ ಪರಿಹಾರೋಪಾಯಗಳೊಂದಿಗೆ ಸನ್ನದ್ಧರಾಗಿರುವಂತಹ ವಾತಾವರಣ ರೂಪುಗೊಳ್ಳುತ್ತದೆ ಪ್ರಸ್ತುತ ಪೊಲೀಸ್ ವ್ಯವಸ್ಥೆಯನ್ನು ಸಾರ್ವಜನಿಕಸ್ನೇಹಿಯನ್ನಾಗಿಸುವ ದಿಸೆಯಲ್ಲಿ "ಮನೆ ಮನೆಗೆ ಪೊಲೀಸರು" ಎಂಬ ಒಂದು ವಿನೂತನ ಪರಿಕಲ್ಪನೆಯನ್ನು ಪರಿಚಯಿಸಲಾಗಿದೆ. ಮನೆ-ಮನೆಗೆ ಪೊಲೀಸ್ ಪರಿಕಲ್ಪನೆಯಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ವಿವಿಧ ರೀತಿಯ ಕರ್ತವ್ಯವನ್ನು ನಿರ್ವಹಿಸುತ್ತಾರೆ.

ಪ್ರತಿಯೊಂದು ಪೊಲೀಸ್ ಠಾಣೆಗಳ ಸರಹದ್ದುಗಳ ಭೌಗೋಳಿಕ ಪ್ರದೇಶಗಳನ್ನು ವಿಂಗಡಿಸಿಕೊಳ್ಳುವುದು (ಇ-ಬೀಟ್ ವ್ಯವಸ್ಥೆಯನ್ವಯ), ಅಂತಹ ವಿಂಗಡಿಸಲಾದ ಪ್ರದೇಶಗಳಲ್ಲಿ ಇರುವ ಮನೆಗಳನ್ನು ಪಟ್ಟಿ ಮಾಡಿಕೊಳ್ಳುವುದು. ಪಟ್ಟಿ ಮಾಡಿಕೊಂಡಂತಹ ಮನೆಗಳಲ್ಲಿ 40-50 ಮನೆಗಳ ಸಮೂಹವನ್ನು ರಚಿಸಲಾಗುತ್ತದೆ.

ಬೀಟ್ ಪೊಲೀಸ್ ಅಧಿಕಾರಿ, ಸಿಬ್ಬಂದಿಗಳು ಈ ಸಮೂಹದ ಎಲ್ಲಾ ಮನೆಗಳಿಗೆ ಭೇಟಿ ನೀಡುವುದು. ಸಮೂಹದ ಎಲ್ಲಾ ಮನೆಗಳಿಗೆ ಭೇಟಿ ನೀಡುವ ಪ್ರಕ್ರಿಯೆ ಮುಕ್ತಾಯಗೊಂಡ ನಂತರ, ಮುಂದಿನ ಸಮೂಹಕ್ಕೆ ಭೇಟಿ ನೀಡುವುದು, ಹಾಗೆಯೇ ಠಾಣಾ ವ್ಯಾಪ್ತಿಯಲ್ಲಿ ರಚಿಸಿಕೊಳ್ಳಲಾದ ಎಲ್ಲಾ ಸಮೂಹಗಳಿಗೆ ಪೊಲೀಸರು ಭೇಟಿ ನೀಡುವುದು. ಒಟ್ಟಾರೆಯಾಗಿ ಈ ಪ್ರಕ್ರಿಯೆಯನ್ನು ನಿರಂತರವಾಗಿ ಮುಂದುವರೆಸಿಕೊಳ್ಳುವುದು. ಯಾವುದೇ ಮನೆಯು ಭೇಟಿ ಪ್ರಕ್ರಿಯೆಯಿಂದ ಹೊರತಾಗದಂತೆ ಕ್ರಮವಹಿಸತ್ತಾರೆ.

ಮನೆಗಳಿಗೆ ಭೇಟಿ ನೀಡಿದಾಗ ಪೊಲೀಸ್ ಅಧಿಕಾರಿ , ಸಿಬ್ಬಂದಿಗಳು ಸಾರ್ವಜನಿಕರಿಂದ ಅಹವಾಲುಗಳನ್ನು ಅವರಿಂದ ಸೂಕ್ತ ಸಲಹೆಗಳನ್ನು ಲಿಖಿತವಾಗಲೀ ಅಥವಾ ಮೌಖಿಕವಾಗಲೀ ಅಲಿಸುವುದು. ಪಡೆದುಕೊಳ್ಳುವುದು, ಸಾರ್ವಜನಿಕರ ಅಹವಾಲುಗಳಿಗೆ ಸೂಕ್ತವಾಗಿ ಸ್ಪಂದಿಸುವುದು ಮತ್ತು ಬಗೆಹರಿಸಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತಾರೆ

ಮನೆಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಮನೆಯ ಸುತ್ತಮುತ್ತಲ ಭದ್ರತೆ ಮತ್ತು ಸುರಕ್ಷಿತ ವಾತಾವರಣವನ್ನು ಗಮನಿಸುವುದು ಹಾಗೂ ಲೋಪದೋಷಗಳು ಕಂಡುಬಂದಲ್ಲಿ ಅವುಗಳನ್ನು ಸರಿಪಡಿಸಿಕೊಳ್ಳುವಂತೆ ಸೂಕ್ತ ಸಲಹೆಗಳನ್ನು ಮತ್ತು ಮಾರ್ಗದರ್ಶನಗಳನ್ನು ನೀಡುತ್ತಾರೆ.

ಭೇಟಿ ನೀಡಲಾದ ಮನೆಯ ಕುಟುಂಬದ ಮುಖ್ಯಸ್ಥರೊಂದಿಗೆ ಉತ್ತಮ ಬಾಂಧವ್ಯವನ್ನು ಬೆಳೆಸಿಕೊಳ್ಳುವುದು ಹಾಗೂ ಅನ್ಯೋನ್ಯತೆಯನ್ನು ಕಾಯ್ದುಕೊಳ್ಳುವುದು. ಇಂತಹ ಪದ್ಧತಿಯನ್ನು ಬೀಟ್ ಪೊಲೀಸರ ದೈನಂದಿನ ಕಾರ್ಯದಂತೆ ಮಾಡುತ್ತಾರೆ.

# ಮಹಿಳಾ ಸ್ವಸಹಾಯ ಸಂಘಗಳಿಗೆ ಚೆಕ್‌ಗಳ ವಿತರಣೆ



ರಾಯಬಾಗ: ರಾಯಬಾಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ರಾಯಬಾಗ ತಾಲ್ಲೂಕಿನ ವಿವಿಧ ಗ್ರಾಮಗಳ 35 ಸಂಜೀವಿನಿ ಮಹಿಳಾ ಸ್ವಸಹಾಯ ಸಂಘಗಳಿಗೆ ರಾಯಬಾಗ ಪಟ್ಟಣದ ತಾಲೂಕು ಪಂಚಾಯತಿಯಲ್ಲಿ ಶಾಸಕರಾದ ದುರ್ಯೋಧನ ಐಹೊಳೆ ಅವರು 1.5 ಲಕ್ಷ ರೂ. ಮೊತ್ತದ ಚೆಕ್‌ಗಳನ್ನು ವಿತರಿಸಿದರು. ನಂತರ ಮಾತನಾಡಿ, ಮಹಿಳೆಯರು ಸಂಘಟಿ-ತರಾಗಿ ಸಾಮಾಜಿಕವಾಗಿ ಹಾಗೂ ಆರ್ಥಿಕವಾಗಿ ಮುನ್ನಡೆ ಸಾಧಿಸಿ ಸ್ವಾವಲಂಬನೆ ಜೀವನ ನಡೆಸಲು ಕಾರ್ಯಪ್ರವೃತ್ತರಾಗಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ ಸುರೇಶ ಕದ್ದು, ಮಹಿಳಾ ಸಬಲೀಕರಣ ಒಕ್ಕೂಟದ ಅಧ್ಯಕ್ಷರಾದ ಶ್ರೀಮತಿ ರಾಜಶ್ರೀ ತೇಲಿ, ಮುಖಂಡರಾದ ಶ್ರೀ ಸದಾಶಿವ ಘೋರ್ಪಡೆ, ಎನ್‌ಆರ್‌ಎಲ್‌ಎಂ ತಾಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಹಲವರು ಉಪಸ್ಥಿತ-ರಿದ್ದರು.

*****

## ಸಶಿಗಳನ್ನು ನೆಡುವ ಕಾರ್ಯಕ್ರಮದಿಂದ ಸಮಾಜಕ್ಕೆ ಒಳ್ಳೆಯ ಪರಿಸರ ಉಳಿಸಿ ಎಂಬ ಸಂದೇಶ ನೀಡುತ್ತಿರುವುದು ಸಂತಸವಾಗಿದೆ



ರಾಯಬಾಗ: ಧರ್ಮ, ಸಂಸ್ಕೃತಿ, ದೇಶ ಉಳಿಬೇಕಾದರೆ ಗುರುಗಳ ಪಾತ್ರ ಬಹಳ ಮಹತ್ವದ್ದು ಎಂದು ರಾಯಬಾಗ ಶಾಸಕ ಡಿ ಎಂ ಐಹೊಳೆ ಅವರು ಹೇಳಿದರು.

ಸಮೀಪದ ನಸಲಾಪುರ ಗ್ರಾಮದಲ್ಲಿ ಸನ್ಮತಿ ಯುವಕ ಸಂಘ ಹಾಗೂ ಗ್ರಾಮ ಪಂಚಾಯಿತಿ ಆಶ್ರಯದಲ್ಲಿ ಶ್ರೀ ಸಿದ್ಧಸೇನ ಮುನಿ ಮಹಾರಾಜರ ಸಾನಿಧ್ಯದಲ್ಲಿ ಸಸಿ ನೀಡುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸ್ವಾಮೀಜಿ ಅವರ ಸಾನಿಧ್ಯದಲ್ಲಿ ಸಶಿಗಳನ್ನು ನೆಡುವ ಕಾರ್ಯಕ್ರಮದಿಂದ ಸಮಾಜಕ್ಕೆ ಒಳ್ಳೆಯ ಪರಿಸರ ಉಳಿಸಿ ಎಂಬ ಸಂದೇಶ ನೀಡುತ್ತಿರುವುದು ಸಂತಸವಾಗಿದೆ. ಸ್ವಾಮೀಜಿಯವರ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದು ಮನವಿ ಮಾಡಿದರು.

ಸಿಬಿಎಸ್‌ಎಸ್‌ಕೆ ನಿರ್ದೇಶಕ ಭರತೇಶ್ ಬನವಣೆ ಅವರು ಮಾತನಾಡಿ, ನೆಟ್ಟಿರುವ ಸಸಿಗಳನ್ನು ಚೆನ್ನಾಗಿ ಬೆಳೆಸಿದರೆ ಗ್ರಾಮ ಪಂಚಾಯತ್ ವತಿಯಿಂದ ಅವ-ರಿಗೆ ಬಹುಮಾನ ವಿತರಿಸಲಾಗುವುದು ಎಂದು ಭರವಸೆ ನೀಡಿದರು.

ನಂತರ ಸಿದ್ಧ ಸೇನೆ ಮುನಿಮಹಾರಾಜರು ಮಾತನಾಡಿ, ಗ್ರಾಮ, ದೇಶ ಸ್ವಚ್ಛ ಮಾಡಬೇಕಾದರೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಅದಕ್ಕೆ ಯುವಕರ ಸಂಘ ಸಂಸ್ಥೆಗಳು ಗ್ರಾಮಸ್ಥರು ಸಹಕಾರ ನೀಡಿದರೆ ಎಲ್ಲವೂ ಸಾಧ್ಯ ಎಂದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷ ಅರುಣ ನಾಯಿಕ, ಅಣ್ಣಾಸಾಹೇಬ ಖೇಮಲಾಪುರೆ, ಪೃಥ್ವಿರಾಜ ಜಾದವ, ಜೈಪಾಲ ಬನವಣೆ, ಚೌಗೌಡಾ ಪಾಟೀಲ, ಅಣ್ಣಾಸಾಹೇಬ ಸಮಾಜೆ, ಮಹದೇವ ಕಾಂಬಳೆ, ರಾಜುಗೌಡ ಪಾಟೀಲ, ರಾಜು ಪರಮಾಜೆ, ಅಬ್ದುಲ ತಾಂಬಟ, ಶ್ರೀಕಾಂತ ಧನಗರ, ಚಂದ್ರಕಾಂತ ಕಾಂತೆ, ಶರತ ಪಾಟೀಲ, ಸಂತೋಷ ಶೇಡಬಾಳೆ, ಮಹಾವೀರ ಪರಮಾಜೆ, ಸುರೇಂದ್ರ ಸಮಾಜೆ, ಅನೇಕ ಜೈನ ಶ್ರಾವಕರು ಉಪಸ್ಥಿತರಿದ್ದರು.

***

# ಪಂತಬಾಳೇಕುಂದ್ರಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ



ಬೆಳಗಾವಿ : ಪಂತ ಬಾಳೇಕುಂದ್ರಿ ಗ್ರಾಮದ ಪರಮಾನಂದ ನಗರದ ರಸ್ತೆ ಹಾಗೂ ಚರಂಡಿ ನಿರ್ಮಾಣದ ಕಾಮಗಾರಿಗೆ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ ಭಾನುವಾರ ಭೂಮಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು.


57.70 ಲಕ್ಷ ರೂ,ಗಳ ವೆಚ್ಚದಲ್ಲಿ ರಸ್ತೆ ಹಾಗೂ ಚರಂಡಿ ನಿರ್ಮಾಣಗೊಳ್ಳಲಿವೆ. ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಅಭಿವೃದ್ಧಿ ಯೋಜನೆಗಳನ್ನು ತರುತ್ತಿದ್ದಾರೆ. ಮೂಲಭೂತ ಸೌಲಭ್ಯಗಳ ಜೊತೆಗೆ ಇನ್ನಷ್ಟು ಅಭಿವೃದ್ಧಿ ಯೋಜನೆಗಳನ್ನು ಕ್ಷೇತ್ರಕ್ಕೆ ತರುವ ಪ್ರಯತ್ನ ಮಾಡಲಾಗುತ್ತಿದೆ ಎಂದು ಚನ್ನರಾಜ ಹಟ್ಟಿಹೊಳಿ ತಿಳಿಸಿದರು.

ಹಿಂದೆಂದೂ ಕಾಣದಷ್ಟು ಅಭಿವೃದ್ಧಿ ಮಾಡುತ್ತಿರುವ ಲಕ್ಷ್ಮೀ ಹೆಬ್ಬಾಳಕರ್ ಅವರ ಕೈ ಬಲಪಡಿಸುವ ಕೆಲಸವನ್ನು ಕ್ಷೇತ್ರದ ಜನರು ಮಾಡಬೇಕು. ಸದಾ ಅವರೊಂದಿಗೆ ನಿಲ್ಲಬೇಕು. ಅಂದಾಗ ಮತ್ತಷ್ಟು ಅಭಿವೃದ್ಧಿ ಮಾಡಲು ಅವರಿಗೆ ಶಕ್ತಿ ಬರುತ್ತದೆ ಎಂದು ಅವರು ತಿಳಿಸಿದರು.

ಈ ವೇಳೆ ಮಲ್ಲಪ್ಪ ಸುಣಗಾರ, ಈರಪ್ಪ ನಾವಲಗಿ, ಗುಲಾಬಿ ಕೋಲಕಾರ್, ಬಿ.ವಿ.ಅಂಗಡಿ, ಮಹಾರುದ್ರ ಬಡಿಗೇರ್, ಸಿದ್ದಪ್ಪ ಮೂಡಲಗಿ, ಅಡಿವೆಪ್ಪ ಮದನಭಾವಿ, ಮಹೇಶ್ ಮುಚ್ಚಂಡಿ, ಕಲ್ಲಮ್ಮ ಪುಡಕಲಕಟ್ಟಿ, ಶಾಂತಾ ಕೋತಿನ್ ಮುಂತಾದವರು ಉಪಸ್ಥಿತರಿದ್ದರು.

****

# ಅಂಬೇಡ್ಕರ್ ಹೆಸರೇ ಅಭಿಮಾನದ ಸಂಕೇತ : ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ : ಅತ್ಯಂತ ಕಷ್ಟದಲ್ಲಿ ಓದಿ ದೇಶಕ್ಕೆ ಮಾದರಿ ಸಂವಿಧಾನ ನೀಡಿರುವ ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರ ಹೆಸರೇ ಅಭಿಮಾನದ ಸಂಕೇತ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಗೋಜಗಾ ಗ್ರಾಮದ ಅಂಬೇಡ್ಕರ್ ಗಲ್ಲಿಯಲ್ಲಿ ವಿಶ್ವರತ್ನ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ ಮೂರ್ತಿಯ ಅಳವಡಿಕೆಯ ಕಾಮಗಾರಿಗೆ ಭಾನುವಾರ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಇಂದು ಮಹಿಳೆಯರು ಸ್ವತಂತ್ರವಾಗಿ ಓಡಾಡುತ್ತಿದ್ದರೆ, ಹಕ್ಕಿನಿಂದ ಮಾತನಾಡುತ್ತಿದ್ದರೆ, ಮಹಿಳೆಯ-ರಿಗೆ ಸಮಾನತೆ ಸಿಕ್ಕಿದ್ದರೆ ಅದು ಅಂಬೇಡ್ಕರ್ ಅವರ ಸಂವಿಧಾನದಿಂದ. ಮಹಿಳೆಗೂ ಜೀವವಿದೆ, ಅಧಿಕಾರ ನಡೆಸುವ ಹಕ್ಕಿದೆ ಎಂದು ಪ್ರತಿಪಾದಿಸಿ, ಸಂವಿಧಾನದಲ್ಲಿ ಅವಕಾಶ ನೀಡಿದ ಅಂಬೇಡ್ಕರ್ ಅವರು ಆಧುನಿಕ ಬಸವಣ್ಣ ಎಂದು ಹೆಬ್ಬಾಳಕರ್ ಹೇಳಿದರು.

ಮುಂದಿನ ಪೀಳಿಗೆಗೆ ಅಂಬೇಡ್ಕರ್ ಅವರ ಜೀವನ ಆದರ್ಶವಾಗುವ ಉದ್ದೇಶದಿಂದ ಎಲ್ಲೆಡೆ ಅಂಬೇಡ್ಕರ್ ಮೂರ್ತಿ, ಅಂಬೇಡ್ಕರ್ ಭವನ ನಿರ್ಮಾಣ ಮಾಡಲಾಗುತ್ತಿದೆ. ನಮ್ಮ ಮಕ್ಕಳಿಗೆ ಮಹಾನ್ ವ್ಯಕ್ತಿಗಳು ಆದರ್ಶವಾಗಬೇಕು ಎನ್ನು ಕಾರಣದಿಂದ ಅಂಬೇಡ್ಕರ್ ಸೇರಿದಂತೆ ಎಲ್ಲ ಮಹಾನ್ ವ್ಯಕ್ತಿಗಳ ಪುತ್ಥಳಿ ನಿಲ್ಲಿಸಲಾಗುತ್ತಿದೆ ಎಂದು ಅವರು ತಿಳಿಸಿದರು. ಕಾರ್ಯಕ್ರಮದಲ್ಲಿ ಯುವರಾಜ ಕದಂ, ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳಕರ್, ಮಹೇಶ ಕಾಂಬಳೆ, ಶಿವಾಜಿ ಯಳಗೆ, ಪದ್ಮರಾಜ ಪಾಟೀಲ, ಕಲ್ಲಪ್ಪ ಕಾಂಬಳೆ, ಪರಶು ನಾಯ್ಕ್, ಪುಂಡಲೀಕ್ ಬಾಂದುರ್ಗೆ, ಲಲಿತಾ ಪಾಟೀಲ, ಶಂಕರ ಸುತಾರ್, ದುರ್ಗಪ್ಪ ದೇವಣ್ಣವರ, ರಾಜಶ್ರೀ ತೋರೆ, ವಿಷ್ಣು ಕಾಂಬಳೆ, ಪಿಡಿಜ ಜಂಬಗಿ, ಜ್ಯೋತಿಬಾ ಚೌಗುಲೆ, ಯುವರಾಜ ಪ್ರಭಾಕರ್ ಮುಂತಾದವರು ಉಪಸ್ಥಿತರಿದ್ದರು.

## ಶಿಕ್ಷಕ ಸಂತೋಷ ಬಂಡೆ ಅವರಿಗೆ 'ಗುರುನಮನ-2025 ರ ಅತ್ಯುತ್ತಮ ಶಿಕ್ಷಕ' ಪ್ರಶಸ್ತಿ ಪ್ರದಾನ



ಇಂಡಿ: ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ಉತ್ತರ ಪ್ರಾಂತ ಜಿಲ್ಲಾ ಘಟಕದಿಂದ ವಿಜಯಪುರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ರವಿವಾರದಂದು ಜರುಗಿದ "ಗುರು ನಮನ-2025 ಸಮಾರಂಭ"ದಲ್ಲಿ ತಾಲೂಕಿನ ಹಿರೇರೂಗಿ ಗ್ರಾಮದ ಯುಬಿಎಸ್ ಶಾಲೆಯ ಇಂಗ್ಲೀಷ್ ಶಿಕ್ಷಕ ಸಂತೋಷ ಬಂಡೆ ಅವರಿಗೆ 'ಸಮಾಜ ವಿಜ್ಞಾನ-ರಾಷ್ಟ್ರೀಯ ಚಿಂತನೆ ವಿಭಾಗದಲ್ಲಿ ಗುರುನಮನ 2025 ರ ಅತ್ಯುತ್ತಮ ಶಿಕ್ಷಕ' ಪ್ರಶಸ್ತಿ ಪ್ರದಾನ ಮಾಡಲಾಯಿತು.
ಶಿಕ್ಷಣ ಕ್ಷೇತ್ರದಲ್ಲಿನ ಅತ್ಯುತ್ತಮ ಸಾಧನೆಗಾಗಿ ಶಿಕ್ಷಕ ಸಂತೋಷ ಬಂಡೆ ಅವರಿಗೆ ಈ ಪ್ರಶಸ್ತಿ ನೀಡಿ ಗೌರವಿಸಲಾಗಿದೆ. ಈ ಸಂದರ್ಭದಲ್ಲಿ ಧಾರವಾಡದ ಖ್ಯಾತ ಶಿಕ್ಷಣ ತಜ್ಞ ಸುರೇಶ ಕುಲಕರ್ಣಿ, ಧಾರವಾಡದ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದ ಸಂಸ್ಕೃತ ಅಧ್ಯಾಪಕ ವಿನಾಯಕ ಭಟ್ ಶೇಡಿಮನೆ, ಶಿಕ್ಷಕ ಸ್ವಾಧ್ಯಾಯದ ಸಂಚಲನಾ ಸಮಿತಿಯ ಅಧ್ಯಕ್ಷ ಬಸವರಾಜ ಕೌಲಗಿ, ಪ್ರಾಂತ ಸಹ ಕಾರ್ಯದರ್ಶಿ ಸಿದ್ದು ಮದರಖಂಡಿ, ಜಿಲ್ಲಾಧ್ಯಕ್ಷ ಬಿ ಎಸ್ ಬಾಪಗೊಂಡ, ಸಿದ್ದೇಶ್ವರ ಶಿಕ್ಷಣ ಸಮೂಹ ಸಂಸ್ಥೆಗಳ ಅಧ್ಯಕ್ಷ ಬಸಯ್ಯ ಹಿರೇಮಠ, ದರಬಾರ ಶಿಕ್ಷಣ ಸಮೂಹ ಸಂಸ್ಥೆಗಳ ಅಧ್ಯಕ್ಷ ರಾಜೇಶ ದರಬಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ನಿಡಗುಂದಿ ಪಟ್ಟಣ ಪಂಚಾಯತ್ ವಾರ್ಡ ನಂ.5 ಉಪ ಚುನಾವಣೆ ಮತದಾರ ಕರಡು ಪಟ್ಟಿ ಪ್ರಕಟ : ಆಕ್ಷೇಪಣೆ ಆಹ್ವಾನ**

ವಿಜಯಪುರ : ರಾಜ್ಯ ಚುನಾವಣಾ ಆಯೋಗದ ಮಾರ್ಗದರ್ಶನ ಜಿಲ್ಲೆಯ ನಿಡಗುಂದಿ ಪಟ್ಟಣ ಪಂಚಾಯತ್ ವಾರ್ಡ-05ರ ಉಪ ಚುನಾವಣೆಗೆ ಸಂಬಂಧಿಸಿದಂತೆ ಮತದಾರ ಕರಡು ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ.

ನಿಡಗುಂದಿ ತಹಶೀಲ್ದಾರ ಕಾರ್ಯಾಲಯ, ಪಟ್ಟಣ ಪಂಚಾಯತ್ ಕಾರ್ಯಾಲಯ ಹಾಗೂ ಸಂಬಂಧಿಸಿದ ಮತಗಟ್ಟೆಗಳಲ್ಲಿ ಸಾರ್ವಜನಿಕರು ಹಾಗೂ ಮತದಾರರ ವೀಕ್ಷಣೆಗೆ ಕರಡು ಪ್ರತಿಯನ್ನು ಇರಿಸಲಾಗಿದೆ. ಪ್ರಕಟಿಸಲಾದ ಕರಡು ಮತದಾರ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ಜುಲೈ 24ರೊಳಗೆ ನಿಡಗುಂದಿ ತಹಶೀಲ್ದಾರರಿಗೆ ಸಲ್ಲಿಸಬೇಕು. ಸ್ವೀಕೃತವಾಗುವ ಆಕ್ಷೇಪಣೆಗಳನ್ನು ಇತ್ಯರ್ಥಪಡಿಸಿ ಅಂತಿಮ ಮತದಾರ ಪಟ್ಟಿಯನ್ನು 2025ರ ಜುಲೈ 25ರಂದು ಪ್ರಕಟಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

ಬೆಳಗಾವಿ, : 2025-26 ನೇ ಸಾಲಿನ ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆ ಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ) ಸಿದ್ದಾರ್ಥ ನಗರ, ಮೈಸೂರಿನ ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಷ್ಯುಲ್ ಆರ್ಟ್ಸ್ (ಬಿ.ವಿ.ಎ) [ ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ಎಸ್.ಇ.ಪಿ ಪದ್ಧತಿ] ದೃಶ್ಯ ಕಲೆಯಲ್ಲಿ ಪ್ರಥಮ ಬಿ.ವಿ.ಎ ಪದವಿ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.
ದ್ವಿತೀಯ ಪಿ.ಯು.ಸಿ ಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಸದರಿ ಪದವಿಯಲ್ಲಿ 3 ನೇ ಸೆಮಿಸ್ಟರನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ ಕಲೆ (ಅಚ್ಚು ಕಲೆ), ಅನ್ವಯ ಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನ ನಡೆಸಲು ಜುಲೈ, 30. 2025 ರ ಒಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸರ್ಕಾರದ ಅಂತರ್ಜಾಲ **htts;//uucms.karnataka.gov.in** ಅಥವಾ **https;//www.cavamysore.karnataka.gov.in** ಮುಖಾಂತರ ಹಾಗೂ ಕಛೇ-ರಿಯ ದೂರವಾಣಿ ಸಂಖ್ಯೆ : 0821-2438931 ಗೆ ಸಂಪರ್ಕಿಸಬಹುದಾಗಿದೆ ಎಂದು ಮೈಸೂ-ರಿನ (ಕಾವಾ) , ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಕಾನಿಪ ಸಂಘದ ವತಿಯಿಂದ ವಿದ್ಯಾರ್ಥಿನಿ ಭಾಗ್ಯಶ್ರೀ ಕುಂಬಾರ ಅವರಿಗೆ ಪ್ರತಿಭಾ ಪುರಸ್ಕಾರ



ಮುದ್ದೇಬಿಹಾಳ: ವಿಜಯಪುರ ನಗರದಲ್ಲಿ ಪತ್ರಿಕಾ ದಿನಾಚರಣೆ ಅಂಗವಾಗಿ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಶನಿವಾರ ವಿಜಯಪುರ ನಗರದ ಕಂದಗಲ್ ಶ್ರೀ ಹನುಮಂತರಾಯ ರಂಗಮಂದಿರದಲ್ಲಿ ಕಾರ್ಯಕ್ರಮ ನಡೆಯಿತು.
ಮುದ್ದೇಬಿಹಾಳ ತಾಲ್ಲೂಕು ಪತ್ರಕರ್ತ ಬಸವರಾಜ ಈ ಕುಂಬಾರ ಅವರ ಮಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ನಾಗರಬೆಟ್ಟ ಎಸ್ ಡಿಕೆ ಪ್ರೌಢಶಾಲೆಯ ವಿದ್ಯಾರ್ಥಿನಿ ಭಾಗ್ಯಶ್ರೀ ಬಸವರಾಜ ಕುಂಬಾರ(ಚವನಭಾವಿ) ಅವ-ರಿಗೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ, ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಎಪಿಎಂಸಿ ಸಚಿವ ಶಿವಾನಂದ ಎಸ್. ಪಾಟೀಲ ಪ್ರತಿಭಾ ಪುರಸ್ಕಾರ,ನಗದು ಬಹುಮಾನ ನೀಡಿ ಗೌರವಿಸಲಾಯಿತು.
ಈ ಸಂದರ್ಭದಲ್ಲಿ ವಿಜಯಪುರ ಜಿಲ್ಲಾ ಕಾರ್ತನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ, ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ. ಸಿ. ಲೋಕೇಶ, ರಾಜ್ಯ ಉಪಾಧ್ಯಕ್ಷ ಭವಾನಿಸಿಂಗ್ ಠಾಕೂರ, ಹಿರಿಯ ಪತ್ರಕರ್ತ ಗೋಪಾಲ ನಾಯಕ, ಜಿಲ್ಲಾಧ್ಯಕ್ಷ ಪ್ರಕಾಶ ಬೆನ್ನೂರ, ಪ್ರಧಾನ ಕಾರ್ಯದರ್ಶಿ ಮೋಹನ ಕುಲಕರ್ಣಿ, ಉಪಾಧ್ಯಕ್ಷ ಇಂದುಶೇಖರ ಮಣೂರ, ರಾಷ್ಟ್ರೀಯ ಮಂಡಳಿ ಸದಸ್ಯ ಮಹೇಶ ವಿ. ಶಟಗಾರ, ರಾಜ್ಯ ಸಮಿತಿ ಸದಸ್ಯರಾದ ಕೆ. ಕೆ. ಕುಲಕರ್ಣಿ, ಕೌಶಲ್ಯಾ ಪನಾಳಕರ, ಎಸ್ಪಿ ಲಕ್ಷಣ ನಿಂಬರಗಿ, ಡಿವೈಎಸ್ಪಿ ಬಸವರಾಜ ಯಲಿಗಾರ, ಮಹಾನಗರ ಪಾಲಿಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಾಧಿಕಾರಿ ಅಮರೇಶ ದೊಡಮನಿ,ಜಿಲ್ಲಾ,ತಾಲ್ಲೂಕು ಕಾನಿಪ ಸಂಘದ ಸದಸ್ಯರು ಸೇರಿದಂತೆ ಭಾಗವಹಿಸಿದ್ದರು

# ಶಿಕ್ಷಣದಲ್ಲಿ ಭಾರತೀಯ ಮೌಲ್ಯಗಳನ್ನು ರೂಢಿಸಿಕೊಳ್ಳಿ- ನಾರಾಯಣ ಸ್ವಾಮಿ



ವಿಜಯಪುರ: ಶಿಕ್ಷಣದಲ್ಲಿ ಭಾರತೀಯತೆಯು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ, ಸಂಸ್ಕೃತಿಯನ್ನು ಅರಿತುಕೊಳ್ಳಲು ಮತ್ತು ರಾಷ್ಟ್ರೀಯ ಏಕತೆಯನ್ನು ಬೆಳೆಸಲು ಬಹಳ ಮುಖ್ಯವಾಗಿದೆ
ಎಂದು ಬಹುಶ್ರುತ ವಿದ್ವಾಂಸ, ಪತ್ರಕರ್ತ,ನಾಟಕಕಾರ, ಚಲನಚಿತ್ರ ನಿರ್ದೇಶಕ ನಾರಾಯಣ ಸ್ವಾಮಿ ಹೇಳಿದರು.

ಅವರು ರವಿವಾರದಂದು ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ಉತ್ತರ ಪ್ರಾಂತ ವಿಜಯಪುರ ಜಿಲ್ಲಾ ಘಟಕದಿಂದ ಜರುಗಿದ ಗುರು ನಮನ ಹಾಗೂ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಭಾರತೀಯ ಶಿಕ್ಷಣವು ವಿದ್ಯಾರ್ಥಿಗಳಿಗೆ ತಮ್ಮ ಸಾಂಸ್ಕೃತಿಕ ಪರಂಪರೆ, ಮೌಲ್ಯ, ಸಂಪ್ರದಾಯಗಳ ಬಗ್ಗೆ ಅರಿವು ಮೂಡಿಸಿ, ಸಾಂಸ್ಕೃತಿಕ ಗುರುತನ್ನು ಬೆಳೆಸಿಕೊಳ್ಳಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಬಾಲಗಾಂವ ಅಮೃತಾನಂದ ಸ್ವಾಮೀಜಿ ಮಾತನಾಡಿ, ಭಾರತೀಯ ಶಿಕ್ಷಣವು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಒತ್ತು ನೀಡುತ್ತದೆ. ನೈತಿ-ಕ ಮೌಲ್ಯಗಳು, ಶಿಸ್ತು ಮತ್ತು ಸಾಮಾಜಿಕ ಜವಾಬ್ದಾರಿಗಳನ್ನು ಕಲಿಸುತ್ತದೆ ಎಂದರು. ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಕೌಲಗಿ ಮಾತನಾಡಿ, ಶಿಕ್ಷಣದಲ್ಲಿ ಭಾರತೀಯತೆಯನ್ನು ಅಳವಡಿಸಿಕೊ ಳ್ಳುವುದು ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಮತ್ತು ರಾಷ್ಟ್ರದ ಪ್ರಗತಿಗೆ ಅವಶ್ಯಕವಾಗಿದೆ ಎಂದು ಹೇಳಿದರು. ಅತಿಥಿಗಳಾಗಿ ಜಿಲ್ಲಾ ಉಪಾಧ್ಯಕ್ಷೆ ಶೀಲಾ ಬಿರಾದಾರ, ದರಬಾರ ಶಿಕ್ಷಣ ಸಮೂಹ ಸಂಸ್ಥೆಗಳ ಆಡಳಿತಾಧಿಕಾರಿ ವಿನಾಯಕ ಗ್ರಾಮಪುರೋಹಿತ, ಜಿಲ್ಲಾಧ್ಯಕ್ಷ ಬಿ ಎಸ್ ಬಾಪಗೊಂಡ ಉಪಸ್ಥಿತರಿದ್ದರು. ಪ್ರಾಂತ ಸಹಕಾರ್ಯದರ್ಶಿ ಸಿದ್ದು ಮದರಖಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಸಹಕಾರ್ಯದರ್ಶಿ ಸಂತೋಷ ಬಂಡೆ ಧ್ಯೇಯ ಶ್ಲೋಕ ಮತ್ತು ವಾಕ್ಯ ಹೇಳಿದರು.11 ಜನ ಸಾಧಕರಿಗೆ ವಿವಿಧ ವಿಭಾಗದಲ್ಲಿ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಲಾಯಿತು.

ಬಸವರಾಜ ಹೊಸಮನಿ ಸ್ವಾಗತಿಸಿದರು. ಡಾ ಸುಮಾ ಬೋಳರೆಡ್ಡಿ ನಿರೂಪಿಸಿದರು. ಜಿಲ್ಲಾ ಕಾರ್ಯದರ್ಶಿ ಮಲ್ಲು ಗುಡ್ಡದ ವಂದಿಸಿದರು.

# ಯರಗಟ್ಟಿ: ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ



ಸವದತ್ತಿ-ಯರಗಟ್ಟಿ ತಾಲೂಕಿನ ಹಿರೇಬೂದನೂರ, ಚಚಡಿ, ಇಂಚಲ, ಹಾರುಗೊಪ್ಪ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಿಗೆ ಶನಿವಾರ ಭೇಟಿ ನೀಡಿ ವಿವಿಧ ಯೋಜನೆಗಳ ಕಾಮಗಾರಿಗಳನ್ನು ಪರಿಶೀಲಿಸಿದರು.

ಹಿರೇಬೂದನೂರ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಹಿರೇಬೂದನೂರ ಗ್ರಾಮಕ್ಕೆ ಭೇಟಿ ನೀಡಿ ಜಲ ಜೀವನ ಮಿಷನ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿ ಹಾಗೂ ನೀರಿನ ನಳಗಳನ್ನು ಪರಿಶೀಲಿಸಿ ಗ್ರಾಮಸ್ಥರಿಂದ ಮಾಹಿತಿಯನ್ನು ಪಡೆದುಕೊಂಡರು ಬಳಿಕ ಮಹಿಳಾ ಒಕ್ಕೂಟದ ಸದಸ್ಯರೊಂದಿಗೆ ಸಂವಾದ ನಡೆಸಿ ಯೋಜನೆಯ ಕುರಿತು ಮಾಹಿತಿಯನ್ನು ಪಡೆದುಕೊಂಡರು.

ನಂತರ ಹಿರೇಬೂದನೂರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೈಗೊಂಡಿರುವ ಶಾಲಾ ಅಭಿವೃದ್ಧಿ ಕಾಮಗಾ-ರಿಗಳನ್ನು ಪರಿಶೀಲಿಸಿದರು.

ಬಳಿಕ ಚಚಡಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮನರೇಗಾ ಯೋಜನೆಯಡಿ ಕೈಗೊಂಡಿರುವ ಕಾಮಗಾ-ರಿಗಳನ್ನು ಪರಿಶೀಲಿಸಿದರು.

ನಂತರ ಇಂಚಲ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಇಂಚಲ ಹಾಗೂ ಮುತವಾಡ ಗ್ರಾಮಗಳಿಗೆ ಭೇಟಿ ನೀಡಿ ಜಲ ಜೀವನ ಮಿ?ನ್ ಯೋಜನೆಯಡಿ ಕೈಗೊಂಡಿರು ಕಾಮಗಾರಿ ಹಾಗೂ ಕುಡಿಯುವ ನೀರಿನ ನಳಗಳನ್ನು ಪರಿಶೀಲಿಸಿ ಗ್ರಾಮಸ್ಥರಿಂದ ಮಾಹಿತಿಯನ್ನು ಪಡೆದುಕೊಂಡರು.

ಬಳಿಕ ಹಾರುಗೊಪ್ಪ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಗೊಂತಮಾರ ಗ್ರಾಮಕ್ಕೆ ಭೇಟಿ ನೀಡಿ ಜಲಜೀವನ ಮಿಷನ್ ಯೋಜನೆಯಡಿ ಕೈಗೊಂಡಿರುವ ಕಾಮಗಾರಿ ಹಾಗೂ ಕುಡಿಯುವ ನೀರಿನ ನಳಗಳನ್ನು ಪರಿಶೀಲಿಸಿ ಸಲಹೆ ಸೂಚನೆಗಳನ್ನು ನೀಡಿದರು.

ಈ ಸಂದರ್ಭದಲ್ಲಿ ತಾ. ಪಂ. ಕಾರ್ಯನಿರ್ವಾಹಕ ಅಧಿಕಾರಿಗಳು ಆನಂದ ಬಡಕುಂದ್ರಿ, ಕಾರ್ಯನಿರ್ವಾಹಕ ಅಭಿಯಂತರರು ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಬೆಳಗಾವಿ ವಿಭಾಗ, ಕಿರಣ ಗೋರ್ಪಡೆ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಗ್ರಾ.ಕು.ನೀ.& ನೈರ್ಮಲ್ಯ ಸವದತ್ತಿ ಬಿ. ವಿ. ಅಯ್ಯನಗೌಡರ, ಮಾನ್ಯ ತಾಪಂ ಸಹಾಯಕ ನಿರ್ದೇಶಕರು (ಗ್ರಾ.ಉ) ಶ್ರೀ ಆರ್ ಬಿ ರಕ್ಕಸಗಿ, ತಾಪಂ ಸಹಾಯಕ ನಿರ್ದೇಶಕರು (ಪಂ.ರಾ) ಳ ಆರ್ ಎ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿಗಳು ಮೋಹನ ದಂಡಿನ, ಅಭಿವೃದ್ಧಿ ಅಧಿಕಾರಿಗಳು, ಗ್ರಾಪಂ ಸಿಬ್ಬಂದಿಗಳು, ಗ್ರಾಪಂ ಸದಸ್ಯರು, ಇನ್ನಿತರರು ಉಪಸ್ಥಿತರಿದ್ದರು.

## ರಚನಾತ್ಮಕ ಕೆಲಸಗಳ ಮೂಲಕ ನಿರಂತರ ಕ್ರಿಯಾಶೀಲತೆಯನ್ನು ಉಳಿಸಿಕೊಳ್ಳಿ: ಚನ್ನರಾಜ ಹಟ್ಟಿಹೊಳಿ

# ಪಂತನಗರ ಕ್ಷೇಮಾಭಿವೃದ್ಧಿ ಸಂಘ ಉದ್ಘಾಟನೆ

ಬೆಳಗಾವಿ : ಪಂತ ಬಾಳೇಕುಂದ್ರಿ ಗ್ರಾಮದ ಶ್ರೀ ಪಂತನಗರ ರಹವಾಸಿಗಳ ಕ್ಷೇಮಾಭಿವೃದ್ಧಿ ಸಂಘವನ್ನು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಭಾನುವಾರ ಉದ್ಘಾಟಿಸಿದರು.

ಪಂತನಗರದ ನಿವಾಸಿಗಳು ಬಹಳಷ್ಟು ಶ್ರಮ ಜೀವಿಗಳು, ದೇಶಕ್ಕಾಗಿ ಸಾಕಷ್ಟು ತ್ಯಾಗ, ಕೊಡುಗೆ ನೀಡಿದ್ದಾರೆ. ಇಲ್ಲಿನ ಶೇ.70ಕ್ಕಿಂತ ಹೆಚ್ಚಿನ ಜನರು ನಿವೃತ್ತ ಸೈನಿಕರು, ಉಳಿದವರು ಕೂಡ ಶಿಕ್ಷಕರಾಗಿ, ಬೇರೆ ಬೇರೆ ರೀತಿಯ ಸರಕಾರಿ ಸೇವೆಯಲ್ಲಿದ್ದವರು. ಇಲ್ಲಿನ ಅಭಿವೃದ್ಧಿಗಾಗಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಎಲ್ಲ ರೀತಿಯ ಸಹಕಾರ ನೀಡುತ್ತಿದ್ದಾರೆ ಎಂದು ಚನ್ನರಾಜ ಹೇಳಿದರು.

ಸುಮಾರು 2.5ಕಿಮೀ ಸಿಸಿ ರಸ್ತೆ ನಿರ್ಮಾಣ ಮಾಡಲಾಗಿದೆ. ಇಲ್ಲಿ ಸಮುದಾಯ ಭವನ ನಿರ್ಮಾಣ ಮಾಡುವುದಕ್ಕಾಗಿ 50 ಲಕ್ಷ ರೂ. ಅನುದಾನ ಮಂಜೂರು ಮಾಡಿಸಲಾಗಿದೆ. ಮುಂದಿನ ದಿನಗಳಲ್ಲಿ ನಿಮ್ಮ ಅಗತ್ಯಕ್ಕೆ ತಕ್ಕಂತೆ ಅಭಿವೃದ್ಧಿ ಕೈಗೊಳ್ಳಲಾಗುವುದು ಎಂದರು.

ಈ ಸಂಘ ನಿಮ್ಮಲ್ಲಿರುವ ಒಗ್ಗಟ್ಟಿನ ಪ್ರತೀಕ, ಪರಸ್ಪರರ ಮೇಲಿರುವ ಕಾಳಜಿ, ಗೌರವ, ಪ್ರೀತಿ, ವಿಶ್ವಾಸದ ಸಂಕೇತ ಎಂದು ನಾನು ಭಾವಿಸುತ್ತೇನೆ. ಇಲ್ಲಿನ ಹೆಚ್ಚಿನವರು ನಿವೃತ್ತಿ ಜೀವನ ನಡೆಸುತ್ತಿರುವವರು, ಹಾಗಾಗಿ ಪ್ರತಿಯೊಬ್ಬರಿಗೂ ಬೇರೆಯವರ ಸಹಾಯ, ಸಹಕಾರ ಅಗತ್ಯ. ಈ ಸಂಘದ ಮೂಲಕ ಇಲ್ಲಿನ ಪ್ರತಿಯೊಬ್ಬರಲ್ಲಿ, ನಿಮ್ಮೊಂದಿಗೆ ನಾವಿದ್ದೇವೆ, ನಮ್ಮೊಂದಿಗೆ ನೀವಿದ್ದೀರಿ ಎನ್ನುವ ಸಂದೇಶ ಸಾರುವ



ಜೊತೆಗೆ, ಎಲ್ಲರಲ್ಲಿ ಆತ್ಮ ವಿಶ್ವಾಸ ಮೂಡಿಸುವ, ಧೈರ್ಯ ತುಂಬುವ ಕೆಲಸ ಮಾಡಿದ್ದೀರಿ. ಎಲ್ಲರ ಸುರಕ್ಷತೆಯ, ಪರಸ್ಪರ ಸಾಮರಸ್ಯದ ಜವಾಬ್ದಾ-ರಿಯನ್ನು ಪ್ರತಿಯೊಬ್ಬರೂ ಹೊತ್ತಿದ್ದೀರಿ. ಒಟ್ಟಾಗಿ ಚಟುವಟಿಕೆಗಳನ್ನು ಆಯೋಜಿಸುವ ಮೂಲಕ, ರಚನಾತ್ಮಕ ಕೆಲಸಗಳ ಮೂಲಕ ನಿರಂತರ ಕ್ರಿಯಾಶೀಲತೆಯನ್ನು ಉಳಿಸಿಕೊಳ್ಳಬಹುದು ಎಂದು ಚನ್ನರಾಜ ಹೇಳಿದರು.

ನಿಮ್ಮ ಮಕ್ಕಳಲ್ಲಿ ಸಂಸ್ಕಾರ ಬೆಳೆಸುವ, ಅವ-ರಿಗೆ ಜೀವನ ವಿಧಾನ ಕಲಿಸುವ ಕೆಲಸವನ್ನು ಸಹ ಸಂಘದ ವತಿಯಿಂದ ಮಾಡಬೇಕು. ಮಕ್ಕಳಲ್ಲಿ ಜೀವನಕ್ಕೆ ಬೇಕಾದಂತಹ ಕೌಶಲ್ಯಗಳನ್ನು ಬೆಳೆಸುವಂತಹ ಕೆಲಸವನ್ನು ಸಹ ಇಲ್ಲಿ ಯೋಜಿಸಬಹುದು. ಕ್ಷಣದಿಂದ ಕ್ಷಣಕ್ಕೆ ಬೆಳೆಯುತ್ತಿರುವ, ಬದಲಾಗುತ್ತಿರುವ ಈ ಸ್ಪರ್ಧಾತ್ಮಕ ಜಗತ್ತಿನಲ್ಲಿ ನಿಮ್ಮ ಮಕ್ಕಳು ಈಜಿ ದಡ ಸೇರಬೇಕಾದರೆ ಅವರನ್ನು ಚಿಕ್ಕವರಿದ್ದಾಗಲೇ ಆ ಮಟ್ಟಿಗೆ ಸಜ್ಜುಗೊಳಿಸುವ ಕೆಲಸವನ್ನು ಸಹ ನೀವು ಯೋಚಿಸಬಹುದು. ಹಾಗೆಯೇ, ನಿವೃತ್ತರು ಸದಾ ಕ್ರಿಯಾಶೀಲರಾಗಿರುವ ದಿಸೆಯಲ್ಲಿ ಏನೆಲ್ಲ ಮಾಡಬಹುದೋ ಅದನ್ನು ಕೂಡ ಯೋಚಿಸಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಇಂತಹ ಸಂಘಗಳಿದ್ದಾಗ ನಿಮ್ಮ ಪ್ರದೇಶದ ಅಭಿವೃದ್ಧಿ ಸಾಧ್ಯವಾಗುತ್ತದೆ, ಎರಡು ಕೈಗಳಿಗಿಂತ ಹತ್ತು ಕೈಗಳು ಸೇರಿದಾಗ, ನೂರು ಕೈಗಳು ಸೇ-ರಿದಾಗ ಅದರ ಪರಿಣಾಮವೇ ಬೇರೆಯಾಗುತ್ತದೆ. ಗಾಗಿ ಈ ಸಂಘದ ರೂವಾರಿಗಳನ್ನು ನಾನು ಅಭಿನಂದಿಸುತ್ತೇನೆ, ಎಲ್ಲರೂ ಇದಕ್ಕೆ ಸಹಕಾರ ನೀಡುವ ಮೂಲಕ ವಯಕ್ತಿಕ ಬೆಳವಣಿಗೆಗೆ, ತನ್ಮೂಲಕ ಸಂಘದ, ನಿಮ್ಮ ಪಂತ ನಗರದ ಬೆಳವಣಿಗೆಗೆ ಕಾರಣೀಕರ್ತರಾಗುತ್ತೀರಿ. ಬೆಳಗಾವಿ ಗ್ರಾಮೀಣ ಕ್ಷೇತ್ರವನ್ನು ಬಹಳಷ್ಟು ಅಭಿವೃದ್ಧಿ ಮಾಡಬೇಕೆಂದು ಲಕ್ಷ್ಮೀ ಹೆಬ್ಬಾಳಕರ್ ಅವರು ಕಳೆದ 7-8 ವರ್ಷಗಳಿಂದಲೂ ಅವಿಶ್ರಾಂತವಾಗಿ ಶ್ರಮಿಸುತ್ತಿದ್ದಾರೆ.
7 ವರ್ಷದ ಹಿಂದೆ ಹೋಲಿಸಿದರೆ ಈಗ ಕ್ಷೇತ್ರದ ಚಿತ್ರಣ ಸಾಕಷ್ಟು ಬದಲಾವಣೆಯಾಗಿದೆ. ಮೂಲಭೂತ ಸೌಲಭ್ಯಗಳ ಅಭಿವೃದ್ಧಿಯ ಒಂದು ಹಂತ ಬಹುತೇಕ ಮುಗಿದಿದ್ದು, ಮುಂದಿನ ದಿನಗಳಲ್ಲಿ ಕ್ಷೇತ್ರಕ್ಕೆ ಹಲವಾರು ಅಭಿವೃದ್ಧಿ ಯೋಜನೆಗಳನ್ನು ತರುವ ಮತ್ತೊಂದು ಹಂತದ ಅಭಿವೃದ್ಧಿಯನ್ನು ಕೈಗೊಳ್ಳಲಿದ್ದಾರೆ. ಇದಕ್ಕೆ ನಿಮ್ಮೆಲ್ಲರ ಸಹಕಾರ ಅಗತ್ಯವಾಗಿದೆ, ಅವರು ನಿಮ್ಮೊಂದಿಗೆ ನಿಂತ ಹಾಗೆಯೇ ನೀವು ಕೂಡ ಸದಾ ಅವರೊಂದಿಗೆ, ನನ್ನ ಅಭಿವೃದ್ಧಿಯ ಕೆಲಸಗಳೊಂದಿಗೆ ನಿಲ್ಲುತ್ತೀರಿ ಎಂದು ಆಶಿಸುತ್ತೇನೆ ಎಂದು ಚನ್ನರಾಜ ಹಟ್ಟಿಹೊಳಿ ಹೇಳಿದರು.
ಘಾಳೇಶ್ವರ ಮಠದ ಶ್ರೀ ಚಿದಾನಂದ ಮಹಾಸ್ವಾಮಿಗಳು, ಸಂಘದ ಅಧ್ಯಕ್ಷ ರಾಮಪ್ಪ ಹಟ್ಟಿ, ಉಪಾಧ್ಯಕ್ಷ ಶಂಕರಾನಂದ ಮದಿಹಳ್ಳಿ, ಸಂಘದ ಪದಾಧಿಕಾರಿಗಳು, ಮಾಜಿ ಸೈನಿಕರ ಕಲ್ಯಾಣ ಸಂಘದ ಸರ್ವ ಸದಸ್ಯರು, ಡಾ.ಎಸ್. ರಾಧಾಕೃಷ್ಣ ಗುರುಬಳಗ ಮತ್ತು ಪಂತ ನಗರದ ಸಮಸ್ತ ನಾಗರಿಕರು ಉಪಸ್ಥಿತರಿದ್ದರು.

# ಆರೋಗ್ಯ ಕೇಂದ್ರದ ವತಿಯಿಂದ ಬೀಳ್ಕೊಡುಗೆ ಸಮಾರಂಭ



ಯರಗಟ್ಟಿ: ತಾಲೂಕಾಯಾದ್ಯಂತ ಸೇವೆ ಮೂಲಕ ಜನ ಜನಿತರಾಗಿದ್ದ ಸಮುದಾಯದ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಬಿ. ಎಸ್. ಬೆಳ್ಳೂರು ಹಾಗೂ ಸಿಬ್ಬಂದಿಗಳಾದ ಐ. ಆರ್. ಗಂಜಿ, ಮಹಾಂತೇಶ ಕತ್ತಿ, ಎನ್. ಎಮ್. ಹಾರೂಗೊಪ್ಪ, ಶ್ರೀದೇವಿ ಹಾವನ್ನವರ, ಅಶೋಕ ನೀಲನ್ನವರ, ಫಕ್ಕೀರಪ್ಪ ನೇಸರಗಿ ಸಮುದಾಯದ ಆರೋಗ್ಯ ಕೇಂದ್ರದ ವತಿಯಿಂದ ಬೀಳ್ಕೊಡುಗೆ ಸಮಾರಂಭ ಏರ್ಪಡಿಸಲಾಗಿತ್ತು.

ಆಸ್ಪತ್ರೆಯ ಸಭಾಂಗಣದ ಆವರಣದಲ್ಲಿ ವೈದ್ಯ ವೃತ್ತಿಯಲ್ಲಿಉತ್ತಮ ಹೆಸರು ಗಳಿಸಿದ್ದ ಡಾ. ಬಿ. ಎಸ್. ಬಳ್ಳೂರ ಅವರು ಹಾಗೂ ಆಸ್ಪತ್ರೆಯ ಸಿಬ್ಬಂದಿ ವರ್ಗದವರಿಗೆ ಆತ್ಮೀಯವಾಗಿ ಬೀಳ್ಕೊಟ್ಟರು.

ಇದೇ ವೇಳೆ ತಾಲೂಕಾ ವೈದ್ಯಾಧಿಕಾರಿ ಡಾ. ಶ್ರೀಪಾದ ಸಬನಿಸ್ ಮಾತನಾಡಿ, ವೈದ್ಯೋ ನಾರಾಯಣೋ ಹರಿ ಎಂಬ ಮಾತಿನಂತೆ ಡಾ.ಬಿ. ಎಸ್. ಬೆಳ್ಳೂರ ಅವರು ಯರಗಟ್ಟಿ ಭಾಗದಲ್ಲಿ ಉತ್ತಮ ಹೆಸರನ್ನು ಗಳಿಸಿದ್ದಾರೆ.

ತಮ್ಮ 20 ವರ್ಷದ ಸುದೀರ್ಘ ಸೇವೆಯಲ್ಲಿ ಉತ್ತಮವಾಗಿ ಕಾರ್ಯ ನಿರ್ವಹಿಸುವುದರ ಮೂಲಕ ಜನಮನ್ನಣೆ ಗಳಿಸಿದ್ದಾರೆ. ಇಂತಹ ವೈದ್ಯರು ನಮ್ಮ ಯರಗಟ್ಟಿಯಲ್ಲಿ ಸೇವೆ ಸಲ್ಲಿಸಿದ್ದು, ನಮ್ಮೆಲ್ಲರ ಭಾಗ್ಯ ಅವರ ವರ್ಗಾವಣೆ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ಈ ವೇಳೆ ಹಿರಿಯ ವೈದ್ಯಾಧಿಕಾರಿ ಡಾ ಆರ್. ಬಿ ಯರರ್ಝವಿ, ಡಾ ಸಚಿನ ಉಪ್ಪಿನ, ಡಾ ಮೇಘರಾಜ, ಡಾ ಕಾರ್ತಿಕ ವಾಲಿ, ಡಾ ರಮಾಶ್ರೀ ಕಣಗಲಿ, ಎಂ ಎಂ ಅಂಗಡಿ , ಸುನಿಲ ಕಾಶನ್ನವರ, ಮಹಾಂತೇಶ ಹಿರೇಮಠ, ಮಂಜುನಾಥ ಸಿಂಗನ್ನವರ, ರಾಜಗೋಳಿ ಸಮುದಾಯದ ಆರೋಗ್ಯ ಕೇಂದ್ರಜ ಎಲ್ಲ ವೈದ್ಯಾಧಿಕಾರಿಗಳು, ಸಿಬ್ಬಂದಿಯವ–ರಿಗೆ ಆಶಾಕಾರ್ಯಕರ್ತೆಯರು ಅಂಗನವಾಡಿ ಕಾರ್ಯಕರ್ತೆಯರು ಇದ್ದರು.

***

# ಶಿಕ್ಷಣದಲ್ಲಿ ಭಾರತೀಯ ಮೌಲ್ಯಗಳನ್ನು ರೂಢಿಸಿಕೊಳ್ಳಿ- ನಾರಾಯಣ ಸ್ವಾಮಿ

ವಿಜಯಪುರ: ಶಿಕ್ಷಣದಲ್ಲಿ ಭಾರತೀಯತೆಯು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ, ಸಂಸ್ಕೃತಿಯನ್ನು ಅರಿತುಕೊಳ್ಳಲು ಮತ್ತು ರಾಷ್ಟ್ರೀಯ ಏಕತೆಯನ್ನು ಬೆಳೆಸಲು ಬಹಳ ಮುಖ್ಯವಾಗಿದೆ
ಎಂದು ಬಹುಶ್ರುತ ವಿದ್ವಾಂಸ, ಪತ್ರಕರ್ತ,ನಾಟಕಕಾರ, ಚಲನಚಿತ್ರ ನಿರ್ದೇಶಕ ನಾರಾಯಣ ಸ್ವಾಮಿ ಹೇಳಿದರು.

ಅವರು ರವಿವಾರದಂದು ನಗರದ ಕಂದಗಲ್ ಹನುಮಂತರಾಯ ರಂಗಮಂದಿರದಲ್ಲಿ ಭಾರತೀಯ ಶಿಕ್ಷಣ ಮಂಡಲ ಕರ್ನಾಟಕ ಉತ್ತರ ಪ್ರಾಂತ ವಿಜಯಪುರ ಜಿಲ್ಲಾ ಘಟಕದಿಂದ ಜರುಗಿದ ಗುರು ನಮನ ಹಾಗೂ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಪ್ರದಾನ ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.



ಭಾರತೀಯ ಶಿಕ್ಷಣವು ವಿದ್ಯಾರ್ಥಿಗಳಿಗೆ ತಮ್ಮ ಸಾಂಸ್ಕೃತಿಕ ಪರಂಪರೆ, ಮೌಲ್ಯ, ಸಂಪ್ರದಾಯಗಳ ಬಗ್ಗೆ ಅರಿವು ಮೂಡಿಸಿ, ಸಾಂಸ್ಕೃತಿಕ ಗುರುತನ್ನು ಬೆಳೆಸಿಕೊಳ್ಳಲು ಸಹಾಯ ಮಾಡುತ್ತದೆ ಎಂದು ಹೇಳಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಬಾಲಗಾಂವ ಅಮೃತಾನಂದ ಸ್ವಾಮೀಜಿ ಮಾತನಾಡಿ, ಭಾರತೀಯ ಶಿಕ್ಷಣವು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಒತ್ತು ನೀಡುತ್ತದೆ. ನೈತಿ–ಕ ಮೌಲ್ಯಗಳು, ಶಿಸ್ತು ಮತ್ತು ಸಾಮಾಜಿಕ ಜವಾಬ್ದಾರಿಗಳನ್ನು ಕಲಿಸುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಉಪಾಧ್ಯಕ್ಷ ಬಸವರಾಜ ಕೌಲಗಿ ಮಾತನಾಡಿ, ಶಿಕ್ಷಣದಲ್ಲಿ ಭಾರತೀಯತೆಯನ್ನು ಅಳವಡಿಸಿಕೊಳ್ಳುವುದು ವಿದ್ಯಾರ್ಥಿಗಳ ಸಮಗ್ರ ಅಭಿವೃದ್ಧಿಗೆ ಮತ್ತು ರಾಷ್ಟ್ರದ ಪ್ರಗತಿಗೆ ಅವಶ್ಯಕವಾಗಿದೆ ಎಂದು ಹೇಳಿದರು.

ಅತಿಥಿಗಳಾಗಿ ಜಿಲ್ಲಾ ಉಪಾಧ್ಯಕ್ಷೆ ಶೀಲಾ ಬಿರಾದಾರ, ದರಬಾರ ಶಿಕ್ಷಣ ಸಮೂಹ ಸಂಸ್ಥೆಗಳ ಆಡಳಿತಾಧಿಕಾರಿ ವಿನಾಯಕ ಗ್ರಾಮಪುರೋಹಿತ, ಜಿಲ್ಲಾಧ್ಯಕ್ಷ ಬಿ ಎಸ್ ಬಾಪಗೊಂಡ ಉಪಸ್ಥಿತರಿದ್ದರು. ಪ್ರಾಂತ ಸಹಕಾರ್ಯದರ್ಶಿ ಸಿದ್ದು ಮದರಖಂಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾ ಸಹಕಾರ್ಯದರ್ಶಿ ಸಂತೋಷ ಬಂಡೆ ಧ್ಯೇಯ ಶ್ಲೋಕ ಮತ್ತು ವಾಕ್ಯ ಹೇಳಿದರು.11 ಜನ ಸಾಧಕರಿಗೆ ವಿವಿಧ ವಿಭಾಗದಲ್ಲಿ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ನೀಡಲಾಯಿತು.

ಬಸವರಾಜ ಹೊಸಮನಿ ಸ್ವಾಗತಿಸಿದರು. ಡಾ ಸುಮಾ ಬೋಳರೆಡ್ಡಿ ನಿರೂಪಿಸಿದರು. ಜಿಲ್ಲಾ ಕಾರ್ಯದರ್ಶಿ ಮಲ್ಲು ಗುಡ್ಡದ ವಂದಿಸಿದರು.

# ಶಾಂತಿಸಾಗರ ಮುನಿಗಳ ಪುಣ್ಯತಿಥಿ ಸಂಭ್ರಮದಿಂದ ಆಚರಿಸೋಣ



ಜಮಖಂಡಿ: ಚಾರಿತ್ರ್ಯ ಚಕ್ರವರ್ತಿ ಶ್ರೀಶಾಂತಿಸಾಗರ ಮುನಿ ಮಹಾರಾಜರ 70ನೇ ಪುಣ್ಯತಿಥಿ ಆಚರಣೆಗೆ ಅವಕಾಶ ಲಭಿಸಿದ್ದು ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಜನತೆ ಪುಣ್ಯವಂತರು ಎಂದು ಮಹಾರಾಷ್ಟ್ರದ ಜೈನ ಸಮುದಾಯದ ಮುಖ್ಯಸ್ಥ ಬಾಳಾಸಾಬ ಪಾಟೀಲ ಹೇಳಿದರು.

ನಗರದ ಪ್ರಭಾತನಗರ ಬಡಾವಣೆಯಲ್ಲಿರುವ ಶ್ರೀ ಪಾರ್ಶ್ವನಾರ್ಥ ದಿಗಂಬರ ಜೈನ ಮಂದಿರದಲ್ಲಿ ಚಾರತ್ರ್ಯ ಚಕ್ರವರ್ತಿ 108 ಶ್ರೀಶಾಂತಿಸಾಗರಮುನಿ ಮಹಾರಾಜರ 70ನೇ ಪುಣ್ಯತಿಥಿ ಸಂಭ್ರಮದ ಆಚ–ರಣೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಚಾರಿತ್ರ್ಯ ಚಕ್ರವರ್ತಿ ಶ್ರೀಶಾಂತಿಸಾಗರ ಮುನಿ ಮಹಾರಾಜರ 70ನೇ ಪುಣ್ಯತಿಥಿ ಸಮಾರಂಭವನ್ನು ಸಂಭ್ರಮದಿಂದ ಅರ್ಥಪೂರ್ಣವಾಗಿ ಎಲ್ಲರೂ ಆಚರಿಸೋಣ. ಬೃಹತ್ ಸಮಾರಂಭ ಯಶಸ್ವಿಗಾಗಿ ಪ್ರತಿಯೊಬ್ಬರು ತನು–ಮನ–ಧನ ಸಹಾಯ ಮಾಡಬೇಕು. ಸಮೀತಿಯವರು ವಹಿಸುವ ಸೂಚಿಸುವ ಎಲ್ಲ ಜವಾಬ್ದಾರಿಗಳನ್ನು ಸಮಾಜ ಬಂಧುಗಳು ಅಚ್ಚುಕಟ್ಟಾಗಿ ಮಾಡಬೇಕು. ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಪ್ರತಿಯೊಬ್ಬರ ಸಹಕಾರ ಅಗತ್ಯವಿದೆ. ಅಗಷ್ಟ ಅಥವಾ ಸಪ್ಟೆಂಬರ ತಿಂಗಳಲ್ಲಿ ಪುಣ್ಯತಿಥಿ ಆಚರಣೆ ದಿನಾಂಕ ನಿಗದಿಗೊಳ್ಳಲಿದೆ ಎಂದರು.

ವೇದಿಕೆಯಲ್ಲಿ ಅಧ್ಯಕ್ಷ ಬಾಳಾಸಾಬ ಪಾಟೀಲ, ಉಪಾಧ್ಯಕ್ಷ ಸುಭಾಷ ಮಗದುಮ್, ಕಾರ್ಯದರ್ಶಿ ಅಜೀತ ಬಂಢೆ, ಖಜಾಂಚಿ ರಾವಸಾಹೇಬ ಕೊಣ್ಣೂರ, ಅಭಯಕುಮಾರ ಬಾಗಾದೆ, ಆನಂದ ಉಗಾರೆ, ಜಿನಗೊಂಡ ಪಾಟೀಲ, ರಾವಸಾಬ ಪಾಟೀಲ, ಬಾಹುಬಲಿ ಶಿರಗಾರ, ನೇಮಣ್ಣ ಜಮಖಂಡಿ, ದಯಾನಂದ ಶಿರಗಾರ, ಬಿ.ಪಿ.ನ್ಯಾಮಗೌಡ, ರಾಜ–ಕುಮಾರ ಡೋರ್ಲೆ, ಜೆ.ಜೆ.ಪಾಟೀಲ, ವೈಭವ ಚೌಗಲೆ, ಅಜೀತ ಮಡಕೆ, ಪಂಕಜ ಪಾಟೀಲ, ನೀತಿಶ ದೇಸಾಯಿ, ಪ್ರವೀಣ ನಾಡಗೌಡ, ಸಾಗರ ಆಲಗೂರ, ಅಣ್ಣಪ್ಪ ನಂದಗಾವ, ಅಭಯಕುಮಾರ ನಾಂದ್ರೇಕರ, ಮಹಾವೀರ ಗಣಿ, ಆರ್.ಪಿ.ನ್ಯಾಮಗೌಡ, ಎ.ಎನ್. ರಾಮಗೊಂಡ ಸಹಿತ ಸಮಾಜದ ಹಿರಿಯರು ಇದ್ದರು.

# ಕೃಷಾನದಿ ತುಂಬಿದೆ- ಮಳಗಾಲವಿದ್ದರೂ ನೀರಿಗೆ ಪರದಾಟ



ಜಮಖಂಡಿ: ನಗರದ ಪಕ್ಕದಲ್ಲಿರುವ ಕಡಕೋಳ ಪುನರ್ವಸತಿ ಕೇಂದ್ರದಲ್ಲಿ ನೀರಿನ ಸಮಸ್ಯೆ ಉಂಟಾಗಿದ್ದು ಶೌಚಕ್ಕೂ ನೀರಿಲ್ಲ. ಇಂದಲ್ಲ ನಾಳೆಗೆ ನೀರಿನ ಸಮಸ್ಯೆ ಬಗೆ ಹರಿಯಲಿದೆ ಎಂದು ಕೊಂಡಿದ್ದ ನಿವಾಸಿಗಳ ಗೋಳು ಹೇಳತೀರದಾಗಿದೆ. ಕಳೆದ 20 ದಿನಗಳಿಂದ ನೀರು ಪೂರೈಕೆ ಸ್ಥಗಿತಗೊಂಡಿದೆ. ಮೊದಲು ಬೇಸಿಗೆ ಕಾಲದಲ್ಲಿ ನದಿಯಲ್ಲಿ ನೀರಿಲ್ಲ ಅದಕ್ಕಾಗಿ ಸರಬರಾಜು ಮಾಡಲಾಗಿಲ್ಲ ಎಂದೆಲ್ಲ ಸಬೂಬು ಹೇಳುತ್ತಿದ್ದ ಅಧಿಕಾರಿಗಳು ಈಗ ಕೃಷ್ಣಾನದಿಯಲ್ಲಿ ನೀರು ಇದ್ದರೂ ಕಡಕೋಳ ಪುನರವಸತಿ ಕೇಂದ್ರದ 100ಕ್ಕೂ ಹೆಚ್ಚು ಕುಟುಂಬಗಳಿಗೆ ನೀರು ಪೂರೈಕೆ ಆಗುತ್ತಿಲ್ಲ. ಕಡಕೋಳ ಪುನರ್ವಸತಿ ಕೇಂದ್ರದಲ್ಲಿ ಗ್ರಾಮೀಣ ಕುಡಿಯುವ ನೀರಿನ ನಲ್ಲಿಗಳನ್ನು ಅಳವಡಿಸಲಾಗಿದೆ ನೀರು ಮಾತ್ರ ಬರುತ್ತಿಲ್ಲ. ಅಂದಾಜು 100 ಕುಟುಂಬಗಳು ವಾಸವಾಗಿವೆ. ಇವರೆಲ್ಲ ಬಡ ಮತ್ತು ಹಿಂದುಳಿದ ವರ್ಗದವರು, ಪ್ರತಿನಿತ್ಯ ಹೆಣ್ಣು ಮತ್ತು ಗಂಡುಮಕ್ಕಳು ಕೂಲಿ ಕೆಸಲಕ್ಕೆ ಹೋಗುತ್ತಾರೆ. ಮನೆಯಲ್ಲಿನ ವೃದ್ಧರು ನೀರು ಸಂಗ್ರಹಿಸಿಟ್ಟು ಕೊಳ್ಳಬೇಕಾದ ಅನಿವಾರ್ಯತೆಯಿದೆ. ದೂರದಲ್ಲಿ ದೊರೆಯುವ ಕೊಳವೆ ಬಾವಿಗಳು, ಕೈಪಂಪಗಳಿಂದ ನೀರು ತಂದುಕೊಳ್ಳಬೇಕು ಕುಡಿಯುವ ನೀರಂತೂ ಇಲ್ಲಿ ಸಿಕ್ಕುವದೇ ಇಲ್ಲ. ದೇವರಾಜಅರಸು ಹೆಸರಿನಲ್ಲಿ ಶುದ್ಧ ಕುಡಿವ ಘಟಕ ಸ್ಥಗಿತಗೊಂಡು ಹಲವು ವರ್ಷಗಳು ಕಳೆದಿವೆ. ಮನೆಗೊಬ್ಬರು ನೀರು ತರುವ ಕೆಲಸ ಮಾಡಬೇಕಾಗಿದೆ. ಪ್ರತಿ ಮನೆಯಲ್ಲಿ 4 ರಿಂದ 5 ಬ್ಯಾರಲಗಳು ಹತ್ತಾರು ಕೊಡಗಳನ್ನು ಕಾಣಬಹುದು. ವಿದ್ಯುತ್ ಕಂಬಗಳಿದ್ದರು ರಸ್ತೆ ದೀಪಗಳಿಲ್ಲ, ರಸ್ತೆಗಳು ಇಲ್ಲ, ಎಲ್ಲಿ ನೋಡಿದರಲ್ಲಿ

**ಮೂರು ದಿನಗಳಿಗೊಮ್ಮೆ ನೀರು ಪೂರೈಕೆ.....**

ಹಿಪ್ಪರಗಿಯಿಂದ ನೀರು ಸರಬರಾಜು ಮಾಡುವ ಪೈಪಲೈನ್ ದುರಸ್ತಿ ಇದ್ದುದರಿಂದ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿದೆ. ಪೈಪಲೈನ್ ದುರಿಸ್ತಿ ಕಾರ್ಯ ಮುಕ್ತಾಯವಾಗಿದ್ದು, ಪ್ರತಿ ಮೂರು ದಿನಗಳಿಗೊಮ್ಮೆ ನೀರು ಪೂರೈಕೆ ವ್ಯವಸ್ಥೆ ಮಾಡಲಾಗುವದು ಸಾರ್ವಜನಿಕರು ಸಹಕರಿಸಬೇಕು.

**–ಯಲ್ಲಪ್ಪ ಬಿದರಿ ಕಂದಾಯ ಅಧಿಕಾರಿಗಳು ನಗರಸಭೆ ಜಮಖಂಡಿ.**

ಬಳ್ಳಾರಿ ಜಾಲಿ ಮುಳ್ಳಿನ ಮರಗಳು ಬೆಳೆದಿವೆ. ಮಳೆಯಾದರೇ ರಸ್ತೆಗಳೆಲ್ಲ ಕೆಸರುಮಯವಾಗಿ ಸಂಚಾರಕ್ಕೆ ತೊಂದರೆ ಉಂಟಾಗುತ್ತಿದೆ. ಹಾಗಂತ ಇಲ್ಲಿರುವ ನಿವಾಸಿಗಳು ಸುಮ್ಮನೆ ಕುಳಿತಿಲ್ಲ. ಹಲವು ಬಾರಿ ಹಿರಿಯ ಅಧಿಕಾರಿಗಳು ಚುನಾಯಿತ ಪ್ರತಿನಿಧಿಗಳನ್ನು ಸಂಪರ್ಕಿಸಿ, ಸಮಸ್ಯೆ ಹೇಳಿದ್ದು ಸಮಸ್ಯೆಗೆ ಸ್ಪಂದಿಸುವ ಗೋಜಿಗೆ ಹೋಗುತ್ತಿಲ್ಲ.
ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಡುವಂತೆ ಮನವಿ ಸಲ್ಲಿಸಿದ ಸಂದರ್ಭದಲ್ಲಿ ಒಂದೆರಡು ದಿನ ನೀರು ಪೂರೈಕೆ ಮಾಡಿದಂತೆ ಮಾಡಿ ಮತ್ತದೇ ಹಳೇ ಚಾಳಿ ಮುಂದು ವರೆಸುತ್ತಾರೆಂದು ನಿವಾಸಿಗಳು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ನೀರು ಪೂರೈಸಲು ನಗರಸಭೆಯವರು ಒಬ್ಬರನ್ನು ನೇಮಕ ಮಾಡಿದ್ದು ಆ ವ್ಯಕ್ತಿ ಸರಿಯಾಗಿ ನೀರು ಪೂರೈಕೆ ಮಾಡುತ್ತಿಲ್ಲ ಕೆಲಭಾಗಗಳಲ್ಲಿ ಮಾತ್ರ ನೀರು ಪೂರೈಕೆ ಮಾಡುವ ಮೂಲಕ ಉಳಿದ ಮನೆಗಳಿಗೆ ನೀರು ಪೈರೈಕೆ ಮಾಡುತ್ತಿಲ್ಲ ಆರೋಪಿಸಿದ್ದಾರೆ. ಅಧಿಕಾರಿಗಳು ಮಾತ್ರ ಹಾರಿಕೆ ಉತ್ತರ ನೀಡುತ್ತಿದ್ದು ನೀರು, ಬೀದಿದೀಪ ಹಾಗೂ ರಸ್ತೆಗಳ ಸುಧಾ–ರಿಸುವತ್ತ ಕ್ರಮಗಳನ್ನು ಜರುಗಿಸಿಲ್ಲ ಎಂದು ನಿವಾಸಿಗಳ ಆಕ್ರೋಶ ವ್ಯಕ್ತಪಡಿಸಿದ್ದಾರೆ.
ಪುನರ್ವಸತಿ ಕೇಂದ್ರದ ನಿವಾಸಿಗಳು ಅಧಿಕಾ–ರಿಗಳಗೆ, ಜನಪ್ರತಿನಿಧಿಗಳಿಗೆ ಅಂಗಲಾಚುವ ಮೂಲಕ ಪ್ರತಿಸಲ ಖಾಲಿ ಕೊಡಗಳನ್ನು




ಪ್ರದರ್ಶಿಸಿ ತಮ್ಮ ಸಮಸ್ಯೆಗಳನ್ನು ಬಗೆ ಹರಿಸುವಂತೆ ಮನವಿ ಮಾಡುವದು ಸಾಮಾನ್ಯವಾಗಿದೆ. ಆದರೇ ಯಾರೊಬ್ಬರು ಶಾಶ್ವತವಾಗಿ ಸಮಸ್ಯೆಗಳ ಪರಿಹಾರಕ್ಕೆ ಕ್ರಮ




**ಮೂರು ದಿನಗಳಿಗೊಮ್ಮೆ ನೀರು ಪೂರೈಕೆ.....**

ಕಡಕೋಳ ಪುನರ್ವಸತಿ ಕೇಂದ್ರದಲ್ಲಿ ಕುಡಿಯುವ ನೀರನ್ನಂತೂ ಕೇಳಬೇಡಿ ಶೌಚ್ಯಕ್ಕೂ ನೀರಿಲ್ಲ. ಹಲವು ಬಾರಿ ಅಧಿಕಾರಿಗಳು, ಜನಪ್ರತಿನಿಧಿಗಳ ಗಮನಕ್ಕ ತಂದರೂ ಯಾವುದೇ ಪ್ರಯೋಜನ ವಾಗಿಲ್ಲ. ಸಾರ್ವಜನಿಕರು ಪ್ರತಿನಿತ್ಯ ಪರದಾಡ ಬೇಕಾದ ಪರಿಸ್ಥಿತಿ ಎದುರಾಗಿದೆ. ನಮ್ಮ ಗೋಳು ಕೇಳುವರು ಯಾರೂ ಇಲ್ಲ ಎಂಬಂತಾಗಿದೆ. ಪತ್ರಕರ್ತರಿಂದ ಸಹಕಾರ ಲಭಿಸುವ ಆಶಾಭಾವನೆ ನಮ್ಮಲ್ಲಿ ಮೂಡಿದೆ.

**–ಮಲ್ಲಪ್ಪ ಯಂಕಾಂಚಿ, ಕಡಕೋಳ ಪುನರವಸತಿ ಕೇಂದ್ರದ ನಿವಾಸಿ.**

ಜರುಗಿಸಿಲ್ಲ. ಶಾಸಕರು, ಜನಪ್ರತಿನಿಧಿಗಳನ್ನು ಕೆಟ್ಟ ಪದಗಳಿಂದ ನಿಂದಿಸುವ ನಿವಾಸಿಗಳು ತಮ್ಮ ಆಕ್ರೋಶವನ್ನು ಹೊರಹಾಕುತ್ತಾರೆ. ಬಡವನ ಕೋಪ ದವಡೆಗೆ ಮೂಲ ಎಂಬಂತಾಗಿದೆ ಇಲ್ಲಿಯ ನಿವಾಸಿಗಳ ಪರಿಸ್ಥಿತಿ.
ಪ್ರತಿಭಟನೆಯಲ್ಲಿ ಸತ್ಯವ್ವ ಗಸ್ತಿ, ಮಲ್ಲಪ್ಪ ಯಂಕಾಂಚಿ, ಆಕಾಶ ಶಿವನಕ್ಕನವರ, ಸಿದ್ದರಾಜ ಶಿವನಕ್ಕನವರ, ದೇವರಾಜ ಕೆಳಗಡೆ, ಮಾಂತೇಶ, ವಿಠಲ ಶಿವನಕ್ಕನವರ, ಆಕಾಶ ಯಂಕಾಂಚಿ, ರುಕುಮವ್ವ ಕಾಂಬಳೆ, ಬಾಗವ್ವ ಹಳಿಂಗಳಿ, ಬಾಳವ್ವ ಗಸ್ತಿ, ಕಾಸವ್ವ ಯಂಕಾಂಚಿ, ರುಕುಮವ್ವ ಕೆಳಗಡೆ, ನಿಂಬೆವ್ವ ಕಾಂಬಳೆ, ಶೃತಿ ಚಿನಗುಂಡಿ, ಶಾಮಲಾ ಗಸ್ತಿ, ನಗಮವ್ವ ಯಂಕಾಂಚಿ, ಸತ್ಯವ್ವ ನಾಗನೂರು, ಸುಂದರವ್ವ ಗಸ್ತಿ ಸಹಿತ ಹಲವರು ಪಾಲ್ಗೊಂಡಿದ್ದರು.

# BPHU ಲ್ಯಾಬ್‌ನ ಉದ್ಘಾಟನೆ ಸಮಾರಂಭ

ಗದಗ : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜನೀಯರಿಂಗ್ ಘಟಕ, ತಾಲೂಕಾ ಆರೋಗ್ಯ ಅಧಿಕಾರಿಗಳು, ಮುಂಡರಗಿ ತಾಲೂಕು ಆಸ್ಪತ್ರೆ ಮುಂಡರಗಿ ಇವರ ಸಂಯುಕ್ತ ಆಶ್ರಯದಲ್ಲಿ ಜುಲೈ 22 ರಂದು ಬೆಳಿಗ್ಗೆ 11 ಗಂಟೆಗೆ ಶಿರಹಟ್ಟಿ ತಾಲೂಕು ಆಸ್ಪತ್ರೆಯ ( ನೂತನ ಜಾಗೆಯ ಆವರಣದಲ್ಲಿ ) ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮತ್ತು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಅವರುಗಳು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಕಾರ್ಯಕ್ರಮವನ್ನು ಉದ್ಘಾಟಿಸುವರು.

ಶಿರಹಟ್ಟಿ ವಿಧಾನ ಸಭೆ ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ ಶೆಟ್ಟರ್ , ಮುಂಡರಗಿ ಪುರಸಭೆ ಅಧ್ಯಕ್ಷರಾದ ಶ್ರೀಮತಿ ನಿರ್ಮಲಾ ನಾ ಕೊರ್ಲಳ್ಳಿ, ಮುಂಡರಗಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಡಿ.ಡಿ.ಮೋರನಾಳ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ, ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತ ಶಿವಕುಮಾರ್ ಕೆ.ಬಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ , ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿರ್ದೇಶಕ ಡಾ.ಅವಿನಾಶ ಮೆನನ್ ರಾಜೇಂದ್ರನ್ , ಜಿ.ಪಂ. ಮುಖ್ಯ ಕಾರ್ಯನಿರ್ವಹಣಾದಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶಕ ಡಾ.ವಸಂತ ಕುಮಾರ ಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನೀಯರಿಂಗ ಘಟಕದ ಮುಖ್ಯ ಅಭಿಯಂತರ ಮುಕ್ಕಣ್ಣ ನಾಯಕ, ಬೆಳಗಾವಿ ವಿಭಾಗದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ವಿಭಾಗೀಯ ಸಹ ನಿರ್ದೇಶಕ ಶ್ರೀಮತಿ ಡಾ. ಪುಷ್ಪಾ ಎಚ್. ಆರ್, ಆಗಮಿಸುವರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮುಂಡರಗಿ ತಾಲೂಕು ಆರೋಗ್ಯ ಅಧಿಕಾರಿ ಡಾ. ಲಕ್ಷ ?ಮಣ ಪೂಜಾರ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನಿಯ–ರಿಂಗ್ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರಾದ ಮಾಂತೇಶ ಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಇಂಜನೀಯರಿಂಗ್ ಉಪವಿಭಾಗ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಮಲ್ಲಿಕಾರ್ಜುನ ಕೊಕಟನೂರ ಸರ್ವರಿಗೂ ಸ್ವಾಗತ ಕೋರಿದ್ದಾರೆ.

****

# ತಾಳೆ ಬೆಳೆ ಪ್ರದೇಶ ವಿಸ್ತರಣೆ ಸಹಾಯಧನಕ್ಕೆ ಅರ್ಜಿ ಆಹ್ವಾನ

ಬೆಳಗಾವಿ, 2025–26ನೇ ಸಾಲಿನ ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ತಾಳೆ ಬೆಳೆ ಯೋಜನೆಯಡಿ ಖಾನಾಪೂರ ತಾಲೂಕು ತೋಟಗಾ–ರಿಕೆ ಇಲಾಖೆ ವತಿಯಿಂದ ತಾಳೆ ಬೆಳೆ ಪ್ರದೇಶ ವಿಸ್ತರಣೆ ಮತ್ತು ವಿವಿಧ ಘಟಕಗಳಿಗೆ ಸಹಾಯ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.
ತಾಳೆ ಬೆಳೆ ಬೆಳೆಯಲು ನೀರಾವರಿ ಸೌಲಭ್ಯ ಹೊಂದಿರುವ ಆಸಕ್ತ ರೈತ–ರಿಗೆ ಉಚಿತ ತಾಳೆ ಸಸಿಗಳನ್ನು ಹಾಗೂ ಮೊದಲನೇ ವರ್ಷದಿಂದ ನಾಲ್ಕನೇ ವರ್ಷದವರೆಗೆ ಬೆಳೆ ನಿರ್ವಹಣೆಗೆ, ಅಂತರ ಬೆಳೆ ಬೇಸಾಯಕ್ಕೆ, ಡಿಸೇಲ್ ಪಂಪಸೆಟ್ಟ, ಹನಿ ನೀರಾವರಿ, ಕೊಳವೆ ಬಾವಿ, ನೀರು ಸಂಗ್ರಹಣಾ ಘಟಕ (ಕೃಷಿ ಹೊಂಡ),ಎರೆ ಹುಳು ಗೊಬ್ಬರ ಘಟಕ, ತಾಳೆ ಹಣ್ಣು ಕಟಾವು ಏಣಿ, ಚಾಪ್ ಕಟ್ಟರ್, ಟ್ರಾಕ್ಟರ್ ಟ್ರೈಲಿ ಮತ್ತು ಎತ್ತರವಾದ ಮರಗಳಿಂದ ಹಣ್ಣು ಕಟಾವು ಮಾಡುವ ಉಪಕರಣಗಳಿಗೆ ಮಾರ್ಗಸೂಚಿಯನ್ವಯ ಸಹಾಯಧನ ನೀಡಲಾಗುತ್ತಿದೆ. ಎಲ್ಲ ವರ್ಗದ ರೈತರು ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಹೋಬಳಿ ತೋಟಗಾರಿಕೆ ಅಧಿಕಾರಿಗಳ ದೂರವಾಣಿ ಸಂಖ್ಯೆ ಬೀಡಿ: 9019345895, ಖಾನಾಪೂರ: 9901041457, ಜಾಂಬೋಟಿ: 7795103629 , ಗುಂಜಿ: 8095347735 ಹಾಗೂ ಕಛೇರಿ ದೂ ಸಂ: 08336–223387 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಖಾನಾಪೂರ ತಾಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರುದ್ರಭೂಮಿಯಲ್ಲಿ ವಚನ–ಶ್ರಾವಣ– ಅನೈತಿಕ ಚಟುವಟಿಕೆಗೆ ಹೊಸ ಯೋಜನೆ– ಯಶಸ್ಸಿಗೆ ಶ್ರಮಿಸಿ

# ಸ್ವಚ್ಛಾ ಶ್ರಮದಾನದಲ್ಲಿ ನೂರೆಂಟು ಜನರ- ಸಂಘ-ಸಂಸ್ಥೆ



ಜಮಖಂಡಿ: ನಗರದ ರಾಜ್ಯ ಹೆದ್ದಾರಿಯಲ್ಲಿ ಬರತಕ್ಕ ಅಂದಾಜು 24 ಎಕರೆ ಪ್ರದೇಶದ ಹಿಂದು ರುದ್ರಭೂಮಿಯಲ್ಲಿ 4ನೇ ರವಿವಾರದ ಸ್ವಚ್ಚತಾ ಅಭಿಯಾನದ ಶ್ರಮದಾನದಲ್ಲಿ ನೂರೆಂಟು ಜನರು ಮತ್ತು ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಪಾಲ್ಗೊಂಡಿದ್ದರು. ಕಳೆದ 4 ವಾರಗಳಿಂದ ಮುತ್ತಿನಕಂತಿ ಹಿರೇಮಠದ ಶಿವಲಿಂಗಪಂಡಿತಾರಾಧ್ಯ ಶಿವಾಚಾರ್ಯರ ನೇತೃತ್ವದಲ್ಲಿ ಆರಂಭ ಆಗಿರುವ ಸ್ವಚ್ಚತಾ ಅಭಿಯಾನ ಶ್ರಮದಾನ ಜಮಖಂಡಿ ಜನತೆ ಸಹಕಾರದಿಂದ ಹಿಂದು ರುದ್ರಭೂಮಿಯಲ್ಲಿ ಸ್ವಚ್ಚತಾ ಅಭಿಯಾನ ಯಶಸ್ವಿಯಾಗಿ ಮುನ್ನಡೆಯುತ್ತಿದೆ. 1ನೇ ರವಿವಾರ ನಡೆದ ಸ್ವಚ್ಚತಾ ಶ್ರಮದಾನದಲ್ಲಿ 25 ಜನರು, 2ನೇ ರವಿವಾರ 60 ಜನರು, 3ನೇ ರವಿವಾರ 85 ಜನರು ಪಾಲ್ಗೊಂಡಿದ್ದರು. ಇಂದು ನಡೆದ 4ನೇ ರವಿವಾರದ ಸ್ವಚ್ಚತಾ ಅಭಿಯಾನದಲ್ಲಿ ನಗರದ ಕಿರಾಣಿ ವ್ಯಾಪಾರಸ್ಥರ ಸಂಘದ 50 ಸದಸ್ಯರ ಸಹಿತ 140ಜನರು ಸ್ವಚ್ಚತಾ ಅಭಿಯಾನ ಶ್ರಮದಾನದಲ್ಲಿ ಪಾಲ್ಗೊಂಡು ಹಿಂದು ರುದ್ರಭೂಮಿ ಸ್ವಚ್ಚತೆಯಲ್ಲಿ ತೊಡಗಿಕೊಂಡಿದ್ದರು.

**ಶ್ರೀಗಳಿಂದ ಮನವಿ.....**

ಮುತ್ತಿನಕಂತಿ ಹಿರೇಮಠದ ಶಿವಲಿಂಗಪಂಡಿತಾರಾಧ್ಯ ಶಿವಾಚಾರ್ಯರು ಮತ್ತು ಓಲೇಮಠದ ಪ.ಪೂ.ಆನಂದದೇವರು ನೇತೃತ್ವದಲ್ಲಿ ಅನೈತಿಕ ಚಟುವಟಿಕೆ ನಿಯಂತ್ರಣ–ಕ್ಕಾಗಿ ಬರತಕ್ಕ 5ನೇ ರವಿವಾರ ಸ್ವಚ್ಚತಾ ಅಭಿಯಾನ ಶ್ರಮದಾನದಲ್ಲಿ ಹೊಸ ಯೋಜನೆ ಚಾಲನೆಗೊಳ್ಳಲಿದೆ. ಜಮಖಂಡಿ ತಾಲೂಕಿನ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸ ಬೇಕು. ಜಿಲ್ಲೆಯಲ್ಲಿ ವಿಶಾಲವಾದ ನಮ್ಮೆಲ್ಲರ ಹಿಂದು ರುದ್ರಭೂಮಿಯನ್ನು ನಾವು ಸಂರಕ್ಷಣೆ ಮಾಡಬೇಕಾಗಿದೆ. ಯಾವುದೇ ಜಾತಿ, ಧರ್ಮ ಎನ್ನದೇ ಎಲ್ಲರೂ ಸಾಮೂಹಿಕವಾಗಿ ಭಾಗವಹಿಸಬೇಕೆಂದು ಮನವಿ ಮಾಡಿದರು.

**ರುದ್ರಭೂಮಿಯಲ್ಲಿ ವಚನ ಶ್ರಾವಣ.....**

ಶ್ರಾವಣಮಾಸದಲ್ಲಿ ನಗರದ ಓಲೇಮಠ ಹಮ್ಮಿಕೊಂಡಿರುವ ವಚನ ಶ್ರಾವಣ–25 ಕಾರ್ಯಕ್ರಮವನ್ನು ಹಿಂದು ರುದ್ರಭೂಮಿಯಲ್ಲಿ ಇಟ್ಟುಕೊಳ್ಳುವ ಮೂಲಕ ಜನರ ಮನದಲ್ಲಿರುವ ಸ್ಮಶಾನದ ಭಯ ಹೋಗಲಾಡಿಸಿ ಅನೈತಿಕ ಚಟುವಟಿಕೆ ನಿಯಂತ್ರಣ ಸಾಧ್ಯವಾಗಲಿದೆ. ಭಾರತೀಯ ಸಂಸ್ಕೃತಿಯಲ್ಲಿ ಶ್ರಾವಣಮಾಸ ಅತ್ಯಂತ ಪವಿತ್ರವಾಗಿದ್ದು, ಶ್ರಾವಣಮಾಸದ ಮೂಲಕ ಯುವಪೀಳಿಗೆಗೆ ಒಳ್ಳೆಯ ಸಂಸ್ಕಾರಗಳನ್ನು ನೀಡೋಣ.

**–ಪ.ಪೂ.ಆನಂದೇವರು, ಓಲೇಮಠ ಜಮಖಂಡಿ.**

**ಏನಿದು ನಿಯಂತ್ರಣ ಯೋಜನೆ.....**

ಹಿಂದು ರುದ್ರಭೂಮಿ ಆವರಣದಲ್ಲಿ ಗಾಂಜಾ ಸೇವನೆ, ಮದ್ಯ ಸೇವನೆ, ಮಟಕಾ ದಂಧಾ, ಇಸ್ಪೀಟ್, ಜೂಜಾಟ, ಮಾಟ–ಮಂತ್ರದಂತಹ ಅನೈತಿಕ ಚಟುವಟಿಕೆಗಳನ್ನು ನಿಯಂತ್ರಿಸಬೇಕಾಗಿದೆ. ರುದ್ರಭೂಮಿಯ ದಕ್ಷಿಣ ಭಾಗದಲ್ಲಿ ವಿಶಾಲವಾದ ಜಾಗವಿದ್ದು, ಗಿಡಗಂಟಿಗಳು ಬೆಳೆದಿರುವ ಹಿನ್ನಲೆಯಲ್ಲಿ ಅನೈತಿಕ ಚಟುವಟಿಕೆಗಳಿಗೆ ಅಂಟಿಕೊಂಡ ಜನರು ರುದ್ರಭೂಮಿ ಸುರಕ್ಷಾಗೋಡೆ ಒಡೆದು ಅದರೊಳಗೆ ಆಗಮಿಸಿ ಸಮಾಜದ ಸ್ವಾಸ್ಥ ಹಾಳು ಮಾಡುತ್ತಿದ್ದಾರೆ. ನಿಯಂತ್ರಣಕ್ಕಾಗಿ ಅಂದಾಜು ಒಂದು ಕಿ.ಮೀ.ವರೆಗೆ ರುದ್ರಭೂಮಿ ಗೋಡೆಯ ಒಳಗಡೆ ಭಾಗದಲ್ಲಿ ಕಾಲುವೆ ಮಾದರಿಯಲ್ಲಿ ಆಳವಾದ ತಗ್ಗು ಮಾಡಿ ಮುಳ್ಳುಗಳಿಂದ ತುಂಬವ ಯೋಜನೆಯಾಗಿದೆ. ಇದಕ್ಕೆ ಜನರ, ಪೊಲೀಸ್ ಇಲಾಖೆ ಮತ್ತು ನಗರಸಭೆ ಸಹಿತ ವಿವಿಧ ಇಲಾಖೆಗಳ ಸಹಕಾರ ಅಗತ್ಯವಾಗಿದೆ.

**ಯಶಸ್ವಿ ಮಾಡೋಣ.....**

ನಗರದ ಹಿಂದು ರುದ್ರಭೂಮಿಯನ್ನು ಸಂಪೂರ್ಣ ಸ್ವಚ್ಚತೆ ಮಾಡುವ ಶ್ರಮದಾನದಲ್ಲಿ ಪ್ರತಿಯೊಬ್ಬರು ಜೊತೆಗೂಡಿ ಯಶಸ್ವಿ ಮಾಡಬೇಕಾಗಿದೆ. ಶ್ರಮದಾನ ಪ್ರತಿ ರವಿವಾರ ನಿರಂತರವಾಗಿ ನಡೆಯಲಿದ್ದು, ಯಾರಿಗೂ ಆಹ್ವಾನಿಸುವ ಅವಶ್ಯಕತೆಯಿಲ್ಲ. ಸ್ವಯಂ ಪ್ರೇರಿತರಾಗಿ ಪ್ರತಿ ರವಿವಾರ ಬೆಳಿಗ್ಗೆ 7 ಗಂಟೆಗೆ ಹಿಂದು ರುದ್ರಭೂಮಿಗೆ ಆಗಮಿಸಿ 10 ಗಂಟೆವರೆಗೆ ನಡೆಯಲಿಉರವ ಶ್ರಮದಾನದಲ್ಲಿ ಭಾಗವಹಿಸಿ ಹಿಂದು ರುದ್ರಭೂಮಿಯನ್ನು ರಕ್ಷಣೆ ಮಾಡೋಣ.

**–ಶಿವಲಿಂಗ ಪಂಡಿತಾರಾಧ್ಯ ಶಿವಾಚಾರ್ಯರು, ಮುತ್ತಿನಕಂತಿ ಹಿರೇಮಠ ಜಮಖಂಡಿ.**


# ಶಾಲಾ ಮಕ್ಕಳಿಗೆ ಟಿ.ಡಿ ಮತ್ತು ಡಿ.ಪಿ.ಟಿ ಲಸಿಕೆ

ತಾಳಿಕೋಟೆ, ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆಯಲ್ಲಿ ಶನಿವಾರರಂದು ಟಿ. ಡಿ ಮತ್ತು ಡಿ.ಪಿ.ಟಿ ಲಸಿಕೆ (ಗಂಟಲು ಮಾರಿ ಮತ್ತು ದಿಪ್ತರಿಯಾ) ಕಾಯಿಲೆಗೆ ಸಂಬಂಧಿಸಿದಂತೆ ಒಂದನೇ ತರಗತಿ ಐದನೇ ತರಗತಿ ಮತ್ತು 10ನೇ ತರಗತಿಯ ವಿದ್ಯಾರ್ಥಿಗಳಿಗೆ ಚುಚ್ಚುಮದ್ದುವನ್ನು ಮಾಡಿಸಲಾಯಿತು. ಇದೇ ಸಂದರ್ಭದಲ್ಲಿ ತಾಲೂಕ ಸಮುದಾಯ ಆರೋಗ್ಯ ಕೇಂದ್ರದ ವೈದಾಧಿಕಾರಿಗಳಾದ ಶ್ರೀಶೈಲ್ ಹುಕ್ಕೇರಿ, ಮತ್ತು ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾ–ರಿಗಳಾದ ಮಹದೇವಿ ಸಾ.ಟಕ್ಕಳಕಿ, ಆಶಾ ಕಾರ್ಯಕರ್ತರಾದ ಜಯಲಕ್ಷ್ಮಿ ಲಾಹೋರಕರ



ಮತ್ತು ಆಶಾ ಕಾರ್ಯಕರ್ತೆ ಶ್ರೀಮತಿ ಇಂದ್ರಾಬಾಯಿ ಕದಂ. ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರ, ಮುಖ್ಯೋಪಾಧ್ಯರಾದ ಸಂತೋಷ. ಪವಾರ ದೈಹಿಕ ಶಿಕ್ಷಕರಾದ ಬಸವರಾಜ ಚಳಗಿ, ಶಾಂತಗೌಡ ಬಿರಾದಾರ, ಸಿಬ್ಬಂದಿ ವರ್ಗದವರು ಇದ್ದರು.

# ಗೊಬ್ಬರಗಳ ಬೆಲೆ ಏರಿಕೆ ಖಂಡಿಸಿ ಯುವ ಕಾಂಗ್ರೆಸ್ಸಿನಿಂದ ಪ್ರತಿಭಟನೆ




ಜಮಖಂಡಿ: ಕೇಂದ್ರ ಸರಕಾರ ರಸಗೊಬ್ಬರಗಳ ಬೆಲೆ ಏರಿಕೆಯನ್ನು ವಿರೋಧಿಸಿ ಜಿಲ್ಲಾ ಯುವ ಕಾಂಗ್ರೆಸ್ ಘಟಕ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಜಿಲ್ಲಾ ಯುಥ ಕಾಂಗ್ರೆಸ್ ಅಧ್ಯಕ್ಷ ಕುಮಾರ ಆಲಗೂರ ಮಾತನಾಡಿ, ರೈತರ ಬೆಳೆಗಳಿಗೆ ವಿತರಿಸುವ ರಸಗೊಬ್ಬರ ಬೆಲೆ ಏರಿಕೆ ಮಾಡಿದ್ದನ್ನು ತೀವ್ರವಾಗಿ ಖಂಡಿಸುತ್ತೇವೆ. ಬೆಳೆಗಳಿಗೆ ನ್ಯಾಯಯುತ ಬೆಲೆ ನಿಗದಿ ಪಡಿಸುವದು ಬಿಟ್ಟು ಗೊಬ್ಬರಗಳ ಬೆಲೆಗಳನ್ನು ಹೆಚ್ಚಿಸಿ ರೈತ ಸಮುದಾಯ ಆರ್ಥಿಕವಾಗಿ ತೊಂದರೆ ಮಾಡುವ ವ್ಯವಸ್ಥಿತವಾಗಿ ಸಂಚು ರೂಪಿಸಲಾಗಿದೆ ಎಂದರು.

ಕೇಂದ್ರ ಬಿಜೆಪಿ ಸರ್ಕಾರ ಇದು ರೈತ ವಿರೋಧಿ ಸರ್ಕಾರ, ಬಡವರ ವಿರೋಧಿ ಸರ್ಕಾರ ಬಂಡವಾಳ ಶಾಹಿಗಳ ಪರವಾಗಿರುವ ಮೋದಿ ಸರಕಾರದ ಅಚ್ಚೆದಿನ್ ಅಂತ ಹೇಳಿ ರೈತರಿಗೆ ಕಾರ್ಮಿಕರಿಗೆ ಬಡವರಿಗೆ ಸಾರ್ವಜನಿಕರಿಗೆ ಮೋಸ ಮಾಡುತ್ತಿದ್ದಾರೆ. ದಿನನಿತ್ಯ ಬಳಕೆಯಾಗುವಂತ ಪ್ರತಿಯೊಂದು ವಸ್ತುವಿನ ಬೆಲೆ ಗಗನಕ್ಕೆರಿದ್ದು, ಅದೇ ರೀತಿಯಲ್ಲಿ ರೈತರಿಗೆ ಅತ್ಯವಶ್ಯಕವಾಗಿರುವ ರಸಗೊಬ್ಬರಗಳ ಬೆಲೆಗಳನ್ನು ಏರಿಕೆ ಮಾಡುವ ಮೂಲಕ ರೈತರಿಗೆ ಅನ್ಯಾಯ ಮಾಡಿದ್ದಾರೆ. ರೈತರ ಆದಾಯ ದ್ವಿಗುಣ ಮಾಡಿ ರೈತರಿಗೆ ಅನುಕೂಲವಾಗುವಂತ ಕೆಲಸ ಮಾಡುವ ಭರವಸೆ ಹುಸಿಯಾಗಿದೆ. ಎಲ್ಲ ವಸ್ತುಗಳ ಬೆಲೆ ಏರಿಕೆ ಮಾಡುತ್ತಿರುವ ಬಿಜೆಪಿ ಸರ್ಕಾರಕ್ಕೆ ಬರುವ ದಿನಮಾನಗಳಲ್ಲಿ ದೇಶದ ಜನತೆ ತಕ್ಕಪಾಠ ಕಲಿಸಲಿದೆ ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಶಿವಕುಮಾರ ದಾನಕ್ಕನವರ, ವಿನೋದ ಹುನ್ನೂರ, ಇಸ್ಲಾಂ ತೆಲಸಂಗ, ಅಪ್ಪು ಗದ್ಯಾಳ, ಅಕ್ಷಯ ಭಜಂತ್ರಿ, ಸಂತೋಷ, ವಿಠಲ ಸಹಿತ ಹಲವರು ಇದ್ದರು.

# ಪ್ರತಿಭಾ ಪುರಸ್ಕಾರ ಬದುಕಿನ ಸಾಧನೆಗೆ ಪ್ರೇರಣೆ : ಉಪನ್ಯಾಸಕ ಕೊಳವಿ



ಬೈಲಹೊಂಗಲ–ಜೀವನದಲ್ಲಿ ಎಂಥ–ಹ ಕಠಿಣ ಸಮಸ್ಯೆ ಬಂದರೂ ಸಹ ಅದನ್ನು ಸವಾಲಾಗಿ ಸ್ವೀಕರಿಸಿ ಶಿಕ್ಷಣವನ್ನು ಮೊಟಕುಗೊಳಿಸದೇ ಜವಾಬ್ದಾರಿ ಅರಿತು ನಡೆದಾಗ ಮಾತ್ರ ಪ್ರತಿಯೊಬ್ಬ ವಿದ್ಯಾರ್ಥಿಯು ಬದುಕಿನಲ್ಲಿ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ಪಟ್ಟಣದ ಸರಕಾರಿ ಪದವಿಪೂರ್ವ ಮಹಾವಿದ್ಯಾಲಯದ ಉಪನ್ಯಾಸಕ ಬಸವರಾಜ ಕೊಳವಿ ಹೇಳಿದರು.

ಅವರು ಪಟ್ಟಣದ ಹೊಸೂರ ರಸ್ತೆಯ ತಾಲೂಕ ಪಂಚಾಯತ ಸಭಾಭವನದಲ್ಲಿ ಅಖಿಲ ಕರ್ನಾಟಕ ಅಂಬೇಡ್ಕರ ಯುವ ಸಂಘ ಬೆಂಗಳೂರು ಇವರ ಆಶ್ರಯದಲ್ಲಿ ರವಿವಾರ ಜರುಗಿದ 2024–25 ನೇ ಸಾಲಿನ ಎಸ್ಎಸ್ಎಲ್ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ತಾಲೂಕಿಗೆ ಅತೀ ಹೆಚ್ಚು ಅಂಕ ಪಡೆದ ಪರಿಶೀಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಅಭಿನಂದನಾ ಸಮಾರಂಭದಲ್ಲಿ ಮುಖ್ಯ ಅಥಿತಿಗಳಾಗಿ ಮಾತನಾಡಿ, ಬಡ ವಿದ್ಯಾರ್ಥಿಗಳು ಸಾಧನೆ ಮಾಡಿದ್ದಾರೆಂದರೆ ಅದೊಂದು ದೊಡ್ಡ ಸಾಹಸವಾಗಿದೆ. ಸಂವಿಧಾನ ರಚಿಸಿದ ಡಾ.ಬಾಬಾಸಾಹೇಬ ಅಂಬೇಡ್ಕರ ಅವರು ಸಾಧಕರಿಗೆ ಸ್ಫೂರ್ತಿಯಾಗಿದ್ದು ನಿರಂತರ ಓದಿನಿಂದ ಯಶಸ್ಸು ಮೆಟ್ಟಿಲನ್ನು ಹತ್ತಲು ಸಾಧ್ಯವೆಂದರು.

ಬಿಇಓ ಕಚೇರಿಯ ಶಿಕ್ಷಣ ಸಂಂ–ಯೋಜಕ ಬಿ.ಎನ್.ಕಸಾಳೆ ಮಾತನಾಡಿ, ಸಮಾಜ ನನಗೇನು ಕೊಟ್ಟಿದೆ ಎಂದು ಪ್ರಶ್ನಿಸಿಕೊಳ್ಳುವದಕ್ಕಿಂತ ಸಮಾಜಕ್ಕೆ ನಮ್ಮ ಕೊಡುಗೆ ಅತ್ಯವಶ್ಯವಾಗಿದೆ. ಈಗಾಗಿ ಬದುಕಿನ ಹೋರಾಟದಲ್ಲಿ ಉನ್ನತ ಸ್ಥಾನ–ಮಾನ ಗಳಿಸಿ ಮಾದರಿಯಾಗಿ ಬದುಕಬೇಕು. ನಾವು ಯಾವದೇ ಹುದ್ದೆ ಗಳಿಸಿ ಗೌರವಕ್ಕೆ ಪಾತ್ರರಾಗಿದ್ದರೆ ಅದರ ಶ್ರೇಯಸ್ಸು ಶಿಕ್ಷಣಕ್ಕೆ ಸಲ್ಲುತ್ತದೆ ಎಂದರು.

ಬೆಂಗಳೂರಿನ ಅಖಿಲ ಕರ್ನಾಟಕ ಅಂಬೇಡ್ಕರ ಯುವ ಸಂಘಟನೆಯ ಸಂಸ್ಥಾಪಕ ಫಕ್ಕೀರಪ್ಪ ಹೊಸಮನಿ ಪ್ರಸ್ತಾವಿಕವಾಗಿ ಮಾತನಾಡಿ, ಸಂಘಟನೆಗಳು ಸಮಾಜದಲ್ಲಿ ಮಾದರಿಯಾಗಬೇಕೆಂದರು. ಸಂಘಟನೆಯ ರಾಜ್ಯ ಗೌರವಾಧ್ಯಕ್ಷ ಸುಭಾಶ ಮ್ಯಾಗೇರಿ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಸಮಾಜ ಕಲ್ಯಾಣ ಇಲಾಖೆಯ ಮೇಲ್ವಚಾರಕ ಜಗದೀಶ ಅಣ್ಣೀಗೇರಿ, ಅಂಬೇಡ್ಕರವಾಣಿ ಜೈ ಭೀಮ ಸಂಘಟನೆಯ ರಾಜ್ಯಾಧ್ಯಕ್ಷ ರಮೇಶ ರಾಯಪ್ಪಗೋಳ, ಅಂಬೇಡ್ಕರ ಧ್ವನಿಯ ರಾಜ್ಯ ದಲಿತ ಸಂಘರ್ಷ ಸಮೀತಿ ರಾಜ್ಯಾಧ್ಯಕ್ಷ ಸುರೇಶ ರಾಯಪ್ಪಗೋಳ, ಉತ್ತರ ಕರ್ನಾಟಕದ ರಾಜ್ಯಾಧ್ಯಕ್ಷ ಸಂಜು ಮುರಗೋಡ, ಜಿಲ್ಲಾಧ್ಯಕ್ಷ ಸುನೀಲ ಹಲಗಿ, ಜಿಲ್ಲಾ ಸಂಚಾಲಕ ರುದ್ರಪ್ಪ ನಿಂಗಣ್ಣವರ, ಗುತ್ತಿಗೆದಾರ ರಮೇಶ ಹಂಚಿನಮನಿ, ಸಮಾಜದ ಮುಖಂಡ ಮಂಜು ಸಿಡ್ಲೆವ್ವಗೋಳ, ಸುರೇಶ ಮಲಕಿನಕೊಪ್ಪ, ಮಾದಿಗ ಸಮಾಜದ ತಾಲೂಕಾಧ್ಯಕ್ಷ ಶಂಕರ ಕೊರಿಕೊಪ್ಪ, ಶ್ರೀನಿವಾಸ ಭರಮಣ್ಣವರ, ಜೀವಿಕೆ ಸಂಸ್ಥೆ ಜಿಲ್ಲಾ ಸಂಚಾಲಕ ರುದ್ರಪ್ಪ ಮುಂದಿನಮನಿ, ಖಾನಾಪೂರ ಅಧ್ಯಕ್ಷ ಗೋಪಾಲ ಮಾದರ ಮುಂತಾದವರು ವೇದಿಕೆ ಮೇಲಿದ್ದರು.

ಕಳೆದ 2024–25 ನೇ ಸಾಲಿನ ಎಸ್–ಎಸ್ಎಲ್ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಬೈಲಹೊಂಗಲ ತಾಲೂಕಿಗೆ ಅತೀ ಹೆಚ್ಚು ಅಂಕ ಪಡೆದ ಪರಿಶೀಷ್ಟ ಜಾತಿ ಮಾದಿಗ ಸಮಾಜದ ವಿದ್ಯಾರ್ಥಿಗಳನ್ನು, ಸಾಧಕರನ್ನು, ಗಣ್ಯರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು. ವಿದ್ಯಾರ್ಥಿಗಳ ಪಾಲಕರು, ಸಮಾಜದ ಭಾಂಧವರು ಉಪಸ್ಥಿತರಿದ್ದರು.

ಸಂಘಟನೆಯ ಸಂಸ್ಥಾಪಕ ಫಕ್ಕೀರಪ್ಪ ಹೊಸಮನಿ ಸ್ವಾಗತಿಸಿದರು. ನಭಿ ಕುದ್ದನ್ನವರ ನಿರೂಪಿಸಿದರು. ರುದ್ರಪ್ಪ ಮುಂದಿನಮನಿ ವಂದಿಸಿದರು.


# ಡಿಪಿಆರ್ ತಯಾರಿಸಲು ಸರ್ಕಾರದಿಂದ ಅನುಮೋಧನೆ

ತಾಳಿಕೋಟೆ, ತಾಲೂಕಿನ ಬೂದಿಹಾಳ–ಫೀರಾಪೂರ ಏತ ನೀರಾವರಿ ಯೋಜನೆಗೆ ಸಂಬಂದಿಸಿ ಮುಂದುವರೆದ ಕಾಮಗಾರಿ ಹೊಲಗಾಲುವೆ ನಿರ್ಮಾಣಕ್ಕಾಗಿ ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಅವರ ಸತತ ಪ್ರಯತ್ನದ ಫಲವಾಗಿ ಡಿಪಿಆರ್ ತಯಾರಿಸಲು 1.75 ಕೋಟಿ ರೂ. ಸರ್ಕಾರದಿಂದ ಅನುಮೋದನೆ ನೀಡಿದೆ.

ಬೂದಿಹಾಳ–ಫೀರಾಪೂರ ಏತ ನೀರಾವರಿ ಯೋಜನೆ ಹಂತ–1ರ(20.243) ಹೆಕ್ಟರ್ಯೋಜನೆ ಹೊಲಗಾಲುವೆ ನಿರ್ಮಾಣ ಕಾಮಗಾರಿಯ ವಿವರವಾದ ಯೋಜನಾ ವರಧಿ (ಡಿಪಿಆರ್) ತಯಾರಿಸುವ ಸಲುವಾಗಿ ಸಮಾಲೋಚನಕರನ್ನು ನೇಮಿಸುವ ಕಾರ್ಯಕ್ಕೆ ಟೆಂಡರ್ ಕರೆಯಲು ಅನುಮೋದನೆ ಸಿಕ್ಕಿರುವ ಕುರಿತು ಕೂಡಲೇ ಟೆಂಡರ್ ಕರೆಯಲು ಕೃಷ್ಣಾ ಭಾಗ್ಯ ಜಲ ನಿಗಮ ನಿ,ದ ವ್ಯವಸ್ಥಾಪಕ ನಿರ್ದೇಶಕರು ಆಲಮಟ್ಟಿ ಮುಖ್ಯ ಇಂಜನಿಯರ ಅವರಿಗೆ ಆದೇಶಿಸಿದ್ದಾರೆ.

ಸದರಿ ಆದೇಶ ಪತ್ರದಲ್ಲಿ ಸರ್ಕಾರದ ಆದ–ೇಶ ಸಂ.ಜಸಂಇ/293/ಕೆಬಿಎನ್/2015. ದಿ.20–7–2016 ಹಾಗೂ ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ ಇವರ ಮನವಿ ಪತ್ರದ ಮೇಲೆ ಉಪಮುಖ್ಯಮಂತ್ರಿಯವರ ಟಿಪ್ಪಣಿ ದಿ.16–7–2024 ಹಾಗೂ ದಿ.13–06–2025 ಮತ್ತು ಮುಖ್ಯ ಇಂಜನಿಯರ ಆಲಮಟ್ಟಿ ಇವರ ಪತ್ರ ಸಂ.984 ದಿ.10–7–2025 ಹಾಗೂ ನಿಗಮದ ಕಚೇರಿ ಪತ್ರ ಸಂ.1304 ದಿ.16–7–2025ನ್ನು ಉಲ್ಲೇಖಿಸಿ ಆದ–ೇಶಿಸಿದ್ದಾರೆ.

ಬೂದಿಹಾಳ–ಫೀರಾಪೂರ ಏತ ನೀರಾವರಿ ಯೋಜನೆ ಹಂತ 1 ರಡಿ 20.243 ಹೆಕ್ಟರ್ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸಔಲಭ್ಯ ಕಲ್ಪಿಸಲು 840 ಕೋಟಿ ರೂ. 2013–14ನೇ ಸಾಲಿಗೆ ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿತ್ತು ಸದರಿ ಅನುಮೋದತ ಮೊತ್ತದಲ್ಲಿ ಎಫ್ಐಸಿ ಕಾಮಗಾರಿಗೆ 8.30 ಕೋಟಿ ನಿಗಧಿ ಪಡಿಸಲಾಗಿತ್ತು ಈ ಯೋಜನೆಯ ಬರುವ ಮುಖ್ಯ ಸಥಾವರ ಮತ್ತು ಪೈಪಲೈನ್ ಜಾಲ ಅಳವಡಿಸಿ ಸ್ಕಾಡಾ ಒಳಗೊಂಡಂತೆ ಕಾಮಗಾರಿಗಳು ಪೂರ್ಣಗೊಳಿಸಿದ್ದು ಪ್ರಸ್ತುತ ಮೂಲ ಗುತ್ತಿಗೆದಾರರ ನಿರ್ವಹಣೆ ಹಂತದಲ್ಲಿದೆ ಎಂಬ ವರಧಿಯನ್ನು ಆಧರಿಸಿ ಹಾಗೂ ದೇವರ ಹಿಪ್ಪರಗಿ ಮತಕ್ಷೇತ್ರದ ಶಾಸಕ ರಾಜುಗೌಡ ಪಾಟೀಲ ಅವರು ಸದರಿ ಯೋಜನೆಗೆ ಬರುವ ಹೊಲಗಾಲುವೆ ಕಾಮಗಾ–ರಿಯನ್ನು ಕೈಗೆತ್ತಿಕೊಳ್ಳಲು ಸಮಾಲೋಚಕರನ್ನು ನೇಮಿಸಲು ಟೆಂಡರ್ ಕರೆಯಲು ಕೋರಿರುವ ಮನವಿ ಪತ್ರಗಳ ಮೇಲೆ ಉಪಮುಖ್ಯಮಂತ್ರಿಯವರು ಡಿಪಿಆರ್ ತಯಾರಿಸಿ ಸಭೆ ಮುಂದೆ ಮಂಡಿಸಲು ನಿರ್ದೇಶನ ನೀಡಿರುವದ–ರಿಂದ ಸದರಿ ಯೋಜನೆ ಹಂತ ರ 20.243 ಹೆಕ್ಟರ್ ಹೊಲಗಾಲುವೆ ನಿರ್ಮಾಣ ಕಾಮಗಾರಿಯ ವಿವರವಾದ ಯೋಜನಾ ವರಧಿ ಡಿಪಿಆರ್ ತಯಾರಿಸುವ ಸಲುವಾಗಿ ಸಮಾಲೋಚಕರನ್ನು ನೇಮಿಸುವ ಕಾರ್ಯದ ಅಂದಾಜು ಮೊತ್ತ 1.75 ಕೋಟಿ ಮೊತ್ತಕ್ಕೆ ಟೆಂಡರ್ ಕರೆಯಲು ಕೋರಿರುವ ಹಿನ್ನೇಲೆ ಕೆಟಿಪಿಪಿ ನಿಯಮಾವಳಿಗಳನ್ವಯ ನಿಗಧಿಪಡಿಸಿ ಕ್ಯೂಸಿಬಿಎಸ್ ಮಾದರಿಯಲ್ಲಿ ಟೆಂಡರ್ ಕರೆಯುವದು ಹಾಗೂ ಸರ್ಕಾರದ ಅನುಮೋದನೆ ದೊರೆತ ನಂತರ ಸಮಾಲೋಚಕರಿಗೆ ಗುತ್ತಿಗೆ ವಹಿಸಿ ಕಾರ್ಯಾದೇಶ ನೀಡಬೇಕೆಂದು ಕೃಷ್ಣಾ ಭಾಗ್ಯ ಜಲ ನಿಗಮ ನಿ,ದ ವ್ಯವಸ್ಥಾಪಕ ನಿರ್ದೇಶಕರು ಆಲಮಟ್ಟಿ ಮುಖ್ಯ ಇಂಜನಿಯರ ಅವರಿಗೆ ಕೃಷ್ಣಾ ಭಾಗ್ಯ ಜಲ ನಿಗಮ ನಿ,ದ ವ್ಯವಸ್ಥಾಪಕ ನಿರ್ದೇಶಕರು ಮಾಡಿದ ಆದೇಶ ಪತ್ರದಲ್ಲಿ ತಿಳಿಸಲಾಗಿದೆ.



**ತಾಳಿಕೋಟೆ : ಪಟ್ಟಣದ ಪೊಲೀಸ್ ಠಾಣೆಗೆ ನೂತನವಾಗಿ ಅಧಿಕಾರ ಸ್ವಿಕರಿಸಿದ ಪಿಎಸ್ಐ ಶ್ರೀಮತಿ ಜ್ಯೋತಿ ಖೊತ್ ಅವರಿಗೆ ತಾಲೂಕಿನ ಭೋವಿ(ವಡ್ಡರ) ಸಮಾಜದ ಉಪಾಧ್ಯಕ್ಷ ಅನೀಲ ಬಂಡಿವಡ್ಡರ ಹಾಗೂ ನಾಗರಾಜ ನಾಯ್ಕೋಡಿ ಅವರು ಸನ್ಮಾನಿಸಿ ಗೌರವಿಸಿದರು.**

# ಶ್ರೀ ಪರಮಾನಂದ ದೇವರ ಜಾತ್ರಾ ಮಹೋತ್ಸವ



ರಬಕವಿ–ಬನಹಟ್ಟಿ,ಜು20: ತಾಲೂಕಿನ ನಾವಲಗಿ ಗ್ರಾಮದಲ್ಲಿ ರವಿವಾರ ದಿವಸ ಶ್ರೀ ಪರಮಾನಂದ ದೇವರ ಜಾತ್ರಾ ಮಹೋತ್ಸವವು ವಿಜೃಂಭಣೆಯಿಂದ ಜರುಗಿತು.

ಸಂಜೆ ಪರಮಾನಂದ ದೇವರ ಪಲ್ಲಕ್ಕಿ ಉತ್ಸವ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಕಲ ವಾದ್ಯ ಮೇಳದೊಂದಿಗೆ ಸಂಚರಿಸಿತು. ಜಾತ್ರೆಯ ನಿಮಿತ್ಯ ದೇವರಿಗೆ ವಿಶೇಷ ಪೂಜಾಲಂಕಾರ ಮಾಡಲಾಗಿ–ತ್ತು. ನಂತರ ಸಕಲ ಭಕ್ತಾಧಿಗಳಿಗೆ ಮಹಾಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿತ್ತು. ರಾತ್ರಿ ಡೊಳ್ಳಿನ ಪದಗಳು ಪ್ರೇಕ್ಷಕರನ್ನು ಗಮನ ಸೆಳೆಯುವ ಮೂಲಕ ಜಾತ್ರೆಯು ಸಂಪನ್ನವಾಯಿತು,

# ಶಿಕ್ಷಣದ ಬೇರು ಗಟ್ಟಿಯಾಗಲು ಸಂಸ್ಕಾರ - ತಾಳ್ಮೆ ಮುಖ್ಯ - ಡಿಡಿಪಿಯು ಭಂಡಾರೆ




ಮೂಡಲಗಿ : ವಿದ್ಯಾರ್ಥಿಗಳು ಜ್ಞಾನದ ಜೊತೆಗೆ ಸಂಸ್ಕಾರ ಪಡೆದು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ತಾಳ್ಮೆಯಿಂದ ಅಧ್ಯಯನದಲ್ಲಿ ಸಕ್ರೀಯವಾಗಿ ತೊಡಗಿಕೊಂಡಾಗ ಅತ್ಯುತ್ತಮ ಫಲಿತಾಂಶ ಪಡೆಯಲು ಸಾಧ್ಯ ಎಂದು ಶಾಲಾ ಶಿಕ್ಷಣ ಇಲಾಖೆ (ಪ.ಪೂ) ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆ ಉಪನಿರ್ದೇಶಕ ಪಾಂಡುರಂಗ ಭಂಡಾರೆ ಹೇಳಿದರು ಶನಿವಾರ ಅನಿತಾ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಆಚಾರ್ಯ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯ ನಾಗನೂರ/ಮೂಡಲಗಿ ಪ್ರಥಮ ವರ್ಷದ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಮತ್ತು ಪಿ.ಯು.ಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಮಾತನಾಡಿದರು,

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಹುಕ್ಕೇರಿಯ ಕ್ಯಾರಗುಡ್ಡದ ಅವಜೀಕರ ಮಹಾರಾಜರ ಆಶ್ರಮದ ಪರಮಪೂಜ್ಯ ಅಭಿನವ ಶ್ರೀ ಮಂಜುನಾಥ ಮಹಾಸ್ವಾಮಿಗಳು ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಕ್ಷಣ ಮಹತ್ವ ಪೂರ್ಣವಾಗಿದ್ದು, ಅದನ್ನು ಸದ್ವಿನಿಯೋಗ ಮಾಡಿಕೊಂಡು ಭವಿಷ್ಯದಲ್ಲಿ ಕಷ್ಟಪಟ್ಟು ಅಧ್ಯಯನ ಮಾಡಿದಾಗ ಇನ್ನೊಬ್ಬರ ಮುಂದೆ ಕೈ ಚಾಚುವ ಅನಿವಾರ್ಯತೆ ಬರುವುದಿಲ್ಲ. ನೀಲಿ ಶಾಹಿಯ ಪೆನ್ನು ಬಳಸುವ ಕೈ ಹಸಿರು ಶಾಹಿಯ ಪೆನ್ನನ್ನು ಬಳಸುವಂತಾಗಬೇಕೇಂದು ಹೇಳಿದರು

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಮಲ್ಲಪ್ಪ ತೇರದಾಳ ವಹಿಸಿದ್ದರು.

ಗೌರವ ಅಧ್ಯಕ್ಷತೆ ವಹಿಸಿದ ಭೀಮಪ್ಪ ಗಡಾದ ಅಧ್ಯಕ್ಷೀಯ ಪರ ನುಡಿಗಳಲ್ಲಿ ಶಿಕ್ಷಣ ನೀಡುವಲ್ಲಿ ಉಪನ್ಯಾಸಕರ ಮತ್ತು ವಿದ್ಯಾರ್ಥಿಗಳ ಪಾತ್ರ ಪ್ರಮುಖವಾಗಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಮಲ್ಲಿಕಾರ್ಜುನ ಕಟ್ಟೂರ, ಚನ್ನಬಸು ಬಡ್ಡಿ, ಮಲ್ಲಪ್ಪ ಗಾಣಿಗೇರ ಮಲ್ಲಪ್ಪ ಢವಳೇಶ್ವರ ಆಗಮಿಸಿದ್ದರು. ಕಾರ್ಯಕ್ರಮದಲ್ಲಿ ಕಾಲೇಜು ಪ್ರಾಚಾರ್ಯ ಎಸ್ ಬಡಿಗೇರ ಅತಿಥಿಗಳನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಕಾರ್ಯಕ್ರಮವನ್ನು ಉಪನ್ಯಾಸಕರಾದ ವಿಷ್ಣು ಬಾಗಡಿ ನಿರೂಪಿಸಿದರು. ಉಪನ್ಯಾಸಕಿ ಜೋತಿ ದೇಸಾಯಿ ಅವರು ವಂದಿಸಿದರು

# ಸೆ.1 ರಿಂದ ಆರಂಭವಾಗುವ ಬಸವ ಸಂಸ್ಕ್ರತಿ ಯಾತ್ರೆ ಯಶಸ್ವಿಗೊಳಿಸಬೇಕು



ಬಸವನಬಾಗೇವಾಡಿ, : ರಾಜ್ಯದಲ್ಲಿ ಲಿಂಗಾಯತ ಮಠಾಧಿಪತಿಗಳ ಒಕ್ಕೂಟ ಹಾಗೂ ವಿವಿಧ ಬಸವಪರ ಸಂಘಟನೆಗಳು ಸೆ.1 ರಂದು ಬಸವ ಸಂಸ್ಕ್ರತಿ ಅಭಿಯಾನದಂಗವಾಗಿ ಬಸವೇಶ್ವರ ಜನಿಸಿದ ಬಸವನಬಾಗೇವಾಡಿಯಿಂದ ಬಸವ ರಥ ಯಾತ್ರೆಗೆ ಚಾಲನೆ ನೀಡುವ ಕಾರ್ಯಕ್ರಮ ಹಮ್ಮಿಕೊಂಡಿವೆ. ಈ ಕಾರ್ಯಕ್ರಮ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಎಲ್ಲರೂ ಸಂಪೂರ್ಣ ಜವಾಬ್ದಾರಿ ವಹಿಸಿಕೊಳ್ಳಬೇಕಾದ ಅಗತ್ಯವಿದೆ. ಈ ನಿಟ್ಟಿನಲ್ಲಿ ಮಹಿಳೆಯರ ಸಂಘಟನೆಗಳು ಸಹ ಭಾಗಿಯಾಗುವ ಮೂಲಕ ಅಭಿಯಾನದ ಯಾತ್ರೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ವಿರಕ್ತಮಠದ ಸಿದ್ದಲಿಂಗ ಸ್ವಾಮೀಜಿ ಹೇಳಿದರು.

ಪಟ್ಟಣದ ವಿರಕ್ತಮಠದಲ್ಲಿ ಈಚೆಗೆ ಬಸವ ಸಂಸ್ಕ್ರತಿ ಅಭಿಯಾನದಂಗವಾಗಿ ಬಸವನಬಾಗೇವಾಡಿಯಲ್ಲಿ ಸೆ. 1 ರಂದು ಹಮ್ಮಿಕೊಂಡಿರುವ ಬಸವ ರಥ–ಯಾತ್ರೆ ಚಾಲನೆ ಕಾರ್ಯಕ್ರಮದ ಪೂರ್ವಭಾವಿಯಾಗಿ ಈಚೆಗೆ ಕರೆಯಲಾಗಿದ್ದ ಮಹಿಳಾ ಸಂಘಟನೆಗಳ ಪದಾಧಿಕಾ–ರಿಗಳ ಹಾಗೂ ಸದಸ್ಯರ ಸಭೆಯ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಸೆ.1 ರಂದು ನಡೆಯುವ ಕಾರ್ಯಕ್ರಮಕ್ಕೆ ನಾಡಿನ ವಿವಿಧ ಭಾಗಗಳಿಂದ ಅನೇಕ ಮಠಾಧೀಶರರು, ವಿದ್ವಾಂಸರು ಆಗಮಿಸುತ್ತಿದ್ದಾರೆ. ಕಾಲೇಜು ವಿದ್ಯಾರ್ಥಿಗಳೊಂದಿಗೆ ಸಂವಾದ ಸೇ–ರಿದಂತೆ ಶರಣರಿಗೆ ಸಂಬಂಧಪಟ್ಟಂತೆ ವಿಚಾರಗೋಷ್ಠಿ, ವಚನ ಸಂಗೀತ ಕಾರ್ಯಕ್ರಮ ಹಾಗೂ ಸಾಣೇಹಳ್ಳಿ ಮಠದ ಶಿವ ಸಂಚಾರದಿಂದ ನಾಟಕ ಪ್ರದರ್ಶನವಾಗಲಿದೆ ಎಂದರು.

ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ ಮಾತನಾಡಿ, ಇಡೀ ಜಗತ್ತಿಗೆ ಸಮಾನತೆ, ದಾಸೋಹ ಸಂದೇಶ ನೀಡುವ ಮೂಲಕ ಇಡೀ ಜಗತ್ತನ್ನು ಪ್ರೀತಿಯಿಂದ ಕಂಡ ಬಸವೇಶ್ವರರು ಜನಿಸಿದ ಈ ಪುಣ್ಯಭೂಮಿಯಿಂದ ಸೆ.1 ರಿಂದ ಬಸವ ಸಂಸ್ಕ್ರತಿ ಅಭಿಯಾನ ಆರಂಭವಾಗುತ್ತಿರುವ ವಿಷಯ ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ. ಬಸವ ಸಂಸ್ಕ್ರತಿ ಅಭಿಯಾನ ನಮ್ಮ ಹಬ್ಬವೆಂಬಂತೆ ಎಲ್ಲರೂ ಭಾಗವಹಿಸುವ ಮೂಲಕ ಯಶಸ್ವಿಗೊಳಿಸಬೇಕು. ಈ ನಿಟ್ಟಿನಲ್ಲಿ ಎಲ್ಲ ಮಹಿಳೆಯರು ಒಂದಾಗಿ ಕೆಲಸ ಮಾಡೋಣವೆಂದ ಅವರು, ಅಭಿಯಾನದ ಯಶಸ್ವಿಗೆ ಪ್ರತಿಯೊಬ್ಬರೂ ಸಂಪೂರ್ಣವಾಗಿ ಭಾಗವಹಿಸುವ ಅಗತ್ಯವಿದೆ ಎಂದರು.

ಲಿಂಗಾಯತ ಮಹಾಸಭಾದ ಕಾರ್ಯಾಧ್ಯಕ್ಷ ವಿವೇಕಾನಂದ ಕಲ್ಯಾಣಶೆಟ್ಟಿ ಮಾತನಾಡಿ, ಪ್ರಥಮವಾಗಿ ಜಗತ್ತಿನಲ್ಲಿ ಮಹಿಳೆಯ–ರಿಗೆ ಸ್ವಾತಂತ್ರ್ಯವನ್ನು ಕೊಟ್ಟ ಕೀರ್ತಿ ಬಸವಣ್ಣನವರಿಗೆ ಸಲ್ಲುತ್ತದೆ. ನಾವೆಲ್ಲರೂ ಬಸವಣ್ಣನವರ ಋಣ ತೀರಿಸಬೇಕಾಗಿದೆ. ಬಸವ ಸಂಸ್ಕ್ರತಿ ಯಾತ್ರೆ ಯಶಸ್ವಿಗೆ ನಾವೆಲ್ಲರೂ ಒಂದಾಗಿ ಕೆಲಸ ಮಾಡುವ ಮೂಲಕ ರಾಜ್ಯವೇ ನಮ್ಮ ಕಡೆ ನೋಡುವಂತೆ ಆಗಬೇಕು. ಎಲ್ಲ ಮಹಿಳಾ ಸಂಘಟನೆಗಳು ಈ ಪವಿತ್ರ ಕಾರ್ಯದಲ್ಲಿ ಕೈಜೋಡಿಸಬೇಕೆಂದರು.

ಸಭೆಯಲ್ಲಿ ಕದಳೆ ವೇದಿಕೆ ಅಧ್ಯಕ್ಷೆ ಸಾವಿತ್ರಿ ಕಲ್ಯಾಣಶೆಟ್ಟಿ, ಅಕ್ಕಬಳಗದ ಸದಸ್ಯರಾದ ಮಹಾದೇವಿ ಬಿರಾದಾರ, ಬಾಲಕ್ಕ ಬೆಣ್ಣೂರ, ನೀಲಮ್ಮ ಝುಳಕಿ,ರಾಜಶ್ರೀ ಯಳಮೇಲಿ, ಪುಷ್ಪಾ ಹೂಗಾರ, ಶಾರದಾ ತೋಟದ, ಕಮಲಕ್ಕ ಸಜ್ಜನ, ಲಲಿತಾ ಮಿಣಜಗಿ ಇತರರು ಭಾಗವಹಿಸಿದ್ದರು.

# ಶ್ರಾವಣ ಮಾಸ ನಿಮಿತ್ತ ಯೋಗ- ಪ್ರವಚನ




ತೇರದಾಳ–ಶ್ರಾವಣ ಮಾಸದ ನಿಮಿತ್ತ ಇಲ್ಲಿನ ಪ್ರಭುಲಿಂಗೇಶ್ವರ ಅನ್ನಪ್ರಸಾದ ವಿತರಣಾ ಸಮಿತಿ ಆಶ್ರಯದಲ್ಲಿ ಪ್ರತಿ ವರ್ಷದಂತೆ ಈ ವರ್ಷವು ಜು.25ರಿಂದ ಆ.24ರ ವರೆಗೆ ಚಾಮರಸ ಕವಿ ವಿರಚಿತ ಪ್ರಭುಲಿಂಗ ಲೀಲೆ ಪ್ರವಚಣ ಹಾಗೂ ಹಿಮಾಲಯನ್ ಧ್ಯಾನ ಯೋಗ ಹಮ್ಮಿಕೊಳ್ಳಲಾಗಿದೆ.

ಪ್ರಭುಲಿಂಗೇಶ್ವರ ಅನ್ನಪ್ರಸಾದ ಸಮಿತಿಯ ಕಲ್ಯಾಣ ಮಂಟಪದಲ್ಲಿ ಪ್ರತಿದಿನ ಬೆಳಗ್ಗೆ 5.30 ರಿಂದ 6.30ರ ವರೆಗೆ ಯೋಗ ಹಾಗೂ ಸಂಜೆ 6.30 ರಿಂದ 7.30ರ ವರೆಗೆ ಪ್ರಭುಲಿಂಗ ಲೀಲೆ ಪ್ರವಚನ ನಡೆಯುವುದು. ಆ. 18 ಶ್ರಾವಣ ಮಾಸದ ಕೊನೆಯ ಸೋಮವಾರ ಕ್ಷೇತ್ರಾಧಿಪತಿ ಅಲ್ಲಮಪ್ರಭುದೇವರ ಜಾತ್ರಾ ಮಹೋತ್ಸವ ನಡೆಯುವುದು. ಆ. 24ರಂದು ಪ್ರವಚನ ಮಹಾಮಂಗಲ ಜರಗುವುದು ಎಂದು ಸಮಿತಿ ತಿಳಿಸಿದೆ.

# ಆತ್ಮವಿಶ್ವಾಸದೊಂದಿಗೆ ಮುನ್ನುಗ್ಗಿ ಸವಿಯಿರಿ ವಿಜಯದ ಹುಗ್ಗಿ



ಮಹಾಲಿಂಗಪುರ: ಜೀವನವೊಂದು ಸುಗ್ಗಿ ಇದ್ದಂತೆ ವಿದ್ಯಾರ್ಥಿಗಳು ಆತ್ಮವಿಶ್ವಾಸದೊಂದಿಗೆ ಮುನ್ನುಗ್ಗಿ ವಿಜಯದ ಹುಗ್ಗಿ ಸವಿಯಿರಿ ಎಂದು ರನ್ನಬೆಳಗಲಿಯ ಸಿದ್ಧಾರೂಢ ಸರಕಾರಿ ಪ್ರೌಢಶಾಲೆಯ ನಿವೃತ್ತ ಮುಖ್ಯ ಶಿಕ್ಷಕ ರವೀಂದ್ರ ಕಂಬಾರ ಹೇಳಿದರು.

ಪಟ್ಟಣದ ಕೆಎಲ್ಇ ಸಂಸ್ಥೆಯ ಎಸ್ಸಿಪಿ ಪಪೂ ಕಾಲೇಜಿನಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದರು. ಸಾತ್ವಿಕ ಆಹಾರ ಮತ್ತು ವಿಚಾರಗಳಿಂದ ದೈಹಿಕ, ಮಾನಸಿಕ ಆರೋಗ್ಯ ವೃದ್ಧಿಸಿ ರೋಗ ನಿರೋಧಕ ಶಕ್ತಿ ಹೆಚ್ಚಾಗಿ ಸಕಾರಾತ್ಮಕ ಸಾಫಲ್ಯ ದೊರೆಯುತ್ತದೆ ಎಂದರು. ಪ್ರಸಕ್ತ ಸಾಲಿನ ಒಕ್ಕೂಟದ ಅಧ್ಯಕ್ಷ ಎಂ.ಬಿ.ತೇಲ್ಕರ ಪ್ರಾಸ್ತಾವಿಕ ಮಾತನಾಡಿ ಆಡು ಮುಟ್ಟದ ಎಲೆಯಿಲ್ಲ, ಕೆಎಲ್ಇ ಪರಿಚಯಿಸದ ಕೋರ್ಸ್ ಇಲ್ಲ ಎಂದರು. ಪ್ರಾಚಾರ್ಯ ಎಲ್.ಬಿ.ತುಪ್ಪದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಶಿಸ್ತು, ಸಂಸ್ಕಾರ, ವಿನಯ, ವಿಧ್ಯೇಯತೆಯಿಂದ ಕಲಿತು ಉತ್ತಮ ನಾಗರಿಕರಾಗಬೇಕು ಎಂದರು. ಕಳೆದ ಸಾಲಿನಲ್ಲಿ ಶೇ.90ಕ್ಕೂ ಹೆಚ್ಚು ಅಂಕ ಗಳಿಸಿದ 19 ವಿದ್ಯಾರ್ಥಿಗಳನ್ನು ಕಾಲೇಜಿನ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಪ್ರತಿ ವರ್ಷದಂತೆ ಪ್ರಾಚಾರ್ಯ ಎಲ್.ಬಿ.ತುಪ್ಪದ ವಿಜ್ಞಾನ ವಿಭಾಗದಲ್ಲಿ ಪ್ರಥಮ, ದ್ವಿತೀಯ, ತೃತೀಯ ರ್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಒಟ್ಟಾರೆ 1500/– ನಗದು ಬಹುಮಾನ ನೀಡಿ ಪ್ರೋತ್ಸಾಹಿಸಿದರು. ಇದಕ್ಕೂ ಪೂರ್ವದಲ್ಲಿ ದ್ವಿತೀಯ ವರ್ಷದ ವಿದ್ಯಾರ್ಥಿಗಳು ಪ್ರಥಮ ವರ್ಷದ ವಿದ್ಯಾರ್ಥಿಗಳ ತಲೆ ಮೇಲೆ ಪುಷ್ಪವೃಷ್ಟಿ ಮಾಡುವ ಮೂಲಕ ವೇದಿಕೆಗೆ ಬರಮಾಡಿಕೊಳ್ಳಲಾಯಿತು. ವೇದಿಕೆ ಮೇಲೂ ಗುಲಾಬಿ ನೀಡಿ ಸ್ವಾಗತಿಸಲಾಯಿತು. ಕಳೆದ ಸಾಲಿನ ಒಕ್ಕೂಟದ ಅಧ್ಯಕ್ಷ ಶಿವಲಿಂಗ ಸಿದ್ನಾಳ ಅವರು ನೂತನ ಅಧ್ಯಕ್ಷ–ರಿಗೆ ಜವಾಬ್ದಾರಿಯ ಹೊತ್ತಿಗೆಯನ್ನು ಹಸ್ತಾಂತರಗೊಳಿಸಿದರು. ನಂತರ ಎಲ್ಲರೂ ಬೂಂದಿ, ಮಸಾಲೆ ರೈಸ್ ಭೋಜನ ಸವಿದರು. ರಂಗುರಂಗಿನ ಬಟ್ಟೆಗಳಲ್ಲಿ ಕಂಗೊಳಿಸುತ್ತಿದ್ದ ವಿದ್ಯಾರ್ಥಿಗಳು ಶಿಕ್ಷಕರೊಂದಿಗೆ ಸೆಲ್ಫಿ ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು.

ಪ್ರಾಚಾರ್ಯ ಎಲ್.ಬಿ.ತುಪ್ಪದ, ಉಪಪ್ರಾಂಶುಪಾಲ ಬಿ.ಜಿ.ಖೋತ, ಒಕ್ಕೂಟದ ಅಧ್ಯಕ್ಷ ಎಂ.ಬಿ.ತೇಲ್ಕರ, ಆರ್.ಎನ್.ಪಟ್ಟಣಶೆಟ್ಟಿ, ಜಿ.ಬಿ.ಜತ್ತಿ, ಜಿ.ವೈ.ಕಿತ್ತೂರ, ಎಸ್.ಎಚ್.ಮೆಳವಂಕಿ, ಸಾಂಸ್ಕೃತಿಕ ವಿಭಾಗದ ಆರ್.ಎಸ್. ಕಲ್ಲೋಳ್ಳಿ, ಎ.ಆರ್. ಬಿಪಾಟೀಲ, ಜೆ.ಪಿ.ಪೂಜೇರಿ, ಕ್ರೀಡಾ ವಿಭಾಗದ ಬಿ.ಎಂ.ಸಿದ್ನಾಳ, ಬಿ.ಬಿ.ಯಲ್ಲಟ್ಟಿ, ಬಿ.ಎನ್. ಹಂದಿಗುಂದ, ಆರ್.ಎಂ ಕಂಬಾರ, ಎಸ್. ಎಸ್.ಪೂಜೇರಿ, ಪಿ.ಎಂ.ಬಸವರಾಜ, ಬಿ.ಆರ್. ಮೂಶಪ್ಪಗೋಳ, ಎಸ್.ಎ.ಚೌಗಲಾ, ಟಿ.ವಿ.ಜಮಾದಾರ, ಸಿ.ಎಂ.ಮಠಪತಿ, ಡಿ.ಎಸ್.ಬಡಿಗೇರ, ಆನಂದ ಅಂಗಡಿ, ಮಾನಂದಾ ಚೌಗಲಾ, ಸಾಕ್ಷಿ ಹುಲಕುಂದ ಇದ್ದರು.

# ಗ್ರಾಮೀಣ ಪ್ರತಿಭೆ ಗುರುತಿಸಿ- ಪ್ರೋತ್ಸಾಹಿಸಿ



ರಬಕವಿ–ಬನಹಟ್ಟಿ,ಜು20: ಗ್ರಾಮೀಣ ಭಾಗದಲ್ಲಿ ಹಲವಾರು ಪ್ರತಿಭೆಗಳಿದ್ದರು ಸಹಿತ ಅವರನ್ನು ಗುರುತಿಸುವ ಕಾರ್ಯ ಮಾತ್ರ ಆಗುತ್ತಿಲ್ಲ, ಆದ್ದರಿಂದ ಸರ್ಕಾರ ಮತ್ತು ಸಂಘ ಸಂಸ್ಥೆಗಳು ಅಂತ ಕಲಾವಿದರನ್ನು, ವಿಶೇಷ ಸಾಧಕರನ್ನು, ಕ್ರೀಡಾಪಟುಗಳನ್ನು ಹಾಗೂ ಇನ್ನೂ ಅನೇಕ ಕ್ಷೇತ್ರಗಳಲ್ಲಿ ಎಲೆಮರೆ ಕಾಯಿಯಂತೆ ಬೆಳಗುತ್ತಿರುವ ಸಾಧಕರನ್ನು ಪ್ರಶಸ್ತಿ ನೀಡಿ ಪ್ರೋತ್ಸಾಹಿಸುವ ಕಾರ್ಯ ಮಾಡಬೇಕೆಂದು ಕರ್ನಾಟಕ ರಾಜ್ಯೋತ್ಸವ ಸಮಿತಿ ಅಧ್ಯಕ್ಷ ಚಿದಾನಂದ ಸೋಲಾಪುರ ಹೇಳಿದರು.

ಅವರು ಇತ್ತೀಚಿಗೆ ವಂದೇ ಮಾತರಂ ಲಲಿತ ಕಲಾ ಅಕಾಡೆಮಿ ಬೆಂಗಳೂರು ಇವರಿಂದ ರಾಜ್ಯಮಟ್ಟದ ಸಮಾಜ ಸೇವಾ ಪ್ರಶಸ್ತಿ ಪಡೆದ ರಬಕವಿಯ ಹೆಸರಾಂತ ಗಾಯಕಿ ಶ್ರೀಮತಿ ರಾಜೇಶ್ವರಿ ಉಮದಿ ಇವರನ್ನು ಕನ್ನಡ ಬಳಗ ವತಿಯಿಂದ ಸನ್ಮಾನಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಗಾಯಕ ಹಾಗೂ ಹಾಸ್ಯ ಕಲಾವಿದ ಸಂಗಮೇಶ್ ಚಿತ್ತರಗಿ, ಪ್ರಕಾಶ ವಜ್ರಮಟ್ಟಿ, ಅಶೋಕ ಹೊಸಕೋಟಿ, ಬಸವರಾಜ ಚಿಂಚಖಂಡಿ, ಮೀನಾಕ್ಷಿ ಗುರುಪುತ್ರ ಉಮದಿ, ಬಸವರಾಜ ಬಡಗನ್ನವರ ಮುಂತಾದವರು ಉಪಸ್ಥಿತರಿದ್ದರು.

## ಬಸ್ ಹಾಗೂ ಬೈಕ್ ನಡುವೆ ಡಿಕ್ಕಿ ಬೈಕ್ ಸವಾರ ಸಾವು

ರಬಕವಿ–ಬನಹಟ್ಟಿ,ಜು19: ತಾಲೂಕಿನ ಬಂಡಿಗಣಿ ಗ್ರಾಮದ ಹತ್ತಿರ ಶನಿವಾರ ಮಧ್ಯಾಹ್ನ 1:30 ರ ಸುಮಾರಿಗೆ ಬೈಕ್ ಹಾಗೂ ಸಾರಿಗೆ ಸಂಸ್ಥೆಯ ಬಸ್ ನಡುವೆ ಅಪಘಾತ ಸಂಭವಿಸಿ ಬೈಕ್ ಸವಾರ ಸ್ಥಳದಲ್ಲಿಯೇ ಮೃತಪಟ್ಟಿರುವ ಘಟನೆ ನಡೆದಿದೆ.

ಮೃತಪಟ್ಟ ವ್ಯಕ್ತಿ ಕುಲಹಳ್ಳಿ ಗ್ರಾಮದ ಮಲ್ಲಪ್ಪ ಹುನ್ನೂರ(63) ಎಂದು ಗುರುತಿಸಲಾಗಿದೆ.

ಬಂಡಿಗಣಿ ಕ್ರಾಸ್‌ದಿಂದ ತನ್ನ ತೋಟದ ಮನೆಗೆ ಜಮಖಂಡಿ–ಕುಡಚಿ ರಾಜ್ಯ ಹೆದ್ದಾರಿ ಮೇಲೆ ಸಂಚರಿಸುವಾಗ ಮಾರ್ಗ ಮಧ್ಯೆ ಈ ಅಪಘಾತ ಸಂಭವಿಸಿದೆ. ಬನಹಟ್ಟಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪಿಎಸ್‌ಐ ಶಾಂತಾ ಹಳ್ಳಿ ತನಿಖೆ ಮುಂದುವರೆಸಿದ್ದಾರೆ.

# ತಂದೆ ತಾಯಿಗಳ ಘನತೆ ಗೌರವ ಮಕ್ಕಳ ನಡತೆ ಮೇಲೆ ನಿಂತಿದೆ

ರಬಕವಿ–ಬನಹಟ್ಟಿ,ಜು20: ವಿಪರೀತ ಮೊಬೈಲ ಬಳಕೆಯಿಂದ ಯುವ ಪೀಳಿಗೆ ದಾರಿ ತಪ್ಪುತ್ತಿದೆ. ಆದ್ದರಿಂದ ತಂದೆ ತಾಯಿಗಳ ಘನತೆ ಗೌರವ ಮಕ್ಕಳ ನಡತೆ ಮೇಲೆಯೇ ಅವಲಂಬಿತವಾಗಿದೆ ಎಂದು ಹಳಿಂಗಳಿ ಭದ್ರಗಿರಿ ಬೆಟ್ಟದ ಜೈನ ಮುನಿ ಆಚಾರ್ಯ ಶ್ರೀ ಕುಲರತ್ನಭೂಷಣ ಮಹಾರಾಜರು ಹೇಳಿದರು.

ಹಳಿಂಗಳಿ ಭದ್ರಗಿರಿ ಬೆಟ್ಟದಲಿ ಚಾತುರ್ಮಾಸ ನಿಮಿತ್ತ ಕಳಸ ಸ್ಥಾಪನಾ ಕಾರ್ಯಕ್ರಮ ನಂತರ ಸಂಜೆ ನಡೆದ ಪ್ರವಚನ ಸಮಾರಂಭಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಧರ್ಮಾನುಸಾರ ಗುರುಗಳ ದರ್ಶನ ಮಾಡಿಸಿ ಸಂಸ್ಕಾರ, ಸಂಸ್ಕೃತಿ ಕೊಡಿಸುವ ಕೆಲಸವಾಗಬೇಕು. ಅಂದಾಗ ಮಾತ್ರ ಅವರು ದೇಶದ ಮಹಾನ ಪ್ರಜೆಗಳಾಗಬಲ್ಲರು. ಹೀಗೆ ಮೊಬೈಲ್ ಬಳಕೆಯಿಂದ ಆಗುವ ಅನೇಕ ದುಷ್ಪರಿಣಾಮಗಳ ಬಗ್ಗೆ ದೃಷ್ಟಾಂತಗಳನ್ನು ಹೇಳಿ ಭಕ್ತರಲ್ಲಿ ಜಾಗೃತಿ ಮೂಡಿಸಿದರು.



ಚಾತುರ್ಮಾಸ ಪೂರ್ತಿ ಹಳಿಂಗಳಿ ಭದ್ರಗಿರಿ ಬೆಟ್ಟದಲ್ಲಿ ಅನೇಕ ಧಾರ್ಮಿಕಾರ್ಯಗಳು ಜರುಗಲಿದ್ದು, ತಾವು ಬನ್ನಿ ತಮ್ಮ ಮಕ್ಕಳನ್ನು ಇಲ್ಲಿ ಕರೆತಂದರೆ ಅವರಿಗೆ ಅಮೂಲ್ಯವಾದ ಸಂಸ್ಕಾರ ಸಂಸ್ಕೃತಿ ದೊರಕುತ್ತದೆ ಎಂದು ಕರೆನೀಡಿದರು.

ಈ ಸಂದರ್ಭದಲ್ಲಿ ಆರೀಕಾ ದರ್ಶನ ಭೂಷಣಮತಿಮಾತಾ, ಜ್ಞಾನಭೂಷಣಮತಿ ಮಾತಾ, ಚಾರಿತ್ರಾಭೂಷಣಮತಿ ಮಾತಾ ಮತ್ತು 105 ಶಾಂತಿ ಧರ್ಮಭೂಷಣ ಮಹಾರಾಜರಿದ್ದರು. ಮಹಾರಾಷ್ಟ್ರ, ಗೋವಾ ಹಾಗೂ ರಾಜ್ಯದ ಅನೇಕ ಕಡೆಗಳಿಂದ ಶ್ರಾವಕ ಶ್ರಾಮಕಿಯರು ಆಗಮಿಸಿದ್ದರು.

## ರೋಗಿಗಳಿಗೆ ಹಣ್ಣು, ಹಂಪಲು ವಿತರಿಸಿ ಜಗದೀಶ ಮೆಟಗುಡ ಜನ್ಮ ದಿನ ಆಚರಣೆ



ಬೈಲಹೊಂಗಲ. ಮಾಜಿ ಶಾಸಕರಾದ ಜಗದೀಶ ಮೆಟಗುಡ್ಡ ಅವರ ಹುಟ್ಟು ಹಬ್ಬದ ನಿಮಿತ್ತ ಭಾರತೀಯ ಜನತಾ ಪಾರ್ಟಿ ಬೈಲಹೊಂಗಲ ಮಂಡಲ ವತಿಯಿಂದ ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲು ವಿತರಿಸಿ ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಗುರು ಮೆಟಗುಡ್ಡ ಮಾತನಾಡಿ ಮಾಜಿ ಶಾಸಕರಾದ ಜಗದೀಶ್ ಮೆಟಗುಡ್ಡ ಅವರು ಶಾಸಕರಾಗಿದ್ದ ವೇಳೆ ಬೈಲಹೊಂಗಲ ಮತಕ್ಷೇತ್ರದಲ್ಲಿ ಮಾಡಿದ ಅಭಿವೃದ್ಧಿ ಕೆಲಸಗಳು, ಅನೇಕ ಜನಪರ ಯೋಜನೆಗಳನ್ನು ಜನ ಮರೆತಿಲ್ಲ ಅಧಿಕಾರ ಇಲ್ಲದಿದ್ದರೂ ನಮ್ಮ ಕುಟುಂಬದಿಂದ ಕ್ಷೇತ್ರದ ಜನಸೇವೆ ಮಾಡುತ್ತಾ ಬಂದಿದ್ದೇವೆ ಜನರ ಆಶೀರ್ವಾದ ಸದಾ ಹೀಗೆ ನಮ್ಮ ಕುಟುಂಬದ ಮೇಲಿರಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಸುಭಾಷ ತುರಮರಿ, ಬಿಜೆಪಿ ಜಿಲ್ಲಾ ಮಾಧ್ಯಮ ಪ್ರಮುಖ್ ಸಚಿನ ಕಡಿ, ಪ್ರಮುಖರಾದ ಮಹಾಂತೇಶ ಜಿಗಜಿನ್ನಿ, ಆನಂದ ತುರಮರಿ, ಸಂತೋಷ ರಾಯರ, ಗೌಡಪ್ಪ ಹೊಸಮನಿ, ಬಸವರಾಜ ಗುರವನ್ನವರ,ರವಿ ಹೊಸುರ, ಪ್ರವೀಣ್ ಶಿಂಗಾರಿ,ರಾಘು ಕುಮಚಿ, ಶ್ರೀಶೈಲ ಕಟ್ಟಿಮನಿ, ಮಲ್ಲಿಕಾರ್ಜುನ ಮೆಟಗುಡ್ಡ,ಸಿ.ಜಿ.ವಿಭೂತಿಮಠ, ಬಸವರಾಜ ಶಿಂತ್ರಿ, ನಾಗರಾಜ್ ಬುಡಶೆಟ್ಟಿ ಹಾಗೂ ಅನೇಕರು ಉಪಸ್ಥಿತರಿದ್ದರು

# ದಕ್ಷಿಣ ಭಾರತ ಜೈನ ಸಭೆ ಇತರೆ ಸಮಾಜಗಳಿಗೆ ಮಾದರಿಯಾಗಿದೆ: ಚನ್ನರಾಜ ಹಟ್ಟಿಹೊಳಿ

ಹಾರೂಗೇರಿ : ಸಮಾಜದಲ್ಲಿ ಮಹಿಳೆಯರಿಗೆ ಸೂಕ್ತ ಸ್ಥಾನ ಮಾನ ದೊರಕಿಸಿ ಕೊಡುವ ನಿಟ್ಟಿನಲ್ಲಿ ದಕ್ಷಿಣ ಭಾರತ ಮಹಿಳಾ ಪರಿಷತ್ ಮತ್ತು ವೀರ ಮಹಿಳಾ ಪರಿಷತ್ ಗಳನ್ನು ಸ್ಥಾಪಿಸಿ ಮಹಿಳೆಯರಿಗೆ ಸಮಾಜದಲ್ಲಿ ಉನ್ನತ ಸ್ಥಾನ ಮಾನ ನೀಡುವ ಜೊತೆಗೆ, ಹತ್ತು ಹಲವಾರು ಕಾರ್ಯಕ್ರಮಗಳನ್ನು ಕೈಗೊಂಡು ಜೈನ ಸಮಾಜದ ಅಭಿವೃದ್ಧಿಗೆ ಶ್ರಮಿಸುತ್ತಿರುವ ದಕ್ಷಿಣ ಭಾರತ ಜೈನ ಸಭೆ ಇತರೆ ಸಮಾಜಗಳಿಗೆ ಮಾದರಿಯಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದ್ದಾರೆ.

ಅವರು ಸೋಮವಾರ ಹಾರೂಗೇರಿಯ ಶ್ರೀ ಆಧಿನಾಥ ಸಮುದಾಯ ಭವನದಲ್ಲಿ ನಡೆದ ದಕ್ಷಿಣ ಭಾರತ ಜೈನ ಸಭೆಯ 103ನೇ ತ್ರೈಮಾಸಿಕ ಅಧಿವೇಶನದಲ್ಲಿ ಭಾಗವಹಿಸಿ ಮಾತನಾಡುತ್ತಿದ್ದರು.

ಅಹಿಂಸೆ, ತ್ಯಾಗ, ಶಾಖಾಹಾರಗಳ ರಾಯಭಾರಿಯಂತೆ ವಿಶ್ವದಲ್ಲಿ ಶಾಂತಿಯ ಸಂದೇಶ ಸಾರುತ್ತಿರುವ ಧರ್ಮ ಜೈನ ಧರ್ಮ, ಒಂದು ಇರುವೆಯೂ ಸೇರಿದಂತೆ ಯಾವುದೇ ಜೀವಿಗೆ ನೋವನ್ನುಂಟು ಮಾಡಬಾರದೆನ್ನುವ ಮಹಾನ್ ಧ್ಯೇಯದ ಮೇಲೆ ನಿಂತಿರುವ ಧರ್ಮ ಎಂದು ಹೇಳಿದರು.

ಸುಮಾರು 120 ವರ್ಷಗಳ ಹಿಂದೆ ಬೆಳಗಾವಿ ಜಿಲ್ಲೆಯ ಸ್ತವನಿಧಿಯಲ್ಲಿ ಸ್ಥಾಪಿತಗೊಂಡ ದಕ್ಷಿಣ ಭಾರತ ಜೈನಸಭೆಯ ಕಾರ್ಯಗಳು ಇಂದು ಇತರೆ ಸಮಾಜಗಳಿಗೆ ಮಾದರಿಯಾಗಿದೆ ಎಂದರೆ ತಪ್ಪಾಗಲಾರದು. ದಕ್ಷಿಣ ಭಾರತ ಜೈನ ಸಭೆಯು ಸಮಾಜದ ಅಭಿವೃದ್ಧಿಯಲ್ಲಿ ಅನೇಕ ಸಾಮಾಜಿಕ ಕಾರ್ಯಗಳನ್ನು ಕೈಗೊಂಡಿದೆ. ಶಿಕ್ಷಣ, ಸಂಸ್ಕಾರ, ಮತ್ತು ಕೃಷಿಗೆ ಉತ್ತೇಜನ ನೀಡುವ ಮುಖ್ಯ ಉದ್ಧೇಶದಿಂದ ಸಭೆ ತನ್ನ ಕಾರ್ಯವನ್ನು ನಿರ್ವಹಿಸುತ್ತ ಬಂದಿದೆ. ಯುವಕರಲ್ಲಿ ಸಮಾಜ ಜಾಗೃತಿ ಮತ್ತು ದುಶ್ಚಟದಿಂದ ದೂರವಾಗಿರುವಂತೆ ನೋಡಿಕೊಳ್ಳಲು ವೀರ ಸೇವಾ ದಳ ಸ್ಥಾಪಿಸಿ ಯುವಕರಲ್ಲಿ ಸಮಾಜ ಜಾಗೃತಿ ಮೂಡಿಸುವ ಕಾರ್ಯ ಯಾರಾದರೂ ಮಾಡಿದ್ದರೆ ಅದು ದಕ್ಷಿಣ ಭಾರತ ಜೈನ ಸಭೆ ಅಂದರೆ ತಪ್ಪಾಗಲಾರದು ಎಂದು ಅವರು ಹೇಳಿದರು.

ಜೈನ ಧರ್ಮದ ಅಭಿವೃದ್ಧಿ ಪ್ರಸ್ತುತ ಕಾಂಗ್ರೆಸ್ ಸರಕಾರ ಹಲವಾರು ರೀತಿಯಲ್ಲಿ ನೆರವು ಒದಗಿಸಿದೆ. ಮುಂದಿನ ದಿನಗಳಲ್ಲಿ ಯಾವುದೇ ಕೆಲಸಗಳಾಗಬೇಕಾದರೆ ನಾವು ಸಹ ಕೈ ಜೋಡಿಸುತ್ತೇವೆ ಎಂದು ಚನ್ನರಾಜ ಭರವಸೆ ನೀಡಿದರು.

ಕಾರ್ಯಕ್ರಮದ ಪಾವನ ಸಾನಿಧ್ಯವನ್ನು ಶ್ರೀ ಜಿನಸೇನ ಭಟ್ಟಾರಕ ಪಟ್ಟಾಚಾರ್ಯ ಮಹಾಸ್ವಾಮಿಗಳು, ನಾಂದಣಿ ಹಾಗೂ



ಶ್ರೀ ಲಕ್ಷ್ಮಿಸೇನ ಭಟ್ಟಾರಕ ಪಟ್ಟಾಚಾರ್ಯ ಮಹಾಸ್ವಾಮಿಗಳು, ಕೊಲ್ಲಾಪುರ ವಹಿಸಿದ್ದರು.

ಈ ವೇಳೆ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ, ಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಸಚಿವರಾದ ಡಿ. ಸುಧಾಕರ್, ಬಾಲಚಂದ್ರ ಪಾಟೀಲ, ಮಹಾರಾಷ್ಟ್ರ ರಾಜ್ಯದ ಮಾಜಿ ಸಚಿವರು ಹಾಗೂ ಹಾಲಿ ಶಾಸಕರಾದ ರಾಜೇಂದ್ರ ಪಾಟೀಲ (ಯಡ್ರಾವಕರ್), ಕಾಂಗ್ರೆಸ್ ಯುವ ಮುಖಂಡರಾದ ಚಿದಾನಂದ ಸವದಿ, ಡಿ.ಸಿ.ಸದಲಗೆ, ಚನ್ನಪ್ಪಣ್ಣಾ ಅಸ್ಕಿ, ಡಾ. ಮಹಾವೀರ ದಾನಿಗೊಂಡ, ಉತ್ತಮ ಪಾಟೀಲ, ಮಾಜಿ ಸಚಿವರಾದ ವೀರಕುಮಾರ್ ಪಾಟೀಲ, ಅಪ್ಪಾಸಾಬ್ ಕುಲಗುಡೆ ಉಪಸ್ಥಿತರಿದ್ದರು.



ರಾಯಬಾಗ ತಾಲೂಕಿನ ನಸಲಾಪುರ ಗ್ರಾಮದಲ್ಲಿ ಚತುರ್ಮಾಸ ಕಾರ್ಯಕ್ರಮ ನಿಮಿತ್ತ ಸಿದ್ದಿ ಸೇನೆ ಮುನಿ ಮಹಾರಾಜರ ರಾಯಬಾಗ ಶಾಸಕ ಡಿ ಎಂ ಐಹೊಳೆ ಅವರು ದರ್ಶನ ಪಡೆದು ಶ್ರೀಗಳು ಅವರಿಗೆ ಸನ್ಮಾನ ಮಾಡಿದರು ಈ ಸಂದರ್ಭದಲ್ಲಿ ಸಿ ಬಿ ಎಸ್ ಎಸ್ ಕೆ ನಿರ್ದೇಶಕ ಭರತೇಶ ಬನವಣೆ ಇದ್ದರು

## ಆಕ್ಷೇಪಣೆ ಸಲ್ಲಿಕೆಗೆ ಜುಲೈ 28 ಕೊನೆಯ ದಿನ

ಗದಗ : ಜಿಲ್ಲೆಯ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾ ಸಾರ್ವಜನಿಕ ಆರೋಗ್ಯ ಪ್ರಯೋಗಾಲಯದ ಲ್ಯಾಬ್ ಅಸಿಸ್ಟೆಂಟ್ ಕಂ ಡಿಈಓ ಹುದ್ದೆಗೆ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾ ಪಂಚಾಯತ್, ಗದಗ ಹಾಗೂ ಅಧ್ಯಕ್ಷರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಗದಗ ಇವರ ಅನುಮೋದನೆ ಮೇರೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಸದರಿ ಹುದ್ದೆಗೆ ಅಪ್‌ಲೋಡ್ ಆಗಿರುವ ಅರ್ಜಿಗಳಿಗೆ ರೋಷ್ಟರ್ ಕಂ.ಮೆರಿಟ್ ಅಳವಡಿಸಿ 01 ಲ್ಯಾಬ್ ಅಸಿಸ್ಟೆಂಟ್ ಕಂ. ಡಿಈಓ ಹುದ್ದೆಗೆ ರೋಷ್ಟರ್ ಸಂ.1 ರಲ್ಲಿ 1:7 ಪಟ್ಟಿ ತಯಾರಿಸಿದೆ. ಸದರಿ ಅಭ್ಯರ್ಥಿಗಳಿಗೆ ದಿನಾಂಕ:15.07.2025 ರಿಂದ 17.07.2025ರ ಸಂಜೆ 04.00 ವರೆಗೆ ಮೂಲದಾಖಲಾತಿಗಳನ್ನು ಪರಿಶೀಲಿಸಲಾಗಿದ್ದು, ಲ್ಯಾಬ್ ಅಸಿಸ್ಟಂಟ್ ಕಂ. ಡಿಈಓ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಯಾರಿಸಿದೆ. ತಾತ್ಕಾಲಿಕ ಆಯ್ಕೆ ಪಟ್ಟಿಗೆ ಯಾವುದಾದರೂ ಆಕ್ಷೇಪಣೆ ಇದ್ದಲ್ಲಿ ರಜಾ ದಿನಗಳನ್ನು ಹೊರತುಪಡಿಸಿ ಜುಲೈ 22 ರಿಂದ 28 ರವರೆಗೆ ಕಚೇರಿ ಸಮಯದಲ್ಲಿ ಜಿಲ್ಲಾ ಕಾರ್ಯಕ್ರಮ ನಿರ್ವಹಣಾ ಘಟಕ, ಗದಗ ಇಲ್ಲಿ ಲಿಖಿತ ರೂಪದಲ್ಲಿ ನೀಡಲು ಸೂಚಿಸಿದೆ. ಲ್ಯಾಬ್ ಅಸಿಸ್ಟಂಟ್ ಕಂ. ಡಿಈಓ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು **gadag.nic.in** ವೆಬ್‌ಸೈಟ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯ ಸೂಚನಾ ಫಲಕದಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಆಯ್ಕೆ ಸಮಿತಿ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಿಂದ ಪ್ರಗತಿ ಪರಿಶೀಲನಾ ಸಭೆ

# ಮಹಿಳೆಯರ ಆರ್ಥಿಕ ಸಬಲೀಕರಣವೇ ನಿಗಮದ ಗುರಿ

ಗದಗ : ಮಹಿಳೆಯರನ್ನು ಆರ್ಥಿಕವಾಗಿ ಸಬಲೀಕರಣಗೊಳಿಸುವುದಕ್ಕಾಗಿ ಹಾಗೂ ಅವರ ಶ್ರೇಯೋಭಿವೃದ್ಧಿಗಾಗಿ ಸರ್ಕಾರವು ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಅವುಗಳ ಅನುಷ್ಠಾನಕ್ಕಾಗಿ ಇಲಾಖೆಯ ಅಧಿಕಾರಿಗಳು ಶ್ರಮಿಸಬೇಕೆಂದು ಕರ್ನಾಟಕ ರಾಜ್ಯದ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಜಿ ಪದ್ಮಾವತಿ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಭಾಭವನದಲ್ಲಿ ಸೋಮವಾರ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಮಹಿಳಾ ಅಭಿವೃದ್ಧಿ ನಿಗಮದಿಂದ ಬಿಡುಗಡೆಯಾದ ಅನುದಾನದ ಸಮರ್ಪಕ ಬಳಕೆಯು ಅತೀ ಮುಖ್ಯವಾಗಿದೆ. ಜಿಲ್ಲೆಯಲ್ಲಿನ ಲಿಂಗತ್ವ ಅಲ್ಪಸಂಖ್ಯಾತರಿಗೆ ಬಿಪಿಎಲ್ ಕಾರ್ಡ ಹಾಗೂ ಉಚಿತ ಬಸ್ ಪ್ರಯಾಣ ಸೌಲಭ್ಯಗಳನ್ನು ಒದಗಿಸಿ ಅವರು ಸಮಾಜದ ಮುಖ್ಯವಾಹಿನಿಗೆ ಬರುವಂತೆ ಕ್ರಮ ವಹಿಸಬೇಕು. ಕಿರುಸಾಲ ಮತ್ತು ನೇರ ಸಾಲ ಯೋಜನೆಯನ್ನು ಈಗ ಪುನರಾರಂಭಗೊಳಿಸಲಾಗುತ್ತಿದ್ದು ಅದರ ಸೌಲಭ್ಯ ಅರ್ಹರಿಗೆ ನಿಗದಿತ ಸಮಯದಲ್ಲೇ ದೊರಕುವಂತಾಗಬೇಕು. ಲಿಂಗತ್ವ ಅಲ್ಪಸಂಖ್ಯಾತರಿಗೆ ಆಧಾರ ಕಾರ್ಡ ಒದಗಿಸುವಲ್ಲಿ ವಿನಾಕಾರಣ ವಿಳಂಬವಾಗಬಾರದು ಎಂದು ನಿಗಮದ



ಅಧ್ಯಕ್ಷೆ ಶ್ರೀಮತಿ ಜಿ ಪದ್ಮಾವತಿ ನಿರ್ದೇಶನ ನೀಡಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಶ್ರೀಮತಿ ಪದ್ಮಾವತಿ ಜಿ ಮಾತನಾಡಿ ಜಿಲ್ಲೆಯಲ್ಲಿ ಒಟ್ಟು 2970 ದಮನಿತ ಮಹಿಳೆಯರಿದ್ದಾರೆ. 2015–16 ರಿಂದ 2024–2025 ನೇ ಸಾಲಿನವರೆಗೆ 185 ಮಹಿಳೆಯರು ಚೇತನ ಯೋಜನೆಯ ಸೌಲಭ್ಯ ಪಡೆದಿದ್ದಾರೆ. ಜಿಲ್ಲೆಯಲ್ಲಿ 2970 ಎಚ್.ಐ.ವಿ. ಸೋಂಕಿತ ಮಹಿಳೆಯರಿದ್ದು ಆ ಪೈಕಿ 174 ಜನರು ಧನಶ್ರೀ ಯೋಜನೆಯ ಸೌಲಭ್ಯ ಪಡೆದಿರುತ್ತಾರೆ. 825 ಲಿಂಗತ್ವ ಅಲ್ಪಸಂಖ್ಯಾತರ ಪೈಕಿ 155 ಲಿಂಗತ್ವ ಅಲ್ಪಸಂಖ್ಯಾತರು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಯ ಸೌಲಭ್ಯ ಪಡೆದಿರುತ್ತಾರೆ. 2018–19 ರಿಂದ 2024–2025 ನೇ ಸಾಲಿನವರೆಗೆ ಉದ್ಯೋಗಿನಿ ಯೋಜನೆಯಡಿ 194 ಮಹಿಳೆಯರು ಸೌಲಭ್ಯ ಪಡೆದಿದ್ದಾರೆ. ಪ್ರಸ್ತುತ 73 ಲಿಂಗತ್ವ ಅಲ್ಪಸಂಖ್ಯಾತರ ಗುರುತಿನ ಚೀಟಿನೀಡಲಾಗಿದೆ ಎಂದು ಸಭೆಗೆ ವಿವರಿಸಿದರು.

ಸಭೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ, ಚೇತನ ಯೋಜನೆ, ಲಿಂಗತ್ವ ಅಲ್ಪಸಂಖ್ಯಾತರ ಗುರುತಿನ ಚೀಟಿ, ಆರೋಗ್ಯ ತಪಾಸಣಾ ಕಾರ್ಯಕ್ರಮ, ಕಿರು ಸಾಲ ಯೋಜನೆ, ಉದ್ಯೋಗಿನಿ ಯೋಜನೆ, ಧನಶ್ರೀ ಯೋಜನೆ ಪ್ರಗತಿ ಪರಿಶೀಲನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಶ್ರೀಮತಿ ರಾಧಾ ಮಣ್ಣೂರ, ಮಹಿಳಾ ಅಭಿವೃದ್ಧಿ ನಿಗಮದ ಪ್ರಧಾನ ವ್ಯವಸ್ಥಾಪಕರಾದ ಅಕ್ಕಮಹಾದೇವಿ, ಜಿಲ್ಲಾ ಸ್ತ್ರೀ ಶಕ್ತಿ ಒಕ್ಕೂಟದ ಅಧ್ಯಕ್ಷರಾದ ಶ್ರೀಮತಿ ಪುಷ್ಪಾ, ಎಲ್ಲ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸೃಷ್ಟಿ ಸಂಕುಲ ಸಂಸ್ಥೆಯ ಹಾಗೂ ಜಿಲ್ಲಾ ರಕ್ಷಣೆ ಮಹಿಳಾ ಒಕ್ಕೂಟದ ಮುಖ್ಯಸ್ಥರು, ಲಿಂಗತ್ವ ಅಲ್ಪಸಂಖ್ಯಾತರು, ದಮನಿತ ಮಹಿಳೆಯರು ಸೇರಿದಂತೆ ಇತರರು ಹಾಜರಿದ್ದರು.

# ದೇವಸ್ಥಾನದ ಮೇಲ್ಛಾವಣಿ ಕಾಮಗಾರಿಗೆ ಪೂಜೆ



ಬೆಳಗಾವಿ : ಬೆಳಗಾವಿ ಗ್ರಾಮೀಣ ಕ್ಷೇತ್ರದ ಕೊಂಡಸಕೊಪ್ಪ ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಶ್ರೀ ವಿಠ್ಠಲ ಬೀರದೇವರ ದೇವಸ್ಥಾನ ಕಟ್ಟಡದ ಮೇಲ್ಛಾವಣಿಗೆ ಕಾಂಕ್ರೀಟ್ (ಸ್ಲ್ಯಾಬ್) ಹಾಕುವ ಕಾಮಗಾರಿಗೆ ಸ್ಥಳೀಯ ಜನ ಪ್ರತಿನಿಧಿಗಳು, ಗ್ರಾಮದ ಮುಖಂಡರು ಹಾಗೂ ಯುವ ಕಾಂಗ್ರೆಸ್ ಮುಖಂಡ ಮೃಣಾಲ್ ಹೆಬ್ಬಾಳಕರ್ ಸೇರಿ ಪೂಜೆ ನೆರವೇರಿಸಿ, ಚಾಲನೆ ನೀಡಿದರು.

1.50 ಕೋಟಿ ರೂ, ವೆಚ್ಚದಲ್ಲಿ ದೇವಸ್ಥಾನ ನಿರ್ಮಾಣ ಮಾಡಲಾಗುತ್ತಿದೆ. ದೇವಸ್ಥಾನದ ನಿರ್ಮಾಣಕ್ಕಾಗಿ ಬಾಗಲಕೋಟೆಯ ಶೆಲ್ಲಿಕೇರಿಯಿಂದ ವಿಶೇಷ ಕಲ್ಲುಗಳನ್ನು ತರಿಸಿ, ಒಡಿಶಾ ರಾಜ್ಯದ ಶಿಲ್ಪಕಾರರಿಂದ ಕಲ್ಲುಗಳನ್ನು ಕೆತ್ತನೆ ಮಾಡಿಸಲಾಗಿದ್ದು, ಆದಷ್ಟು ಬೇಗ ಸುಂದರ ದೇವಸ್ಥಾನ ನಿರ್ಮಾಣ ಮಾಡುವಂತೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಗುತ್ತಿಗೆದಾರರಿಗೆ ಸೂಚನೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ವಿಠ್ಠಲ ಸಾಂಬ್ರೇಕರ್, ಮಹಾಲಿಂಗ ಸಾಂಬ್ರೇಕರ್, ಮಲ್ಲಪ್ಪ ಸಾಂಬ್ರೇಕರ್, ಸುರೇಶ ಕರಗುಪ್ಪಿಕರ್, ಬಾಗಣ್ಣ ಸಾಂಬ್ರೇಕರ್, ವಿಠ್ಠಲ ರಾಮಾ ಸಾಂಬ್ರೇಕರ್, ಪಿರಾಜಿ ಸಾಂಬ್ರೇಕರ್, ಪಕೀರ್ ಸಾಂಬ್ರೇಕರ್, ಗಂಗಪ್ಪ ಸಾಂಬ್ರೇಕರ್, ಗಂಗಾರಾಮ ಅಷ್ಟೇಕರ್, ದೇವಸ್ಥಾನ ಕಮಿಟಿಯ ಸದಸ್ಯರು, ಗ್ರಾಮ ಪಂಚಾಯತಿಯ ಸದಸ್ಯರು ಸೇರಿದಂತೆ ಗ್ರಾಮದ ನಾಗರಿಕರು ಉಪಸ್ಥಿತರಿದ್ದರು.

****



ರಾಯಬಾಗ ತಾಲೂಕಿನ ನಸಲಾಪುರ ಗ್ರಾಮದಲ್ಲಿ ಚಾತುರ್ಮಾಸ ಕಾರ್ಯಕ್ರಮ ನಿಮಿತ್ತ ಸಿದ್ದಸೇನ ಮುನಿ ಮಹಾರಾಜರ ದರ್ಶನ ಪಡೆದ ಡಿ ಸುಧಾಕರ ಅವರನ್ನು ಶ್ರೀಗಳು ಅವರಿಗೆ ಸನ್ಮಾನ ಮಾಡಿದರು. ಈ ಸಂದರ್ಭದಲ್ಲಿ ಗೊಮಟೇಶ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ. ಏನ್ ಎ ಮಗದುಮ ಅನೇಕ ಜೈನ ಶ್ರಾವಕರು ಇದ್ದರು

## ಜುಲೈ.31ರ ಒಳಗಾಗಿ ಮಾವು ಬೆಳೆಗೆ ಬೆಳೆ ವಿಮೆ ಪಾವತಿಸಲು ಕೋರಿಕೆ

ಬೆಳಗಾವಿ, : 2025ನೇ ಮುಂಗಾರು ಹಂಗಾಮಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿ ಮಾವು ಬೆಳೆಗೆ ಬೆಳೆ ವಿಮೆ ಪಾವತಿಸಬಹುದಾಗಿದ್ದು, ಖಾನಾಪೂರ ತಾಲೂಕಿನ ಖಾನಾಪೂರ ಹಾಗೂ ಬೀಡಿ ಹೋಬಳಿಗಳಿಗೆ ಮಾವು ಬೆಳೆಗೆ ದಿನಾಂಕ: 31.07.2025 ರೊಳಗಾಗಿ ಬೆಳೆ ವಿಮಾ ಪಾವತಿಸಬಹುದಾಗಿದೆ. ಪ್ರತಿ ಹೆಕ್ಟೇರ್ ಮಾವು ಬೆಳೆಗೆ ರೂ. 4000/– ರಂತೆ ರೈತರ ವಂತಿಕೆಯ ವಿಮಾ ಕಂತು ಸರ್ಕಾರದಿಂದ ನಿಗದಿಯಾಗಿರುತ್ತದೆ.

ಯೋಜನೆಗಳಿಗೆ ಸಂಬಂಧಪಟ್ಟಂತೆ ಅಧಿಸೂಚಿತ ಗ್ರಾಮ ಪಂಚಾಯತಿ ಬೆಳೆಗಳ ವ್ಯಾಪ್ತಿಯ ಕುರಿತು ಸಂಬಂಧಪಟ್ಟ ಹೋಬಳಿ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಿ, ಹತ್ತಿರದ ಬ್ಯಾಂಕ್ ಶಾಖೆಗಳಲ್ಲಿ ಗ್ರಾಮ–ಒನ್ ಅಥವಾ ಸಾಮಾನ್ಯ ಸೇವಾ ಕೇಂದ್ರಗಳಲ್ಲಿ ವಿಮೆ ಕಂತು ಪಾವತಿಸುವುದು. ಬೆಳಗಾವಿ ಜಿಲ್ಲೆಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಗೆ **TATA AIG GIC** ಕಂಪನಿಯು ಅಧಿಸೂಚಿತ ವಿಮಾ ಕಂಪನಿಯಾಗಿರುತ್ತದೆ. ರೈತರು ಸದರಿ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹೋಬಳಿ ತೋಟಗಾರಿಕೆ ಅಧಿಕಾರಿಗಳ ದೂರವಾಣಿ ಸಂಖ್ಯೆ ಬೀಡಿ: 9019345895, ಖಾನಾಪೂರ: 9901041457, ಕಛೇರಿ ಸಂ: 08336–223387 ಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಖಾನಾಪೂರ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿ.ಪಂ) ಪ್ರಕಟಣೆಯ ಮೂಲಕ ಕೋರಿದ್ದಾರೆ.

# ಮಕ್ಕಳ ಸಹಾಯವಾಣಿ 1098 ನೂತನ ಲೋಗೋ ಬಿಡುಗಡೆ

ಬೆಳಗಾವಿ, ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮಂತ್ರಾಲಯದಿಂದ ಮಕ್ಕಳ ಸಹಾಯವಾಣಿಯ 1098 ನೂತನ ಲೋಗೋ ಬಿಡುಗಡೆಗೊಳಿಸಲಾಗಿದೆ.

ರಕ್ಷಣೆ ಮತ್ತು ಆರೈಕೆ ಮಕ್ಕಳಿಗಾಗಿ ತುರ್ತು ಸೇವೆ ಒದಗಿಸುವ ದಿನದ 24 ಗಂಟೆಯೂ ಕಾರ್ಯನಿರ್ವಹಿಸುವ ಮಕ್ಕಳ ಉಚಿತ ಸಹಾಯವಾಣಿ ಸಂಖ್ಯೆ–1098 ಹೊಸ ವಿನ್ಯಾಸದೊಂದಿಗೆ ಬಿಡುಗಡೆಯಾಗಿದ್ದು ಮಿಷನ್ ವಾತ್ಸಲ್ಯ ಯೋಜನೆ ಅನ್ವಯ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಿರ್ದೇಶನದಂತೆ ಮಕ್ಕಳ ಸಹಾಯವಾಣಿ ಘಟಕ 1098ನ್ನು ರಾಜ್ಯ ಸರ್ಕಾರವು ಇಖಖಖ/112 ನೊಂದಿಗೆ ಏಕೀಕರಿಸಿ ಅನುಷ್ಠಾನಗೊಳಿಸಿದ್ದು ಮಕ್ಕಳ ರಕ್ಷಣಾ ನಿರ್ದೇಶನಾಲಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಡಿಯಲ್ಲಿ ಮಕ್ಕಳ ಸಹಾಯವಾಣಿ 1098/112 ಸಂಕಷ್ಟದಲ್ಲಿರುವ ಮಕ್ಕಳ ರಕ್ಷಣೆ ಮತ್ತು ಪೋಷಣೆಗಾಗಿ ಕೆಲಸ ನಿರ್ವಹಿಸುತ್ತಿದೆ.

ಸಾರ್ವಜನಿಕರು, ಸಂಘ ಸಂಸ್ಥೆಯ ಮುಖ್ಯಸ್ಥರು, ಮಕ್ಕಳು, ಮಕ್ಕಳ ಸ್ನೇಹಿ ವ್ಯಕ್ತಿಗಳು, ಸರ್ಕಾರಿ ಅಧಿಕಾರಿಗಳು, ಸಮಾಜದ ಯಾವುದೇ ವ್ಯಕ್ತಿಗಳು ಸಂಕಷ್ಟದಲ್ಲಿರುವ ಮಕ್ಕಳು ಅಂದರೆ ಬಾಲ್ಯ ವಿವಾಹಕ್ಕೆ ಒಳಗಾಗುತ್ತಿರುವ ಸಂದರ್ಭದಲ್ಲಿ, ಬಾಲಕಾರ್ಮಿಕ ಮಕ್ಕಳು ಕಂಡಾಗ, ಕಾಣೆಯಾದ ಮಕ್ಕಳು, ದೈಹಿಕ ದಂಡನೆಗೆ ಒಳಗಾದ, ವಸತಿ ಅವಶ್ಯವಿರುವ ಮಕ್ಕಳು, ಭಿಕ್ಷಾಟನೆ/ಚಿಂದಿ ಆಯುವ ಮಕ್ಕಳು, ವೈದ್ಯಕೀಯ ಸಹಾಯ ಅವಶ್ಯವಿರುವ ಮಕ್ಕಳಿಗಾಗಿ, ಆಪ್ತಸಮಾಲೋಚನೆ ಅವಶ್ಯವಿರುವ ಮಕ್ಕಳು, ಮಾರಾಟ ಮತ್ತು ಸಾಗಾಣಿಕೆಗೆ ಒಳಗಾದ ಮಕ್ಕಳು, ನಿರ್ಗತಿಕ ಹಾಗೂ ಒಂಟಿ ಮಗು ಕಂಡು ಬಂದಲ್ಲಿ, ಶಾಲೆಯಿಂದ ಹೊರಗುಳಿದ ಮಕ್ಕಳಿಗಾಗಿ, ದೈಹಿಕ ಕಿರುಕುಳ/ಮಾನಸಿಕ ಕಿರುಕುಳಕ್ಕೊಳಗದ ಮಕ್ಕಳು, ನೆರೆ ಮತ್ತು ಪ್ರವಾಹ ಸಂತ್ರಸ್ತಕ್ಕೊಳಗಾದ ಮಕ್ಕಳು, ಮಾದಕ ವ್ಯಸನಕ್ಕೆ ಬಲಿಯಾದ ಮಕ್ಕಳು ಕಂಡು ಬಂದಾಗ ಮಕ್ಕಳ ಸಹಾಯವಾಣಿ–1098/112ಗೆ ತುರ್ತು ಕರೆಗಳನ್ನು ಮಾಡಬಹುದಾಗಿದೆ.

ಈ ಹಿಂದೆ ಜಾರಿಯಲ್ಲಿರುವ ಮಕ್ಕಳ ಸಹಾಯವಾಣಿ ಲೋಗೋ ಬದಲಾಗಿ ಸರ್ಕಾರ ಬಿಡುಗಡೆಗೊಳಿಸಿದ ನೂತನ ಮಕ್ಕಳ ಸಹಾಯವಾಣಿ ಲೋಗೋವನ್ನು ಎಲ್ಲ ಸರ್ಕಾರಿ/ಖಾಸಗಿ ಶಾಲೆಗಳು, ಸರ್ಕಾರಿ ವಸತಿ ನಿಲಯಗಳ, ಸರ್ಕಾರಿ ಪದವಿ ಪೂರ್ವ ಕಾಲೇಜುಗಳ, ಗ್ರಾಮ ಪಂಚಾಯತಿಗಳ, ಅಂಗನವಾಡಿ ಕೇಂದ್ರಗಳ, ಬಸ್ ನಿಲ್ದಾಣ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸೂಕ್ತ ಸ್ಥಳದ ಮೇಲೆ ಗೋಡೆ ಬರಹ ಬರೆಯಿಸಿ ವ್ಯಾಪಕ ಪ್ರಚಾರ ಕೈಗೊಳ್ಳಬೇಕೆಂದು ಬೆಳಗಾವಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಡಾ. ಪರ್ವಿನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 45 ನೇ ರೈತ ಹುತಾತ್ಮ ದಿನಾಚರಣೆ ಹಿನ್ನೆಲೆ



ಯರಗಟ್ಟಿ: 45 ನೇ ರೈತ ಹುತಾತ್ಮ ದಿನಾಚರಣೆ ಹಿನ್ನೆಲೆ ಪಟ್ಟಣದ ರೈತ ಹುತಾತ್ಮ ಭಾವಚಿತ್ರಕ್ಕೆ ಶಾಸಕ ವಿಶ್ವಾಸ ವೈದ್ಯ, ರೈತ ಮುಖಂಡರು ಪರಿಸರವಾದಿಗಳು ಸೇ-ರಿದಂತೆ ವಿವಿಧ ರೈತ ಮುಖಂಡರು ಗೌರವ ನಮನ ಸಲ್ಲಿಸಿದರು.

ಪ್ರವಾಸಿ ಮಂದಿರದಿಂದ ಸಂಗೊಳ್ಳಿ ರಾಯಣ್ಣ ವೃತ್ತದವರೆಗೆ ರೈತರ ಮೆರವಣಿಗೆ ನಡೆಯಿತು. ಮೆರವಣಿಗೆ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚ-ರಿಸಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಶಾಸಕ ವಿಶ್ವಾಸ ವೈದ್ಯ ಅವರು ಲಿಫ್ಟ್ ಇರಗೇಶನ್ ಪಂಪ್ಸೆಟ್ ಗಳನ್ನು ನವಿಕರಿಸಲು ಸಂಬಂಧಪಟ್ಟ ಸಚಿವರ ಜೊತೆ ಮಾತನಾಡಿದ್ದೆನೆ ಹಾಗೂ ಬರುವ ದಿನಗಳಲ್ಲಿ ತಾಲೂಕಿನಲ್ಲಿ ನೀರಾವರಿ ಯೋಜನೆಗಳನ್ನು ಹಂತ ಹಂತವಾಗಿ ಜಾರಿಗೆ ತರಲಾಗುವುದು. ಮತ್ತು ಶೀಘ್ರದಲ್ಲೇ ಯರಗಟ್ಟಿಗೆ ಪೊಲೀಸ್ ಠಾಣೆಯನ್ನು ಪ್ರಾರಂಭಿಸಲಾಗುವುದು ಎಂದು ಹೇಳಿದರು.


ಕೆಎಮ್ಎಫ್ ನಿರ್ದೇಶಕ ಶಂಕರ ಇಟ್ನಾಳ, ಎಪಿಎಂಸಿ ಅಧ್ಯಕ್ಷ ನೀಲಕಂಠ ಸಿದ್ದಬಸವರ, ಮುನವಳ್ಳಿ ಪುರಸಭೆ ಅಧ್ಯಕ್ಷ ಸಿ. ಬಿ. ಬಾಳಿ, ಶಿವಾನಂದ ಕರಿಗೋಣ್ಣವರ, ಬಾಸ್ಕರ ಹಿರೇಮೆತ್ರಿ, ವಿಠ್ಠಲಗೌಡ ದೇವರಡ್ಡಿ,ಚಾಯಪ್ಪ ಹುಂಡೇಕಾರ ರೈತ ಸಂಘದ ಅಧ್ಯಕ್ಷ ಸೋಮು ರೈನಾಪೂರ, ಯಕ್ಕೇರೆಪ್ಪ ತಳವಾರ,ರಂಗಪ್ಪ ಗಂಗರಡ್ಡಿ, ದಲಿತ ಮುಖಂಡರಾದ ಚಿದಂಬರ ಕಟ್ಟಿಮನಿ, ಯಮನಪ್ಪ ಮಾಳಗಿ, ರೈತರಾದ ಶೇಖರ ಕಿಲಾರಿ, ಯಕ್ಕೇರೆಪ್ಪ ಮಾಳಗಿ, ಕಾಶೀಮಸಾಬ ಜಮಾದಾರ, ಮುಂತಾದವರು ಪಾಲ್ಗೊಂಡಿದ್ದರು.

## ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ಹಿಂಪಡೆದ ರೈತರು

ವಿಜಯಪುರ, ಬೂದಿಹಾಳ – ಪೀರಾಪುರ ಏತ ನೀರಾವರಿ ಯೋಜನೆ ಕಾಮಗಾರಿ ಪೂರ್ಣಗೊಳಿಸುವುದಾಗಿ ಬೃಹತ್ ಹಾಗೂ ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ. ಬಿ. ಪಾಟೀಲ ಭರವಸೆ ನೀಡಿದ ಹಿನ್ನೆಲೆಯಲ್ಲಿ ತಾಳಿಕೋಟೆ ತಾಲೂಕಿನ ಕೊಡಗಾನೂರ ಬಳಿ ರೈತರು ಕಳೆದ 9 ದಿನಗಳಿಂದ ನಡೆಸುತ್ತಿದ್ದ ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹವನ್ನು ಹಿಂಪಡೆದಿದ್ದಾರೆ.

ಇಂದು ರವಿವಾರ ಸಚಿವರು ಕೊಡಗಾನೂರಿನ ಬಳಿ ಧರಣಿ ನಿರತ ರೈತರನ್ನು ಭೇಟಿ ಮಾಡಿ ಮಾತುಕತೆ ನಡೆಸಿದರು.ಈ ಸಂದರ್ಭ ಕೆ.ಬಿ.ಜೆ.ಎನ್.ಎಲ್ ವ್ಯವಸ್ಥಾಪಕ ನಿರ್ದೇಶಕರಾದ ಕೆ.ಪಿ.ಮೋಹನರಾಜ್ ಅವರೊಂದಿಗೆ ಮೊಬೈಲ್ ಕರೆ ಮಾಡಿ ಮಾತನಾಡಿದ ಸಚಿವರು, ಈ ಯೋಜನೆಯ ಕುರಿತು ಮಾಹಿತಿ ಪಡೆದರು.

ಬಳಿಕ ಮಾತನಾಡಿದ ಅವರು, ಈ ಯೋಜನೆ ನನ್ನ ಕನಸಿನ ಕೂಸು. ಈ ಹಿಂದೆ 2013–18 ರ ಅವಧಿಯಲ್ಲಿ ನಮ್ಮ ಸರಕಾರ ಅಧಿಕಾರದಲ್ಲಿದ್ದಾಗ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾರ್ಗದರ್ಶನದಲ್ಲಿ ಈ ಯೋಜನೆಯನ್ನು ಕೈಗೊಳ್ಳಲಾಗಿತ್ತು. ಆದ-'ರೆ ನೀರು ಹಂಚಿಕೆ ಸಮಸ್ಯೆ ಮತ್ತು ಕೆಲವು



ತಾಂತ್ರಿಕ ಕಾರಣಗಳಿಂದಾಗಿ ಕಾಮಗಾ-ರಿಗೆ ಹಿನ್ನಡೆಯಾಗಿತ್ತು. ಈಗಲೂ ನಮ್ಮದೇ ಸರಕಾರ ಅಧಿಕಾರದಲ್ಲಿದ್ದು ನಮ್ಮ ಕನಸಿನ ಈ ಮಹತ್ವದ ಯೋಜನೆಯನ್ನು ಮರುಜೀವಿತಗೊಳಿಸುವ ನಿಟ್ಟಿನಲ್ಲಿ, ಮುಂದಿನ 3 ತಿಂಗಳೊಳಗೆ ಹೊಲಗಾಲುವೆ ನಿರ್ಮಿಸಲಾಗುವ ಜಮೀನುಗಳ ರೈತರ ಸಹಮತಿಯೊಂದಿಗೆ ವಿವರವಾದ ಯೋಜನಾ ವರದಿ (ಡಿಪಿಆರ್) ಪೂರ್ಣಗೊಳಿಸಲಾಗುವುದು. 4ನೇ ತಿಂಗಳಲ್ಲಿ ಅನುಮತಿ ಪಡೆದು ಕಾಮಗಾರಿ ಪ್ರಾರಂಭಿಸಲಾಗುವುದು. 9 ತಿಂಗಳಲ್ಲಿ ಹೊಲಗಾಲುವೆ ಕಾಮಗಾರಿ ಪೂರ್ಣಗೊಳಿಸಲಾಗುವುದು. ವಿಜಯಪುರದಲ್ಲಿ ಸೆಪ್ಟೆಂಬರ್ ನಲ್ಲಿ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಈ ಯೋಜನೆಯ ಕಾಮಗಾ-ರಿಯ ಬಗ್ಗೆ ಅಧಿಕೃತವಾಗಿ ಘೋಷಣೆ ಮಾಡಿಸಲಾಗುವುದು. ರೈತರ ಹಿತರಕ್ಷಣೆ ನಮ್ಮ ಸರಕಾರದ ಆದ್ಯತೆಯಾಗಿದ್ದು, ಅವರ ಕನಸುಗಳನ್ನು ಸಾಕಾರಗೊಳಿಸಲು ನಾವು ಸದಾ ಬದ್ಧರಾಗಿದ್ದೇವೆ ಎಂದು ಸಚಿವರು ಭರವಸೆ ನೀಡಿದರು. ಅಲ್ಲದೇ, ಈ ಜಿಲ್ಲೆಯಲ್ಲಿ ಈ ಹಿಂದೆ ಜಲಸಂಪನ್ಮೂಲ ಮತ್ತು ಗೃಹ ಸಚಿವರಾಗಿದ್ದ ಎರಡೂ ಅವಧಿಯಲ್ಲಿ ತಾವು ನೀರಾವರಿ ಯೋಜನೆಗಳ ಜಾರಿಗೆ ಕೈಗೊಂಡ ಕ್ರಮಗಳನ್ನು ಅವರು ಎಳೆ-ಎಳೆಯಾಗಿ ತಿಳಿಸಿದರು.

ಆಲಮೇಲದ ವಿರಕ್ತ ಮಠದ ಶ್ರೀ ಮಲ್ಲಿಬೊಮ್ಮಯ್ಯ ಸ್ವಾಮೀಜಿ ಮಾತನಾಡಿ, ಸಚಿವ ಎಂ. ಬಿ. ಪಾಟೀಲರು ನುಡಿದಂತೆ ನಡೆಯುತ್ತಿರುವ ಬಸವ ನಾಡಿನ ಭಗೀರಥ. ಶ್ರೀ ಸಿದ್ಧೇಶ್ವರ ಸ್ವಾಮೀಜಿ ಅವರು, ಬೊಗಸೆ ನೀರು ಕೇಳಿದರೆ ಅವರು ಕೊಡ ನೀರು ತಂದು ಕೊಟ್ಟಿದ್ದಾರೆ. ರೈತರು ಡಿಪಿಆರ್ ಮಾಡುವಾಗ ಅಧಿಕಾರಿಗಳೊಂದಿಗೆ ಸಹಕ-ರಿಸಿರಿ ಎಂದು ಹೇಳಿದರು.

ಸಚಿವರ ಭರವಸೆಗೆ ಒಪ್ಪಿದ ರೈತರು ಧರಣಿ ಸತ್ಯಾಗ್ರಹ ಹಿಂಪಡೆದರು. ಇದರಿಂದಾಗಿ ಕಳೆದ ದಿನದಿಂದ ನಡೆಯುತ್ತಿರುವ ರೈತರ ಹೋರಾಟ ಸುಖಾಂತ್ಯ ಕಂಡಂತಾಗಿದೆ.

ಈ ಸಂದರ್ಭದಲ್ಲಿ ಆಲಮೇಲ ಸ್ವಾಮೀಜಿ, ದೇವರ ಹಿಪ್ಪರಗಿ ಶಾಸಕ ರಾಜುಗೌಡ ಪಾಟೀಲ, ಮಾಜಿ ಶಾಸಕ ಶರಣಪ್ಪ ಸುಣಗಾರ, ರೈತ ಮುಖಂಡರಾದ ಪ್ರಭುಗೌಡ ಲಿಂಗದಳ್ಳಿ, ಬಿ. ಎಸ್. ಪಾಟೀಲ ಯಾಳಗಿ, ಸುಭಾಸ ಛಾಯಾಗೋಳ, ಅರವಿಂದ ಕುಲಕರ್ಣಿ, ಸುರೇಶಬಾಬು ಬಿರಾದಾರ, ಪ್ರಭು ಬಿರಾದಾರ, ಶಿವಪುತ್ರ ಚೌಧರಿ, ಕಾಶಿನಾಥ ತಳವಾರ ಮುಂತಾದವರು ಉಪಸ್ಥಿತರಿದ್ದರು.

## ನೇಗಿಲ ಯೋಗಿ ರೈತ ಸೇವಾ ಸಂಘದಿಂದ ರೈತ ಹುತಾತ್ಮ ದಿನಾಚರಣೆ ಆಚರಣೆ



ಬೈಲಹೊಂಗಲ : ದೇಶಕ್ಕೆ ಅನ್ನ ನೀಡುವ ರೈತ ಸಾಕಷ್ಟು ತೊಂದರೆಯಲ್ಲಿದ್ದಾನೆ. ಕೇಂದ್ರ, ರಾಜ್ಯ ಸರಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡಬೇಕು ಎಂದು ನೇಗಿಲ ಯೋಗಿ ರೈತ ಸೇವಾ ಸಂಘದ ಜಿಲ್ಲಾಧ್ಯಕ್ಷ ಶಂಕರ ಬೋಳನ್ನವರ ಹೇಳಿದರು. ಪಟ್ಟಣದ ರೈತ ಭವನದಲ್ಲಿ ನೇಗಿಲ ಯೋಗಿ ರೈತ ಸೇವಾ ಸಂಘದಿಂದ ಸೋಮವಾರ ರೈತ ಹುತಾತ್ಮ ದಿನಾಚರಣೆ ಆಚರಿಸಿ ಅವರು ಮಾತನಾಡಿದರು.

ರೈತ ಬಂಡಾಯ ನಡೆದು 45 ವರ್ಷಗಳೇ ಕಳೆದಿವೆ. ಆದರೆ, ರೈತರ ಬೇಡಿಕೆಗಳು ಮಾತ್ರ ಈಡೇರಿಲ್ಲ. ಅವರ ಬಾಳು ಹಸನವಾಗುತ್ತಿಲ್ಲ. ಪರಿಸರ ಹಾಗೂ ಇನ್ನೂಳಿದ ನೆಪಗಳ ಹೇಳುವುದನ್ನು ಬಿಟ್ಟು ಕೇಂದ್ರ ಸರಕಾರ ತಕ್ಷಣ ಮಹಾದಾಯಿ, ಕಳಸಾ–ಬಂಡೂರಿ ನಾಲಾ ಜೋಡಣೆಗೆ ಮುಂದಾಗಬೇಕು.

ರೈತರ ಸಂಪೂರ್ಣ ಸಾಲ ಮನ್ನಾ ಮಾಡಬೇಕು. 2025 ನೇ ಸಾಲಿನ ಮುಂಗಾರು ಬೆಳೆಗೆ ಕೃಷಿ ಇಲಾಖೆಗಳಿಂದ ತೆಗೆದುಕೊಂಡು ಬಿತ್ತನೆ ಮಾಡಿದ ಕಳಪೆ ಸೋಯಾಬಿನ್ ಬೀಜಗಳಿಂದ ಹಾನಿಯಾದ ರೈತರಿಗೆ ಸರಕಾರ ತಕ್ಷಣ ಎಕರೆಗೆ 20 ಸಾವಿರ ಘೋಷಿಸಬೇಕು ಎಂದು ಒತ್ತಾಯಿಸಿದರು.

ತಾಲೂಕಾಧ್ಯಕ್ಷ ಸೋಮಲಿಂಗಪ್ಪ ಮೆಳ್ಳಿಕೇರಿ ಮಾತನಾಡಿ, ಧಾರವಾಡ ಹಾಗೂ ಬೆಳಗಾವಿ ಜಿಲ್ಲೆಗಳ ಮಲಪ್ರಭೆ ಅಚ್ಚುಕಟ್ಟು ಪ್ರದೇಶದ ರೈತರ ಬಾಳು ಹಸನಾಗಬೇಕೆಂದು ನೀರಾವರಿ ಸೌಲಭ್ಯ ಒದಗಿಸಲು ಮಲಪ್ರಭಾ ನದಿಗೆ ಸವದತ್ತಿ ಬಳಿಯ ನವಿಲುತೀರ್ಥದಲ್ಲಿ ಆಣೆಕಟ್ಟು ನಿರ್ಮಾಣವಾಯಿತು. ಆದರೆ ಇದಕ್ಕೆ ಪ್ರತಿಯಾಗಿ ರೈತರ ಮೇಲೆ ಸರ್ಕಾರ ಬೆಟರ್ಮೆಂಟ್ ಲೆವಿ (ಅಭಿವೃದ್ಧಿ ಕರ) ಹೇ-ರಿತು. ಕಾಲುವೆಗಳಿಗೆ ನೀರು ಹರಿಯದಿದ್ದರೂ ಕರ ತುಂಬಬೇಕಿತ್ತು. ಇದನ್ನು ಭರಿಸದೇ ಇದ್ದಾಗ ರೈತರ ಪಹಣಿ ಪತ್ರಿಕೆ ಮೇಲೆ ಸರ್ಕಾರಿ ಎಂದು ನಮೂದಿಸಿತು. ಇದರಿಂದ ಸರ್ಕಾರಿ ಸಾಲ, ವಿವಿಧ ಸೌಲಭ್ಯಗಳಿಂದ ರೈತರು ವಂಚಿತರಾಗಬೇಕಾಯಿತು. ಇದನ್ನು ವಿರೋಧಿಸಿ, ನಿರಂತರ ಹೋರಾಟ ಆರಂಭವಾಯಿತು.

ಈ ರೈತರ ಹೋರಾಟಕ್ಕೆ ಸರ್ಕಾರ ಮಣಿಯಲಿಲ್ಲ. 1980 ಜುಲೈ ತಿಂಗಳಲ್ಲಿ ನರಗುಂದದ ತಹಶೀಲ್ದಾರ್ ಕಚೇರಿ ಎದುರು ರೈತರು ಸರಣಿ ಉಪವಾಸ ಆರಂಭಿಸಿದರು. ಬೇಡಿಕೆಗೆ ಸ್ಪಂದನೇ ಸಿಗಲಿಲ್ಲ. ಹೋರಾಟ ಹಿಂಸಾರೂಪ ತಾಳಿತು. ಜುಲೈ 21ರಂದು ನಡೆದ ಧರಣಿ ಸಂದರ್ಭದಲ್ಲಿ ರೈತರು ಅಧಿಕಾರಿಗಳ ಪ್ರವೇಶ ನಿರಾಕರಿಸಿ ತಹಶೀಲ್ದಾರ್ ಕಚೇರಿ ಎದುರು ಅಡ್ಡವಾಗಿ ಮಲಗಿದರು. ಅಂದಿನ ತಹಶೀಲ್ದಾರ್ ರೈತರನ್ನು ತುಳಿದುಕೊಂಡೇ ಕಚೇರಿ ಒಳಗೆ ಹೋದರು. ಇದರಿಂದ ಆಕ್ರೋಶಗೊಂಡ ರೈತರು ತಹಶೀಲ್ದಾರ್‌ಗೆ ಥಳಿಸಿದರು. ಆಗ ಪರಿಸ್ಥಿತಿ ಕೈ ಮೀರಿದಾಗ ಪೊಲೀಸರು ಗುಂಡು ಹಾರಿಸಿದರು. ಗೋಲಿಬಾರ್ ನಡೆದ ರೈತರು ಬಲಿಯಾದರು. ಇದರಿಂದಾಗಿ ಅಂದಿನ ಗುಂಡುರಾವ್ ನೇತೃತ್ವದ ಸರ್ಕಾರ ಪತನವಾಯಿತು. ಬೆಟ-ರ್ಮೆಂಟ್ ಲೆವಿ (ಸುಧಾರಣಾ ಕರ)ರದ್ದಾಯಿತು. ಲೆವಿ ರದ್ದಾಗಿದ್ದು ಬಿಟ್ಟರೆ ಉಳಿದ ರೈತರ ಸಮಸ್ಯೆ ಮಾತ್ರ ಹಾಗೆ ಉಳಿದಿವೆ ಎಂದು ಬೇಸರ ವ್ಯಕ್ತಪಡಿಸಿದರು.

ಇದೇ ವೇಳೆ ಹುತಾತ್ಮರಾದ ರೈತ-ರಿಗೆ ಶ್ರದ್ಧಾಂಜಲಿ ಅರ್ಪಿಸಲಾಯಿತು. ಈ ಸಂದರ್ಭದಲ್ಲಿ ನಾಗಪ್ಪ ಬೋಳನ್ನವರ, ಜಗದೀಶ ಬೋಳನ್ನವರ, ಅನೀಲ ಗೀರನ್ನವರ, ಸೋಮು ಮೂಲಿಮನಿ, ಮಡಿವಾಳಪ್ಪ ಚಿಕ್ಕೊಪ್ಪ, ಅದೃಶ್ಯಪ್ಪ ಹುಚ್ಚನ್ನವರ, ಮಡಿವಾಳಪ್ಪ ಬುಡಶೆಟ್ಟಿ, ಶಂಕರಗೌಡ ಪಾಟೀಲ, ಅಜ್ಜು ಹುರುಳಿ, ಪ್ರಶಾಂತ ಮಾಕಿ, ಬಸವರಾಜ ಜಂಬಗಿ, ಮಹೇಶ ಬೋಳನ್ನವರ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

## ಬೆಳಗಾವಿ ವಾಣಿಜ್ಯೋದ್ಯಮ ಸಂಘಕ್ಕೆ 10 ಜನರು ಅವಿರೋಧ ಆಯ್ಕೆ



ಬೆಳಗಾವಿ : ಬೆಳಗಾವಿ ವಾಣಿಜ್ಯೋದ್ಯಮ ಸಂಘದ (ಚೆಂಬರ್ ಆಫ್ ಕಾಮರ್ಸ್ ಆಯಂಡ್ ಇಂಡಸ್ಟ್ರೀಸ್) ಆಡಳಿತ ಮಂಡಳಿಗೆ 10 ಜನರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಟ್ರೇಡ್ ಸೆಕ್ಟರ್ ನ ಆಜೀವ ಸದಸ್ಯರ 5 ಸ್ಥಾನ ಮತ್ತು ಸಾಮಾನ್ಯ ಸದಸ್ಯರ ಒಂದು ಸ್ಥಾನಕ್ಕೆ, ಇಂ-ಡಸ್ಟ್ರೀಯಲ್ ಸೆಕ್ಟರ್ ನ ಆಜೀವ ಸದಸ್ಯರ 3 ಸ್ಥಾನ ಮತ್ತು ಸಾಮಾನ್ಯ ಸದಸ್ಯರ 1 ಸ್ಥಾನಕ್ಕೆ ಚುನಾವಣೆ ಘೋಷಣೆಯಾಗಿತ್ತು.

ಒಟ್ಟೂ 12 ಜನರು ನಾಮಪತ್ರ ಸಲ್ಲಿಸಿದ್ದರು. ಸೋಮವಾರ ನಾಮಪತ್ರಗಳನ್ನು ಹಿಂದಕ್ಕೆ ಪಡೆಯಲು ಅಂತಿಮ ದಿನವಾಗಿತ್ತು. ಟ್ರೇಡ್ ಸೆಕ್ಟರ್ ನ ಓರ್ವ ಹಾಗೂ ಇಂಡಸ್ಟ್ರಿಯಲ್ ಸೆಕ್ಟರ್ ನ ಓರ್ವ ಅಭ್ಯರ್ಥಿ ನಾಮಪತ್ರ ಹಿಂದಕ್ಕೆ ಪಡೆದಿದ್ದರಿಂದ ಉಳಿದವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾಧಿಕಾರಗಳು ಪ್ರಕಟಿಸಿದರು.

ಎಂ.ಕೆ.ಹೆಗಡೆ, ಅಪ್ಪಾಸಾಹೇಬ ಗುರವ್, ರೋಹಿತ್ ಕಪಾಡಿಯಾ, ಸಚಿನ್ ಹಂಗಿರಗೇಕರ್, ವಿಜಯ ದರಗಶೆಟ್ಟಿ ಟ್ರೇಡಿಂಗ್ ಸೆಕ್ಟರ್ ನ ಆಜೀವ ಸದಸ್ಯ ಕ್ಷೇತ್ರಕ್ಕೆ ಅವಿರೋಧವಾಗಿ ಆಯ್ಕೆಯಾದರು.

ಇಂಡಸ್ಟ್ರಿಯಲ್ ಸೆಕ್ಟರ್ ನ ಆಜೀವ ಸದಸ್ಯ ಕ್ಷೇತ್ರಕ್ಕೆ ದಯಾನಂದ ನೇತಲಕರ್, ಸಚಿನ್ ಸಬ್ನಿಸ್, ವಿನಿತ್ ಹರಕುಣಿ ಆಯ್ಕೆಯಾದರು. ಟ್ರೇಡ್ ಸೆಕ್ಟರ್ ನ ಸಾಮಾನ್ಯ ಕ್ಷೇತ್ರಕ್ಕೆ ಸುಧೀರ್ ಚೌಗಲೆ ಮತ್ತು ಇಂ-ಡಸ್ಟ್ರಿಯಲ್ ಸೆಕ್ಟರ್ ನ ಸಾಮಾನ್ಯ ಕ್ಷೇತ್ರಕ್ಕೆ ಬಸವರಾಜ ರಾಮಪುರೆ ಆಯ್ಕೆಯಾದರು.

ಟ್ರೇಡಿಂಗ್ ಸೆಕ್ಟರ್ ಗೆ ಪ್ರವೀಣ ರಂಗೋಲೆ ಮತ್ತು ಇಂಡಸ್ಟ್ರಿಯಲ್ ಸೆಕ್ಟರ್ ಗೆ ಪ್ರವೀಣ ಪರಮಶೆಟ್ಟಿ ಚುನಾವಣಾಧಿಕಾರಿಗಳಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

## ಪಂಚಮಸಾಲಿ ಶ್ರೀಗಳನ್ನು ತುಳಿಯುವ ವ್ಯವಸ್ಥಿತ ಹುನ್ನಾರ ನಡೆಯುತ್ತಿದೆ- ನಿಂಗಪ್ಪ ಪಿರೋಜಿ



ರಾಮದುರ್ಗ : ಸಮಾಜ ಮಕ್ಕಳ ವ್ಯಾಸಂಗಕ್ಕಾಗಿ ಮೀಸಲಾತಿಗೆ ಪಕ್ಷಾತೀತ ಹೋರಾಟ ಮಾಡುತ್ತಿರುವ ಕೂಡಲ ಸಂಗಮ ಪಂಚಮಸಾಲಿ ಪೀಠದ ಶ್ರೀ ಜಯ ಮೃತ್ಯುಂಜಯ ಮಹಾಸ್ವಾಮಿಗಳನ್ನು ತುಳಿಯುವ ವ್ಯವಸ್ಥಿತ ಹುನ್ನಾರ ನಡೆದಿದೆ. ಶ್ರೀಗಳ ಜೊತೆಗೆ ಇಡೀ ಪಂಚಮಸಾಲಿ ಸಮಾಜವಿದೆ. ಶ್ರೀಗಳು ಯಾವುದೇ ಕಾರಣ-ಕ್ಕೂ ದೃತಿಗೆಡಬಾರದು ಎಂದು ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ನಿಂಗಪ್ಪ ಪಿರೋಜಿ ಹೇಳಿದರು.

ಪಟ್ಟಣದ ತುರನೂರ ಸಮೀಪದ ಶ್ರೀ ವಿಶ್ವೇಶ್ವರಯ್ಯ ಕಲ್ಯಾಣ ಮಂಟಪದಲ್ಲಿ ಭಾನುವಾರ ಲಿಂಗಾಯತ ಪಂಚಮಸಾಲಿ ಸಮಾಜದ ನೇತೃತ್ವದಲ್ಲಿ ಸಮಾಜದ ಪ್ರತಿಭಾವಂತ ಮಕ್ಕಳಿಗೆ ಏರ್ಪಡಿಸಿದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಮಾಜದ ಹೆಸರು ಹೇಳಿಕೊಂಡು ತಮ್ಮ ರಾಜಕೀಯ ಬೆಳೆ ಬೆಯಿಸಿಕೊಳ್ಳುತ್ತಿರುವ ಕೆಲ ಕುತಂತ್ರಿ ರಾಜಕಾರಣಿಗಳಿಗೆ ಮೀಸಲಾತಿಗಾಗಿ ಪಕ್ಷಾತೀತವಾಗಿ ಬೆಂಬಲ ನೀಡುತ್ತಿರುವ ಸಮಾಜದ ಬಡವರ ಶಾಪ ತಟ್ಟದೇ ಹೋಗುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ ಅವರು, ನ್ಯಾಯಯುತವಾಗಿ ಪಂಚಮಸಾಲಿ ಬಡವರ ಮಕ್ಕಳ ವ್ಯಾಸಂಗ ಹಾಗೂ ಸರಕಾರಿ ಸೇವೆ ಪಡೆಯಲು ಮೀಸಲಾತಿಗೆ ನಡೆಯುತ್ತಿರುವ ಹೋರಾಟಕ್ಕೆ ಸರ್ವ ರಾಮದುರ್ಗ ತಾಲೂಕಿನ ಸಮಾಜ ಬಾಂಧವರು ಬೆಂಬಲಿಸಬೇಕು ಎಂದು ಹೇಳಿದರು.

ನ್ಯಾಯವಾದಿ ಎಫ್.ಎಸ್. ಸಿದ್ದನಗೌಡರ ಮಾತನಾಡಿ, ಕೊಡುಗೆ ದಾನಿಯಾಗಿರುವ ಪಂಚಮಸಾಲಿ ಸಮಾಜದವನ್ನು ತುಳಿದು ಕೆಲ ರಾಜಕಾರಣಿಗಳು ತಮ್ಮ ಬೆಳೆ ಬೆಯಿಸಿಕೊಂಡಿದ್ದಾರೆ. ಸಮಾಜ ಬಾಂಧವರು ಸೂಕ್ಷ್ಮವಾಗಿ ಗಮನಿಸಿ, ಅಂತವ-ರಿಗೆ ಭವಿಷ್ಯದಲ್ಲಿ ತಕ್ಕ ಪಾಠ ಕಲಿಸಬೇಕು. ಮಕ್ಕಳ ವ್ಯಾಸಂಗದ ಜೊತೆಗೆ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಸರ್ವರು ಕೈ ಜೋಡಿಸಿದಾಗ ಮಾತ್ರ ಲಿಂಗಾಯತ ಪಂಚಮಸಾಲಿ ಸಮಾಜದ ಅಭಿವೃದ್ಧಿ ಸಾಧ್ಯವಿದೆ ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಮಾಜದ ತಾಲೂಕಾಧ್ಯಕ್ಷ ಸಿ.ಬಿ. ಪಾಟೀಲ, ಮಕ್ಕಳ ವ್ಯಾಸಂಗ ಹಾಗೂ ಸರಕಾರಿ ಸೇವೆ ಪಡೆಯಲು ಮೀಸಲಾತಿ ಅಗತ್ಯವಿದೆ. ಮೀಸಲಾತಿ ಪಡೆಯುವ ಹೋರಾಟದ ಜೊತೆಗೆ ಸಮಾಜ ಸಂಘಟನೆಗೆ ತಾಲೂಕಿನ ಸಮಸ್ತ ಸಮಾಜ ಬಾಂಧವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಶ್ರಮಿಸುತ್ತೇವೆ ಎಂದು ಭರವಸೆ ನೀಡಿದರು.

ಸವದತ್ತಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕ ಶಿವಾನಂದ ಹಾಲೋಳ್ಳಿ ಅತಿಥಿ ಉಪನ್ಯಾಸ ನೀಡಿದರು. ಸಮಾಜದ ಟ್ರಸ್ಟ್ ಕಾರ್ಯದರ್ಶಿ ಎನ್.ಬಿ. ದಂಡಿನದುರ್ಗಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಇದೇ ಸಂದರ್ಭದಲ್ಲಿ ಎಸ್ಎಸ್ಎಸ್ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಶೇಕಡಾ 90ಕ್ಕಿಂತ ಅಧಿಕ ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳನ್ನು, ವೈಧ್ಯಕೀಯ ವ್ಯಾಸಂಗಕ್ಕೆ ಮತ್ತು ನವೋದಯ ವಸತಿ ಶಾಲೆಗೆ ಆಯ್ಕೆಯಾದವರನ್ನು ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ವೀರರಾಣಿ ಚೆನ್ನಮ್ಮ ಪಂಚಮಸಾಲಿ ಕ್ಷೇಮಾಭಿವೃದ್ಧಿ ಸಂಸ್ಥೆಯ ಅಧ್ಯಕ್ಷ ಭೀಮಪ್ಪ ಬಸಿಡೋಣಿ, ಸಮಾಜದ ಮುಖಂಡರಾದ ವೈ.ಎಚ್. ಪಾಟೀಲ, ಪಿ.ಎಫ್. ಪಾಟೀಲ, ಪರುತಗೌಡ ಪಾಟೀಲ, ಎನ್.ಎನ್. ದೇಸಾಯಿ, ಸಂಗನಗೌಡ ಪಾಟೀಲ, ಮಾರುತಿ ಕೊಪ್ಪದ, ಬಾಳಪ್ಪ ಹಂಜಿ, ಬಿ.ಎಸ್. ಬೆಳವಣಕಿ, ಡಾ.ಬಿ.ಎನ್. ಮಾದನ್ನವರ, ಚನ್ನಪ್ಪ ನವಲಗುಂದ, ಜಿ.ವ್ಹಿ. ನಾಡಗೌಡ್ರ, ಐ.ವೈ. ಪವಾಡಿಗೌಡ್ರ, ಸಿದ್ದನಗೌಡ ಧನರನಗೌಡ್ರ, ಬಿ.ಎಸ್. ಪಾಟೀಲ, ನಿಂಗನಗೌಡ ಪಾಟೀಲ, ಬಸವರಾಜ ಕೊಪ್ಪದ, ಬಸನಗೌಡ ದ್ಯಾಮನಗೌಡ್ರ ಸೇರಿದಂತೆ ಇತರರಿದ್ದರು.

ಪತ್ರಕರ್ತ ಗೌಡಪ್ಪಗೌಡ ಪಾಟೀಲ ಸ್ವಾಗತಿಸಿದರು. ಶಿಕ್ಷಕ ಶಿವಾನಂದ ಹವಾಲ್ದಾರ ಹಾಗೂ ಎಂ.ಎಸ್. ಕಿತ್ತಲಿ ಕಾರ್ಯಕ್ರಮ ನಿರೂಪಿಸಿದರು. ಸಮಾಜದ ಕಾರ್ಯದರ್ಶಿ ಮಂಜು ನವಲಗುಂದ ವಂದಿಸಿದರು.

****




BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :143, Postal Reg No. PMG/KA/NK/BM/135/25-27 / POST AT Vantamury Colony Post Office